ಸಂಪುಟ: 05 ಸಂಚಿಕೆ: 12 ಪುಟಗಳು: 08 ಬುಧವಾರ 26 ಮಾರ್ಚ್ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

ಚಿಕ್ಕಬಳ್ಳಾಪುರ ನಗರಸಭೆಯ 6 ಸದಸ್ಯರು ಅನರ್ಹ

• ಉದಯವಾಹಿನಿ, ಚಿಕ್ಕಬಳ್ಳಾಪುರ

ಚಿಕ್ಕಬಳ್ಳಾಪುರ ನಗರಸಭೆಯ 6 ಮಂದಿ ಕಾಂಗ್ರೇಸ್ ಸದಸ್ಯರು ಅನರ್ಹಗೊಂಡಿದ್ದಾರೆ. ಅಧ್ಯಕ್ಷ-ಉಪಾಧ್ಯಕ್ಷರ ಆಯ್ಕೆ ಚುನಾವಣೆಯಲ್ಲಿ ಅಡ್ಡಮತದಾನ ಮಾಡಿದ್ದ ಕಾಂಗ್ರೇಸ್‌ನ ಆರು ಸದಸ್ಯರನ್ನು ಅನರ್ಹಗೊಳಿಸಿ ಜಿಲ್ಲಾಧಿಕಾರಿಗಳ ನ್ಯಾಯಾಲದ ಆದೇಶ ಹೊರಡಿಸಿದೆ. ಈ ಮೂಲಕ ಶಾಸಕ ಪ್ರದೀಪ್ ಈಶ್ವರ್‌ಬಿಜೆಪಿ ಸಂಸದ ಸುಧಾಕರ್ ವಿರುದ್ಧ ಸೇಡು ತೀರಿಸಿಕೊಂಡಿದ್ದಾರೆ. ಪ್ರದೀಪ್ ಈಶ್ವರ್ ಹಾಗೂ ಸುಧಾಕರ್ ನಡುವೆ ಪ್ರತಿಷ್ಠೆಯಾಗಿದ್ದ ಚಿಕ್ಕಬಳ್ಳಾಪುರ ನಗರಸಭಾ ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಚುನಾವಣೆ ಮುಗಿದು ಹೋಗಿದೆ. ಸುಧಾಕರ್ ಬೆಂಬಲಿತರೇ ಅಧ್ಯಕ್ಷ-ಉಧ್ಯಾಕ್ಷರಾಗಿ ಆಯ್ಕೆಯಾಗಿದ್ದಾರೆ. ಕಾಂಗ್ರೇಸ್ ನವರೇ ಅಡ್ಡಮತದಾನ ಮಾಡುವ ಮೂಲಕ ಸುಧಾಕರ್ ಬೆಂಬಲಿತರೇ ಅಧ್ಯಕ್ಷ-ಉಪಾಧ್ಯಕ್ಷರಾಗಿಯೂ ಆಯ್ಕೆಯಾಗಿದ್ದರು. ಇದೀಗ ಅಡ್ಡಮತದಾನ ಮಾಡಿದವರನ್ನು ಅನರ್ಹಗೊಳ್ಳುವಂತೆ ಮಾಡುವಲ್ಲಿ ಪ್ರದೀಪ್ ಈಶ್ವರ್ ಯಶಸ್ವಿಯಾಗಿದ್ದಾರೆ. ಸೆಪ್ಟೆಂಬರ್ 12 , 2024. ಚಿಕ್ಕಬಳ್ಳಾಪುರ ನಗರಸಭೆಯ ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಚುನಾವಣೆ ನಡೆದಿತ್ತು. ಆ ಚುನಾವಣೆಯಲ್ಲಿ ಶಾಸಕ ಪ್ರದೀಪ್ ಈಶ್ವರ್ ಹಾಗೂ ಸಂಸದ ಡಾ ಕೆ ಸುಧಾಕರ್ ಇಬ್ಬರು ಸಹ ಚಿಕ್ಕಬಳ್ಳಾಪುರ ನಗರಸಭೆಯ ಗದ್ದುಗೆ ಹಿಡಿಯಬೇಕು, ತಮ್ಮದೇ ಬೆಂಬಲಿಗರು ಅಧ್ಯಕ್ಷ ಉಪಾಧ್ಯಕ್ಷರಾಗಬೇಕು ಎಂದು ಪಟ್ಟು ಹಿಡಿದು ಜಿದ್ದಾಜಿದ್ದಿಗೆ ಬಿದ್ದಿದ್ದರು. ಕೊನೆಗೆ ಕಾಂಗ್ರೇಸ್‌ನ 06 ಜನ ಸದಸ್ಯರೇ ಬಿಜೆಪಿ ಅಭ್ಯರ್ಥಿಗಳ ಪರ ಮತ ಚಲಾವಣೆ ಮಾಡಿ ಸಂಸದ ಸುಧಾಕರ್ ಬೆಂಬಲಿಗರ ಗೆಲುವಿಗೆ ಜೈಕಾರ ಹಾಕಿದ್ದರು. ಇದರಿಂದ ಕೆರಳಿದ ಶಾಸಕ ಪ್ರದೀಪ್ ಈಶ್ವರ್, ಜಿಲ್ಲಾಧಿಕಾರಿಗಳ ನ್ಯಾಯಾಲಯದ ಮೊರೆ ಹೋಗಿದ್ದು, ವಿಪ್ ಜಾರಿ ಮಾಡಿದ್ದರೂ ಸಹ ಅಡ್ಡಮತದಾನ ಮಾಡಿದ್ದಾರೆ. ಈ ಮೂಲಕ ವಿಪ್ ಉಲ್ಲಂಘನೆ ಮಾಡಿದ್ದು, ಇವರನ್ನು ಸದಸ್ಯತ್ವದಿಂದ ಅನರ್ಹಗೊಳಿಸಬೇಕೆಂದು ಮನವಿ ಮಾಡಿದ್ದರು.

ಬಿಎಂಟಿಸಿ ಹೊಸ ಮಾರ್ಗಗಳಲ್ಲಿ ಮೆಟ್ರೋ ಫೀಡರ್ ಬಸ್ ಆರಂಭ

• ಉದಯವಾಹಿನಿ, ಬೆಂಗಳೂರು

ಬಿಎಂಟಿಸಿ ವತಿಯಿಂದ ನಮ್ಮ ಮೆಟ್ರೋ ಪ್ರಯಾಣಿಕರ ಅನುಕೂಲಕ್ಕಾಗಿ ಹೊಸ ಮಾರ್ಗದಲ್ಲಿ ಬಸ್ ಸೇವೆ ಆರಂಭಿಸಲಾಗಿದೆ. ಈ ಬಸ್ ಕೋಣನಕುಂಟೆ ಕ್ರಾಸ್ ಮೆಟ್ರೋ ಸ್ಟೇಷನ್‌ನಿಂದ ನಾಯಂಡಳ್ಳಿ ಜಂಕ್ಷನ್ ನಡುವೆ ಸಂಚಾರ ನಡೆಸಲಿದೆ. ಈ ಬಗ್ಗೆ ಬಿಎಂಟಿಸಿಯಿಂದ ಮಾಹಿತಿ ನೀಡಲಾಗಿದ್ದು, ಪ್ರಯಾಣಿಕರ ಅನುಕೂಲಕ್ಕಾಗಿ ಹವಾನಿಯಂತ್ರಣ ರಹಿತ ಸೇವೆಯಲ್ಲಿ ನೂತನ ಮೆಟ್ರೋ ಫೀಡರ್ ಮಾರ್ಗವನ್ನು ಮಾರ್ಚ್ 24 ರಿಂದ ಪರಿಚಯಿಸಲಾಗಿದೆ. ಪ್ರಯಾಣಿಕರು ಈ ಸೇವೆಯನ್ನು ಬಳಸಿಕೊಳ್ಳಬೇಕು ಎಂದು ಕೋರಲಾಗಿದೆ. ಬಿಎಂಟಿಸಿಯ ಬಸ್ ಗಳು ರಸ್ತೆ ಮಧ್ಯದಲ್ಲಿಕೆಟ್ಟು ನಿಂತಾಗ ತಕ್ಷಣಕ್ಕೆ ಬಂದು ಸಮಸ್ಯೆ ನಿವಾರಣೆ ಮಾಡಬಲ್ಲಐದು 'ಸಂಚಾರ ದುರಸ್ತಿ ವ್ಯಾನ್'ಗಳಿಗೆ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಸೋಮವಾರ ಚಾಲನೆ ನೀಡಿದರು. ನಂತರ ಮಾತನಾಡಿದ ಅವರು, 'ದಿನದಿಂದ ದಿನಕ್ಕೆ ನಗರದಲ್ಲಿ ಸಂಚಾರ ದಟ್ಟಣೆ ಹೆಚ್ಚಾಗುತ್ತಲೇ ಇದೆ. ಇಂತಹ ಸಂದರ್ಭದಲ್ಲಿ ಅಪಘಾತ ಅಥವಾ ಇತರೆ ಕಾರಣಗಳಿಂದ ಬಸ್‌ನಲ್ಲಿಉಂಟಾಗುವ ಸಣ್ಣ ಸಮಸ್ಯೆಯಿಂದ ವಾಹನಗಳು ಸಾಲುಗಟ್ಟಿ ನಿಂತರೆ ಸಂಚಾರ ದಟ್ಟಣೆಗೆ ಕಾರಣವಾಗುತ್ತದೆ. ಇದರಿಂದ ವಾಹನ ಸವಾರರು, ನಾಗರಿಕರು ಸಂಕಷ್ಟ ಎದುರಿಸಬೇಕಾಗುತ್ತದೆ. ಇಂತಹ ಸಮಯದಲ್ಲಿ ತ್ವರಿತವಾಗಿ ಬಸ್ ದುರಸ್ತಿ ಮಾಡಲು ಈಗಾಗಲೇ ಎರಡು ವಾಹನಗಳಿವೆ.

ಎಸ್‌ಎಸ್‌ಎಲ್‌ಸಿ, ಪಿಯುಸಿ ನಕಲಿ ಅಂಕಪಟ್ಟಿ ಜಾಲ ಪತ್ತೆ

• ಉದಯವಾಹಿನಿ, ಬೆಂಗಳೂರು

ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ತತ್ಸಮಾನ ಎಂದು ನಮೂದಿಸಿ ನೀಡುತ್ತಿದ್ದ ನಕಲಿ ಅಂಕಪಟ್ಟಿ ಜಾಲವನ್ನು ಪತ್ತೆ ಹಚ್ಚಿರುವ ಸಿಸಿಬಿ ಪೊಲೀಸರು ಮೂವರು ವಂಚಕರನ್ನು ಬಂಧಿಸಿದ್ದಾರೆ. ದಾರವಾಡದ ಪ್ರಶಾಂತ್ ಗುಂಡುಮಿ(41), ಬನಶಂಕರಿ ಮೂರನೇ ಹಂತ ಶ್ರೀನಿವಾಸ್ ನಗರದ ಮೊನಿಷ್(26) ಮತ್ತು ಗದಗ ಜಿಲ್ಲೆಯ ಲಕ್ಷ್ಮೇಶ್ವರ ಸಿಟಿ ರಾಜಶೇಖರ್ ಎಚ್. ಬಳ್ಳಾರಿ(41) ಬಂಧಿತ ಆರೋಪಿಗಳು. ಹೆಚ್ಚಿನ ಹಣ ಸಂಪಾದನೆ ಮಾಡುವ ದುರುದ್ದೇಶ ದಿಂದ ದೂರಶಿಕ್ಷಣದ ಮೂಲಕ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಗೆ ದಾಖಲಾಗುವ ವಿದ್ಯಾರ್ಥಿಗಳಿಗೆ ನಮ ಅಕಾಡೆಮಿಯು ಮಾನ್ಯತೆ ಪಡೆದ ಶಿಕ್ಷಣ ಸಂಸ್ಥೆ ಎಂದು ನಂಬಿಸಿ, ಒಬ್ಬೊಬ್ಬರಿಂದಲೂ 5 ರಿಂದ 10 ಸಾವಿರ ರೂ. ಪಡೆದು, ಸುಮಾರು 350 ಕ್ಕೂ ಹೆಚ್ಚು ನಕಲಿ ಅಂಕಪಟ್ಟಿಗಳನ್ನು ಆರೋಪಿಗಳು ವಿತರಣೆ ಮಾಡುತ್ತಿದ್ದರು ಎಂಬುವುದು ಪೊಲೀಸರ ತನಿಖೆಯಿಂದ ಗೊತ್ತಾಗಿದೆ. ಬನಶಂಕರಿಯಲ್ಲಿ ಅಕಾ ಡೆಮಿ ನಡೆಸುತ್ತಿದ್ದ ಮಾಲೀಕ ಹಾಗೂ ದಾರವಾಡ ಇಬ್ಬರು ವಂಚಕರನ್ನು ಬಂಧಿಸಿ ಹೆಚ್ಚಿನ ವಿಚಾರಣೆಗೆ ಒಳಪಡಿಸಲಾಗಿದೆ. ಈ ನಕಲಿ ಅಂಕಪಟ್ಟಿಯನ್ನು ಸಾರಿಗೆ ಇಲಾಖೆ ಹಾಗೂ ಶಿಶು ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗೆ ನೀಡಿ ಕೆಲವರು ಉದ್ಯೋಗ ಪಡೆದುಕೊಂಡಿದ್ದಾರೆಂದು ಪೊಲೀಸರ ತನಿಖೆಯಿಂದ ತಿಳಿದು ಬಂದಿದೆ.



ಹನಿಟ್ರ್ಯಾಪ್ ಜೋರು ರಾಜಣ್ಣ ದೂರು

1 ಹನಿಟ್ರ್ಯಾಪ್ : ಗೃಹ ಸಚಿವರಿಗೆ ದೂರು ನೀಡಿದ ಸಚಿವ ಕೆ ಎನ್ ರಾಜಣ್ಣ

2 ಪೋಟೋ ತೋರಿಸಿದ್ರೆ ಗುರುತು ಹಿಡಿಯುತ್ತೇನೆ : ಕೆ ಎನ್ ರಾಜಣ್ಣ

3 ಯಾರು ಬಂದು ಹೋಗಿರ್ತಾರೆ ಅವರ ಮೇಲೆ ಕ್ರಮ ಕೈಗೊಳ್ಳುವಂತೆ ಕೇಳಿಕೊಂಡಿದ್ದೇನೆ

• ಉದಯವಾಹಿನಿ, ಬೆಂಗಳೂರು

ಕರ್ನಾಟಕದಲ್ಲಿ ಮಾತ್ರವಲ್ಲ ರಾಷ್ಟ್ರಮಟ್ಟದಲ್ಲಿ ಚರ್ಚೆಯಾಗುತ್ತಿರುವ ಸಚಿವ ಕೆಎನ್ ರಾಜಣ್ಣ ಆರೋಪಿಸಿರುವ ಹನಿಟ್ರ್ಯಾಪ್ ಪ್ರಕರಣಕ್ಕೆ ಸಂಬಂಧಿಸಿದಂತೆ ಅವರು ಅಂತಿಮವಾಗಿ ದೂರು ನೀಡಿದ್ದಾರೆ. ಹನಿಟ್ರ್ಯಾಪ್ ಯತ್ನ ನಡೆದಿರುವ ಬಗ್ಗೆ ಸದನದಲ್ಲೇ ರಾಜಣ್ಣ ಬಹಿರಂಗ ಪಡಿಸಿದ್ದರೂ ಸಹ ಇಲ್ಲಿಯವರೆಗೆ ಯಾವುದೇ ದೂರು ನೀಡಿರಲಿಲ್ಲ, ಆದ್ರೆ, ಇದೀಗ ಅಂತಿಮವಾಗಿ ಮಂಗಳವಾರ ಬೆಂಗಳೂರಿನ ಸದಾಶಿವನಗರದಲ್ಲಿರುವ ಗೃಹ ಸಚಿವ ಅವರ ನಿವಾಸಕ್ಕೆ ಭೇಟಿ ನೀಡಿ ಡಾ. ಜಿ ಪರಮೇಶ್ವರ್ ಅವರಿಗೆ ಅಧಿಕೃತವಾಗಿ ದೂರು ನೀಡಿದ್ದಾರೆ. ಹೀಗಾಗಿ ಈಗ ಗೃಹ ಸಚಿವರು ಈ ಪ್ರಕರಣವನ್ನು ಯಾವ ತನಿಖೆಗೆ ಆದೇಶಿಸುತ್ತಾರೆ ಎನ್ನುವುದೇ ಕುತೂಹಲಕ್ಕೆ ಕಾರಣವಾಗಿದೆ. ಇನ್ನು ಹನಿಟ್ರ್ಯಾಪ್ ಬಗ್ಗೆ ಕೆಲವು ಸುಳಿವನ್ನ ಬಿಟ್ಟುಕೊಟ್ಟಿರುವ ರಾಜಣ್ಣ ದೂರು ನೀಡಬೇಕೆಂದು ತೀರ್ಮಾನ ಮಾಡಿದ್ದರು. ಗೃಹ ಸಚಿವ ಪರಮೇಶ್ವರ್ ಎಲ್ಲೇ ಇದ್ದರೂ ಹುಡುಕಿಕೊಂಡು ಹೋಗಿ ದೂರು ಕೊಡುತ್ತೇನೆ ಎಂದು ಹೇಳಿದ್ದರು. ಹೇಳಿದಂತೆಯೇ ರಾಜಣ್ಣ ನೆಲಮಂಗಲದಲ್ಲಿದ್ದ ಪರಮೇಶ್ವರ್‌ರನ್ನ ಹುಡುಕಿಕೊಂಡು ಹೋಗಿದ್ದರು. ಆದ್ರೆ, ಇಲ್ಲಿ ಬೇಡ ಸದಾಶಿವನಗರದ ನಿವಾಸಕ್ಕೆ ಬನ್ನಿ ಎಂದು ಪರಮೇಶ್ವರ್ ಹೇಳಿ ಕಳುಹಿಸಿದ್ದರು. ಅದರಂತೆ ಇದೀಗ ರಾಜಣ್ಣ ಪರಮೇಶ್ವರ್ ಅವರ ನಿವಾಸಕ್ಕೆ ಭೇಟಿ ನೀಡಿ ದೂರು ನೀಡಿದ್ದಾರೆ.

ಮನವಿ ಸ್ವೀಕರಿಸಿದ ಗೃಹ ಸಚಿವ ಹೇಳಿದ್ದೇನು..: ಇನ್ನು ಈ ಬಗ್ಗೆ ಗೃಹ ಸಚಿವ ಡಾ. ಜಿ ಪರಮೇಶ್ವರ್ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿ, ಸದನದಲ್ಲಿ ಹನಿಟ್ರ್ಯಾಪ್ ಆಗಿದೆ ಅಂತ ಚರ್ಚೆಗೆ ಬಂದಾಗ ಸಹಕಾರಿ ಸಚಿವ ರಾಜಣ್ಣನವರು ನನ್ನ ಮೇಲೂ ಪ್ರಯತ್ನ ಆಗಿದೆ ಎಂದು ಸರ್ಕಾರ, ಹಾಗೂ ಗೃಹ ಸಚಿವರಿಗೆ ಮನವಿ ಕೊಡುತ್ತೇನೆ ಎಂದು ಹೇಳಿದ್ದರು. ಇದು ನಿಜಾ ಆಗಿದ್ರೆ ಉನ್ನತ ಮಟ್ಟದ ತನಿಖೆ ಮಾಡುವುದಾಗಿ ಹೇಳಿದ್ದೆ. ಆದ್ರೆ, ರಾಜಣ್ಣ ಅವರಿಗೆ ಪೂರ್ವ ನಿಯೋಜಿತ ಕೆಲಸದ ನಡುವೆ ದೂರು ಕೊಡಲು ಆಗಲಿಲ್ಲ. ಇಂದು ನನಗೆ ಮನವಿ ಕೊಟ್ಟಿದ್ದಾರೆ. ವಿಧಾನಸಭೆಯಲ್ಲ ಪ್ರಸ್ತಾಪಿಸಿದಂತೆ ಮನವಿ ಕೊಟ್ಟಿದ್ದು, ಮುಂದಿನ ಕ್ರಮದ ಬಗ್ಗೆ ಸಿಎಂ ಜೊತೆ ಚರ್ಚೆ ಮಾಡುತ್ತೇವೆ ಎಂದು ತಿಳಿಸಿದರು.

ಹನಿಟ್ರ್ಯಾಪ್ ಪ್ರಕರಣ ಯಾವ ತನಿಖೆಗೆ...: ಬಜೆಟ್ ಮೇಲಿನ ಚರ್ಚೆ ವೇಳೆ ಸಚಿವ ರಾಜಣ್ಣ ಅವರು ಸದನದಲ್ಲೇ ತಮ್ಮ ಮೇಲೆ ಹನಿಟ್ರ್ಯಾಪ್ ಯತ್ನ ನಡೆದಿದೆ ಎಂದು ಬಹಿರಂಗಪಡಿಸಿದ್ದರು. ಇದು ರಾಜ್ಯ ರಾಜಕಾರಣದಲ್ಲಿ ಭಾರೀ ಸಂಚಲನ ಮೂಡಿಸಿತ್ತು. ರಾಜಣ್ಣ ಅವರನ್ನ ಮಧುಬಲೆಗೆ ಬೀಳಿಸಲು ಪ್ರಯತ್ನಿಸಿದವರು ಯಾರು ಈ ಹನಿಟ್ರ್ಯಾಪ್ ಯತ್ನ ಹಿಂದೆ ಯಾರ ಕೈವಾಡ ಇದೆ ಎನ್ನುವ ಬಗ್ಗೆ ಸಾಕಷ್ಟು ಚರ್ಚೆಗಳು ನಡೆಯುತ್ತಲ್ಲೇ ಇವೆ. ಈ ಬಗ್ಗೆ ಕಾಂಗ್ರೇಸ್ ನಾಯಕರಲ್ಲಿ ಆರೋಪ-ಪ್ರತ್ಯಾರೋಪಗಳ ನಡೆದಿವೆ. ಮತ್ತೊಂದೆಡೆ ಬಿಜೆಪಿ ನಾಯಕರು ಸಹ ಈ ಹನಿಟ್ರ್ಯಾಪ್ ಅನ್ನೇ ಅಸ್ತ್ರವನ್ನಾಗಿ ಮಾಡಿಕೊಂಡು ಸಿದ್ದರಾಮಯ್ಯ ಸರ್ಕಾರದ ವಿರುದ್ಧ ಮುಗಿಬಿದ್ದಿದೆ.

ಈ ಪ್ರಕರಣವನ್ನು ಉನ್ನತಮಟ್ಟದ ತನಿಖೆಗೆ ನೀಡುವಂತೆ ಪಟ್ಟು ಹಿಡಿದಿದೆ. ಹೀಗಾಗಿ ಗೃಹ ಸಚಿವ ಪರಮೇಶ್ವರ್ ಅವರೇ ಉನ್ನತ ಮಟ್ಟದ ತನಿಖೆ ಮಾಡಿಸಿವುದಾಗಿ ಸದನದಲ್ಲೇ ಘೋಷಿಸಿದ್ದರು. ಆದ್ರೆ, ರಾಜಣ್ಣ ಅವರು ದೂರು ಕೊಟ್ಟ ಕುರಿತು ಚರ್ಚಿಸಲಾಯಿತು. ಕೆಲವೇ ದಿನಗಳಲ್ಲಿ ಮತ್ತೊಂದು ಸಭೆ ನಡೆಸಲಾಗುವುದು' ಎಂದಿದ್ದಾರೆ.

ರಾಜ್ಯದ ಕೈಗಾರಿಕಾ ವಲಯವು ಮುಖ್ಯವಾಗಿ ಸೇವಾಧಾರಿತ ಚಟುವಟಿಕೆಗಳನ್ನು ಹೊಂದಿದೆ. ಇದರ ಜೊತೆಯಲ್ಲೇ ನಾವು ಸ್ಥಳೀಯವಾಗಿಯೇ ಉತ್ಪನ್ನಗಳ ತಯಾರಿಕೆಗೂ ಆದ್ಯತೆ ಕೊಡಬೇಕು. ರಾಜ್ಯದಲ್ಲಿ ಅಪಾರ ಸಂಖ್ಯೆಯಲ್ಲಿ ನವೋದ್ಯಮಗಳಿದ್ದು, ಅವುಗಳಲ್ಲಿ ಎಷ್ಟೋ ಕಂಪನಿಗಳು 250 ಕೋಟಿ ರೂ. ತನಕ ವಹಿವಾಟು ನಡೆಸುತ್ತಿವೆ. ಇವುಗಳನ್ನು ಕೂಡ ಉತ್ಪಾದನಾ ಮಂಥನದ ಭಾಗವನ್ನಾಗಿ ಮಾಡಿಕೊಳ್ಳಲಾಗುವುದು ಎಂದು ಅವರು ತಿಳಿಸಿದ್ದಾರೆ. ಹಾಗೆಯೇ, ನೆರೆಹೊರೆಯ ರಾಜ್ಯಗಳಲ್ಲೂ ಉತ್ಪಾದನಾ ವಲಯಗಳಲ್ಲಿ ನೂರಾರು ಕಂಪನಿಗಳು ಸಕ್ರಿಯವಾಗಿವೆ. ಅವುಗಳನ್ನು ಕೂಡ ಈ ಕಾರ್ಯಕ್ರಮಕ್ಕೆ ಆಹ್ವಾನಿಸಲಾಗುವುದು. ಮಂಥನದಲ್ಲಿ ಪಾಲ್ಗೊಳ್ಳಲಿರುವ ಕಂಪನಿಗಳು ರಾಜ್ಯದಲ್ಲಿ ಬಂಡವಾಳ ಹೂಡುವಂತೆ ಮಾಡಲು ಏನೇನು ಕ್ರಮ ಕೈಗೊಳ್ಳಬೇಕು ಎಂದು ಗಂಭೀರವಾಗಿ ಚಿಂತಿಸಲಾಗುತ್ತಿದೆ ಎಂದು ಅವರು ನುಡಿದಿದ್ದಾರೆ.

ಸಭೆಯಲ್ಲಿ ಪಾಲ್ಗೊಂಡಿದ್ದ ಏಕಸ್ ಕಂಪನಿಯ ಅಧ್ಯಕ್ಷ ಅರವಿಂದ ಮೆಳ್ಳಿಗೇರಿ, 'ರಾಜ್ಯದಲ್ಲಿನ ತಯಾರಿಕಾ ವಲಯವು ಗಣನೀಯ ಪ್ರಮಾಣದಲ್ಲಿ ಸುಧಾರಿಸಬೇಕಾಗಿದೆ. ನಿದರ್ಶನಕ್ಕೆ ಹೇಳುವುದಾದರೆ, ಉಕ್ಕು ತಯಾರಿಕೆಯಲ್ಲಿ ನಾವು ಮುಂಚೂಣಿಯಲ್ಲಿದ್ದರೂ ವೈಮಾನಿಕ ಎಂಜಿನ್ ತಯಾರಿಸುವಂತಹ ಉತ್ಕೃಷ್ಟ ಗುಣಮಟ್ಟ ನಮ್ಮಲ್ಲಿಲ್ಲ, ಹೀಗಾಗಿ ನಾವು ಇಂಥದ್ದಕ್ಕೆಲ್ಲ ಬೇರೆ ದೇಶಗಳನ್ನೇ ಅವಲಂಬಿಸಬೇಕಾಗಿದೆ. ಪಾಶ್ಚಾತ್ಯ ದೇಶಗಳಲ್ಲಿ ಇರುವ ಗುಣಮಟ್ಟ ನಮಗೊಂದು ಮಾದರಿಯಾಗಬೇಕು' ಎಂದು ಸಲಹೆ ನೀಡಿದ್ದಾರೆ.



ಸಿಬಿಐಗೆ ಕೊಡುವ ಅಗತ್ಯವಿಲ್ಲ

ಹನಿಟ್ರ್ಯಾಪ್ ಪ್ರಕರಣವನ್ನು ಸಿಬಿಐ ತನಿಖೆಗೆ ಕೊಡುವ ಅಗತ್ಯವೇ ಇಲ್ಲ. ನಮ್ಮಲ್ಲೇ ಉತ್ತಮ ಅಧಿಕಾರಿಗಳಿದ್ದಾರೆ ಎಂದು ಶಾಸಕ ವಿನಯ್ ಕುಲಕರ್ಣಿ ಹೇಳಿದರು. ಬೆಳಗಾವಿಯ ಕಿತ್ತೂರಿನಲ್ಲಿ ಮಾತನಾಡಿದ ಅವರು, ನಮ್ಮ ರಾಜ್ಯದಲ್ಲೇ ಹನಿಟ್ರ್ಯಾಪ್ ಪ್ರಕರಣವನ್ನು ಬೇಧಿಸುವಂತಹ ದಕ್ಷ ಅಧಿಕಾರಿಗಳಿದ್ದಾರೆ. ಬಿಜೆಪಿಯವರೇ ಹೆಚ್ಚು ಫೋನ್ ಕದ್ದಾಲಿಕೆ ಮಾಡುತ್ತಾರೆ. ಇಂದಿಗೂ ಬಿಜೆಪಿಯರು ಫೋನ್ ಕದ್ದಾಲಿಕೆ ಮಾಡುತ್ತಿದ್ದಾರೆ. ಆರ್.ಅಶೋಕ್ ಅವರ ಫೋನ್ ಕದ್ದಾಲಿಕೆ ಬಗ್ಗೆ ನನಗೆ ಗೊತ್ತಿಲ್ಲ. ನಾನು ಪ್ರವಾಸದಲ್ಲಿದ್ದೆ. ಡಿ.ಕೆ.ಶಿವಕುಮಾರ್ ಅವರು ಸಂವಿಧಾನದ ಪರ ಇದ್ದವರು. ಅವರು ಸಂವಿಧಾನಕ್ಕೆ ಎಂದಿಗೂ ವಿರುದ್ಧ ಇಲ್ಲ. ಗಾಂಧಿ ಕಾರ್ಯಕ್ರಮದಲ್ಲಿ ಅವರು ಏನು ಮಾತನಾಡಿದ್ದಾರೆ ಎಂಬುದನ್ನು ನಾವು ನೋಡಿದ್ದೇವೆ.

ಹನಿಟ್ರ್ಯಾಪ್ ಪ್ರಕರಣದಲ್ಲಿ ಮಹತ್ವದ ಬೆಳವಣಿಗೆ

ಹನಿಟ್ರ್ಯಾಪ್ ಪ್ರಕರಣಕ್ಕೆ ಸಂಬಂಧಿಸಿದಂತೆ ಸಹಕಾರ ಸಚಿವ ರಾಜಣ್ಣ ಗೃಹ ಸಚಿವ ಪರಮೇಶ್ವರ್ ಅವರಿಗೆ ಮನವಿ ನೀಡಿದ್ದಾರೆ.ತಮ್ಮ ಮೇಲೆ ಹನಿಟ್ರ್ಯಾಪ್ ಯತ್ನ ನಡೆದಿದೆ ಎಂದು ಗಂಭೀರ ಆರೋಪ ಮಾಡಿರುವ ರಾಜಣ್ಣ ಬೆಂಗಳೂರಿನಲ್ಲಿ ಗೃಹ ಸಚಿವರನ್ನು ಭೇಟಿ ಮಾಡಿ ಮಹತ್ವದ ಚರ್ಚೆ ನಡೆಸಿ ಪ್ರಕರಣದ ಕುರಿತು ಉನ್ನತಮಟ್ಟದ ತನಿಖೆ ನಡೆಸುವಂತೆ ರಾಜಣ್ಣ ಮನವಿ ಸಲ್ಲಿಸಿದರು. ಬಳಿಕ ಜಂಟಿ ಸುದ್ದಿಗೋಷ್ಠಿ ನಡೆಸಿದರು. ಮನವಿ ಸ್ವೀಕರಿಸಿದ ಬಳಿಕ ಪರಮೇಶ್ವರ್ ಮಾತನಾಡಿ, ರಾಜಣ್ಣ ಮನವಿ ನೀಡಿದ್ದಾರೆ. ಮುಖ್ಯಮಂತ್ರಿಗಳ ಜೊತೆ ಚರ್ಚೆ ನಡೆಸಿ ಯಾವ ರೀತಿ ತನಿಖೆ ನಡೆಸಬೇಕು ಎಂಬುದರ ಬಗ್ಗೆ ಚರ್ಚೆ ನಡೆಸುತ್ತೇವೆ ಎಂದು ಹೇಳಿದ್ದಾರೆ. ಈ ವಿಚಾರದಲ್ಲಿ ದೂರನ್ನು ಸ್ವೀಕರಿಸಲು ನನಗೆ ಸಾಧ್ಯವಿಲ್ಲ. ಪೊಲೀಸ್ ಠಾಣೆಯಲ್ಲೇ ದೂರು ನೀಡಬೇಕಾಗುತ್ತದೆ. ಈ ಮನವಿಯ ಆಧಾರದ ಮೇಲೆ ಕಾನೂನು ತಜ್ಞರ ಜೊತೆ ಚರ್ಚಿಸಿ, ಅವರ ಸಲಹೆ ಆಧರಿಸಿ ತೀರ್ಮಾನ ಮಾಡುತ್ತೇವೆ ಎಂದರು.ಅವರು ಮನವಿ ಕೊಟ್ಟಿದ್ದಾರೆ. ಮನವಿಯನ್ನ ನಾನು ಸ್ವೀಕಾರ ಮಾಡಿದ್ದೇನೆ. ಮನವಿ ಆಧಾರದ ಮೇಲೆ ಏನ್ ಮಾಡಬೇಕು, ಯಾರಿಗೆ ಅದನ್ನು ಕಳುಹಿಸಬೇಕು ಎಂಬುದನ್ನು ತೀರ್ಮಾನ ಮಾಡುತ್ತೇವೆ ಎಂದರು.

ಗೃಹ ಸಚಿವರನ್ನು ಭೇಟಿಯಾದ ಕೆ.ಎನ್ ರಾಜಣ್ಣ

ಜಡ್ಜ್ ಮೇಲೆ ಹನಿಟ್ರ್ಯಾಪ್ ಆಗಿದೆ ಎಂದು ನಾನು ಹೇಳಿಲ್ಲ

ಜಡ್ಜ್ ಮೇಲೆ ಹನಿಟ್ರ್ಯಾಪ್ ಆಗಿದೆ ಎಂದು ನಾನು ಹೇಳಿಲ್ಲ. ನನಗೆ ಇರುವ ಮಾಹಿತಿ ರಾಜಕಾರಣಿಗಳ ಮೇಲೆ ರಾಜಕೀಯ ದ್ವೇಷಕ್ಕಾಗಿ ಹನಿಟ್ರ್ಯಾಪ್ ಆಗಿದೆ. ನಾನು ನ್ಯಾಯಮೂರ್ತಿಗಳ ಮೇಲೆ ನಡೆದಿದೆ ಎಂದಿಲ್ಲ. ಜಡ್ಜ್‌ಗಳ ಮೇಲೆ ಹನಿಟ್ರ್ಯಾಪ್ ನಡೆದಿದೆ ಅನ್ನೋದು ಸುಳ್ಳು ವದಂತಿ ಎಂದು ಸ್ಪಷ್ಟನೆ ನೀಡಿದ್ದಾರೆ.

ದಾಖಲೆಗಳಿಲ್ಲದೇ ಪರದಾಡುತ್ತಿರುವ ರಾಜಣ್ಣ

ರಾಜಣ್ಣ ಅವರು ಈಗ ದೂರು ಏನೋ ನೀಡಿದ್ದಾರೆ. ಆದ್ರೆ, ಈ ಬಗ್ಗೆ ಸೂಕ್ತ ದಾಖಲೆಗಳು ಲಭ್ಯವಿಲ್ಲದೇ ಪರದಾಡುತ್ತಿದ್ದಾರೆ. ಏಕೆಂದರೆ ಸಚಿವರ ಸರ್ಕಾರಿ ನಿವಾಸದಲ್ಲಿ ಸಿಸಿಟಿವಿಗಳೇ ಇಲ್ಲ. ಹೀಗಾಗಿ ಹನಿಟ್ರ್ಯಾಪ್ ಗ್ಯಾಂಗ್ ಬಂದು ಹೋಗಿರುವ ಯಾವುದೇ ವಿಡಿಯೋ ಸಾಕ್ಷಿಗಳು ಇಲ್ಲ. ಹೌದುಸರ್ಕಾರಿ ನಿವಾಸದಲ್ಲೇ ಹನಿಟ್ರ್ಯಾಪ್‌ಗೆ ಯತ

ಡಿಕೆಶಿ ರಾಜೀನಾಮೆಗೆ ಆಗ್ರಹಿಸಿ ರಾಜ್ಯಾದ್ಯಂತ ಬಿಜೆಪಿ ಪ್ರತಿಭಟನೆ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಮುಸ್ಲಿಮರಿಗೆ ಶೇಕಡಾ 4 ರಷ್ಟು ಮೀಸಲಾತಿ ಕಲ್ಪಿಸಲು ಸಂವಿಧಾನ ಬದಲಾಯಿಸುವ ಕುರಿತು ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರ ಹೇಳಿಕೆ ಖಂಡಿಸಿ ಮಂಗಳವಾರ ಬಿಜೆಪಿ ರಾಜ್ಯದ ವಿವಿಧ ಭಾಗಗಳಲ್ಲಿ ಪ್ರತಿಭಟನೆ ನಡೆಸಿತು. ಆದಾಗ್ಯೂ, ಕೆಪಿಸಿಸಿ ಅಧ್ಯಕ್ಷ ಡಿಕೆ ಶಿವಕುಮಾರ್ ಅವರು ಅಂತಹ ಯಾವುದೇ ಹೇಳಿಕೆ ನೀಡಿಲ್ಲ, ತಮ್ಮ ಹೇಳಿಕೆಯನ್ನು ತಿರುಚಲಾಗಿದೆ ಎಂದು ಹೇಳಿದ್ದಾರೆ.

ಡಿಕೆ ಶಿವಕುಮಾರ್ ಅವರ ಹೇಳಿಕೆಯನ್ನು ಖಂಡಿಸಿ, ಕರ್ನಾಟಕ ಸರ್ಕಾರ ತುಷ್ಟೀಕರಣ ರಾಜಕೀಯ ಮಾಡುತ್ತಿದೆ ಎಂದು ಆರೋಪಿಸಿ ಮಂಡ್ಯ, ಚಿಕ್ಕಬಳ್ಳಾಪುರ, ಮೈಸೂರು, ಕಲಬುರಗಿಯಲ್ಲಿ ಬಿಜೆಪಿ ಕಾರ್ಯಕರ್ತರು ಇಂದು ರಾಜ್ಯದ ವಿವಿಧ ಭಾಗಗಳಲ್ಲಿ ಪ್ರತಿಭಟನೆ ನಡೆಸಿದರು. ಶಿವಕುಮಾರ್ ಅವರು ತಮ್ಮ ಹೇಳಿಕೆಗೆ ಕ್ಷಮೆಯಾಚಿಸಬೇಕು ಮತ್ತು ತಕ್ಷಣ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಬಿಜೆಪಿ ಕಾರ್ಯಕರ್ತರು ಒತ್ತಾಯಿಸಿದರು. ಬೆಂಗಳೂರಿನಲ್ಲಿ ಬಸವನಗುಡಿ, ಪದ್ಮನಾಭನಗರ, ರಾಜರಾಜೇಶ್ವರಿ ನಗರದಲ್ಲಿ ಬಿಜೆಪಿ ಪ್ರತಿಭಟನೆ ನಡೆಸಿತು. ಜೈ ಭೀಮ್ ಘೋಷಣೆಗಳನ್ನು ಕೂಗಿದ ಬಿಜೆಪಿ ಕಾರ್ಯಕರ್ತರು, ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿ, ಶಿವಕುಮಾರ್, ಕಾಂಗ್ರೇಸ್ ಪಕ್ಷವನ್ನು ದಲಿತ ವಿರೋಧಿ ಮತ್ತು ಸಂವಿಧಾನ ವಿರೋಧಿ ಎಂದು ಆರೋಪಿಸಿದರು.

ಕೇಡರ್ ಹಿರಿಯ ಐಐಎಸ್ ಅಧಿಕಾರಿ ಅಜಯ್ ಸೇರ್‌ಗೆ ಕೇಂದ್ರದಲ್ಲಿ ಉನ್ನತ ಹುದ್ದೆ

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ಕೇಡರ್‌ನ ಹಿರಿಯ ಐಐಎಸ್ ಅಧಿಕಾರಿ ಅಜಯ್ ಸೇರ್ ಅವರಿಗೆ ಕೇಂದ್ರ ಸರ್ಕಾರದಲ್ಲಿ ಉನ್ನತ ಹುದ್ದೆ ದೊರೆತಿದೆ.ಕೇಂದ್ರ ಹಣಕಾಸು ಸಚಿವಾಲಯದ ಕಾರ್ಯದರ್ಶಿಯಾಗಿ ಹಾಗೂ ಕಂದಾಯ ಕಾರ್ಯದರ್ಶಿಯಾಗಿ ಅಜಯ್ ಸೇಠ ನಿಯುಕ್ತಿಗೊಂಡಿದ್ದಾರೆ. ಇದಕ್ಕೂ ಮೊದಲು ಅವರು ಹಣಕಾಸು ಸಚಿವಾಲಯದ ಆರ್ಥಿಕ ವ್ಯವಹಾರಗಳ ಇಲಾಖೆ'ಯ ಕಾರ್ಯದರ್ಶಿಯಾಗಿ 2021ರ ಏಪ್ರಿಲ್ ನಿಂದ ಕಾರ್ಯನಿರ್ವಹಿಸುತ್ತಿದ್ದರು. ಕೇಂದ್ರ ಹಣಕಾಸು ಸಚಿವಾಲಯದ ಕಾರ್ಯದರ್ಶಿಯಾಗಿದ್ದ ತುಹಿನ್ ಕಾಂತ್ ಪಾಂಡೆ ಅವರು ಸೆಬಿ ಅಧ್ಯಕ್ಷ ಸ್ಥಾನಕ್ಕೆ ನೇಮಕವಾಗಿದ್ದರು. ಅವರ ಸ್ಥಾನವನ್ನು ಅಜಯ್ ಸೇಠ ಅಲಂಕರಿಸಿದ್ದಾರೆ. ಐಎಎಸ್ 1987ರ ಬ್ಯಾಚ್‌ನ ಕರ್ನಾಟಕ ಕೇಡರ್ ಹಿರಿಯ ಅಧಿಕಾರಿಯಾಗಿರುವ ಅಜಯ್ ಸೇತ್ ಅವರು 2018ರ ಜುಲೈನಲ್ಲಿ ಬೆಂಗಳೂರು ಮೆಟ್ರೊ ರೈಲು ನಿಗಮದ (ಬಿಎಂಆರ್‌ಸಿಎಲ್) ವ್ಯವಸ್ಥಾಪಕ ನಿರ್ದೇಶಕರಾಗಿ ಅಧಿಕಾರ ಸ್ವೀಕರಿಸಿದ್ದರು. 2021ರ ಏಪ್ರಿಲ್‌ನಲ್ಲಿ ಅವರು ಕೇಂದ್ರ ಸೇವೆಗೆ ತೆರಳಿದ್ದರು. ಬಿಎಂಆರ್‌ಸಿಎಲ್ ವ್ಯವಸ್ಥಾಪಕ ನಿರ್ದೇಶಕರಾಗಿದ್ದಾಗ ನಮ್ಮ ಮೆಟ್ರೊ ನಿರ್ಮಾಣ ಕಾರ್ಯ ವೇಗ ಪಡೆದುಕೊಳ್ಳುವಲ್ಲಿ ಸೇರ್ ಶ್ರಮಿಸಿದ್ದರು. ಕೇಂದ್ರ ಹಣಕಾಸು ಸಚಿವಾಲಯದ ಕಾರ್ಯದರ್ಶಿ ಹುದ್ದೆಯೂ ಆ ಸಚಿವಾಲಯದ ಸಚಿವರ ನಂತರದ ಆಡಳಿತಾತ್ಮಕ ಪ್ರಮುಖ ಹುದ್ದೆಯಾಗಿದೆ. ಈ ಕುರಿತು ಫಿನಾನ್ಸಿಯಲ್ ಎಕ್ಸ್‌ಪ್ರೆಸ್ ವೆಬ್‌ಸೈಟ್ ವರದಿ ಮಾಡಿದೆ.

ಸಚಿವ ಬೈರತಿ ಫೇಸ್ ಬುಕ್ ಖಾತೆ ಹ್ಯಾಕ್

• ಉದಯವಾಹಿನಿ, ಬೆಂಗಳೂರು

ಸೈಬರ್ ಕ್ರೈಂ ದುಷ್ಕರ್ಮಿಗಳ ಹಾವಳಿ ರಾಜ್ಯ ಸರ್ಕಾರದ ಸಚಿವರಿಗೂ ತಟ್ಟಿದ್ದು, ಪ್ರಮುಖ ಸಚಿವರೊಬ್ಬರ ಫೇಸ್ ಬುಕ್ ಖಾತೆ ಹ್ಯಾಕ್ ಮಾಡಲಾಗಿದೆ. ನಗರಾಭಿವೃದ್ಧಿ ಹಾಗೂ ಕೋಲಾರ ಜಿಲ್ಲಾ ಉಸ್ತುವಾರಿ ಸಚಿವ ಬೈರತಿ ಸುರೇಶ್ ಫೇಸ್ ಬುಕ್ ಖಾತೆ ಹ್ಯಾಕ್ ಮಾಡಿರುವ ಸೈಬರ್ ಕಳ್ಳರು, ಸಿಕ್ಕ ಸಿಕ್ಕ ಬಳಕೆದಾರರಿಗೆ ಸಂದೇಶ ರವಾನೆ ಮಾಡುತ್ತಿರುವ ಆರೋಪ ಕೇಳಿಬಂದಿದೆ. ಈ ಕುರಿತು ಖುದ್ದು ಸಚಿವ ಬೈರತಿ ಸುರೇಶ್ ಸೋಶಿಯಲ್ ಮೀಡಿಯಾದಲ್ಲಿ ಪೋಸ್ಟ್ ಹಂಚಿಕೊಂಡಿದ್ದು, ನನ್ನ ಫೇಸ್ ಬುಕ್ ಖಾತೆ ಹ್ಯಾಕ್ ಆಗಿದೆ. ಯಾವುದೇ ರೀತಿಯ ಮೇಸೆಜ್ ಗಳಿಗೆ ಯಾರು ಕೂಡ ಅನ್ಯತಾ ಭಾವಿಸಬೇಡಿ ಎಂದು ಸ್ಪಷ್ಟನೆ ನೀಡಿದ್ದಾರೆ. ಇನ್ನೊಂದೆಡೆ, ಫೇಸ್ ಬುಕ್‌ನಲ್ಲಿ ಬೈರತಿ ಸುರೇಶ್ ಫೇಸ್ ಬುಕ್ ಖಾತೆ ಮೂಲಕ ಕೆಟ್ಟದಾಗಿ ಕಮೆಂಟ್ ಮಾಡಲಾಗಿದೆ ಈ ಹಿನ್ನೆಲೆಯಲ್ಲಿ ಸ್ಪಷ್ಟನೆ ನೀಡಲಾಗಿದೆ.

ಮಕ್ಕಳ ಬೆಳವಣಿಗೆಗೆ ಶಾಲಾ ಪೂರ್ವ ಶಿಕ್ಷಣ ಅವಶ್ಯ

• ಉದಯವಾಹಿನಿ, ಕೆ.ಆರ್.ಪುರ,

ಮಕ್ಕಳ ಸರ್ವತೋಮುಖ ಬೆಳವಣಿಗೆಗೆ ಶಾಲಾಪೂರ್ವ ಶಿಕ್ಷಣ ಅತಿಹೆಚ್ಚು ಅವಶ್ಯಕವಾಗಿದೆ ಎಂದು ಕೆ.ಪಿಸಿಸಿ ಪ್ರಧಾನ ಕಾರ್ಯದರ್ಶಿ ಡಿ.ಕೆ.ಮೋಹನ್ ಅವರು ತಿಳಿಸಿದರು. ಕೆ.ಆರ್.ಪುರ ಕ್ಷೇತ್ರದ ಹ್ಯಾಪಿ ಚೈಲ್ಡ್ ವುಡ್ ಎಂಜಾಯ್ಮೆಂಟ್ ವಾರ್ಷಿಕೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಕಲಿಕಾ ಪೂರ್ವ ಶಾಲೆಗಳ ಅವಶ್ಯಕತೆ ಹೆಚ್ಚಾಗಿದ್ದು,ಕೌಶಲ್ಯಗಳನ್ನು ಅಭಿವೃದ್ಧಿ ಪಡಿಸುವ ನಿಟ್ಟಿನಲ್ಲಿ ಈ ಶಾಲೆಗಳು ಕಾರ್ಯನಿರ್ವಹಿಸಲಿವೆ ಇದರಿಂದ ವಿದ್ಯಾರ್ಥಿಗಳೊಂದಿಗೆ ಸ್ಪರ್ಧೆಗೆ ಹೆಚ್ಚು ಸಹಕಾರಿಯಾಗಲಿದೆ ಎಂದು ನುಡಿದರು. ಈ ಶಾಲೆಯಲ್ಲಿ ನೃತ್ಯ,ಸಂಗೀತ,ಯೋಗ,ಮಾನವೀಯ ಮೌಲ್ಯಗಳನ್ನು ಕಲಿಸುವ ನಿಟ್ಟಿನಲ್ಲಿ ಹಲವು ಪ್ರಯೋಗಗಳನ್ನು ಮಾಡುತ್ತಿದ್ದು ಇದು ಮಕ್ಕಳಿಗೆ ಹೆಚ್ಚು ಸಹಕಾರಿಯಾಗಿದೆ ಇದರಿಂದ ಶಾಲೆಗೆ ಅತ್ಯುತ್ತಮ ಕಲಿಕಾ ಪೂರ್ವ ಶಾಲೆ ಪ್ರಶಸ್ತಿ ಲಭಿಸಿದೆ ಎಂದು ಹೇಳಿದರು. ಶಾಲೆ ಮುಂದಿನ ದಿನಗಳಲ್ಲಿ ಮತ್ತಷ್ಟು ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುವ ಮೂಲಕ ಉತ್ತುಂಗಕ್ಕೇರಲಿ ಎಂದು ಹೇಳಿದರು.

ಶಾಲೆ ಸಂಸ್ಥಾಪಕ ರಂಜೀತ್ ಅವರು ಮಾತನಾಡಿ ಮಕ್ಕಳ ಸರ್ವತೋಮುಖ ಅಭಿವೃದ್ಧಿಗೆ ಪ್ರಯೋಗಿಕ ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡುತ್ತಿದ್ದು, ಮಕ್ಕಳ ಪ್ರಗತಿಗೆ ಹಲವು ಯೋಜನೆಗಳ ಮೂಲಕ ಶಿಕ್ಷಣ ನೀಡಲಾಗುವುದು ಎಂದು ತಿಳಿಸಿದರು. ಆಯೋಜಕರಾದ ಕಲ್ಕೆರೆ ಕುಮಾರಣ್ಣ,ಮಾಜಿ ಪಾಲಿಕೆ ಸದಸ್ಯ ಕಲ್ಕೆರೆ ಶ್ರೀನಿವಾಸ್ ,ಭೂನ್ಯಾಯ ಮಂಡಳಿ ಸದಸ್ಯ ಸುನೀಲ್ ಕುಮಾರ್,ಪ್ರಾಂಶುಪಾಲರಾದ ಶ್ರಾವ್ಯ ಜ್ಯೋತಿ, ಮುಖಂಡರಾದ ಸುಧನ್ವ,ರಾಮಪ್ರಸಾದ್, ಶಂಕರ್, ರಾಜು, ಪಾಪಣ್ಣ,ದಾಸರ್,ರಾಜೇಶ್,ಉಷಾ,ಪ್ರಮೀಳಾ,ಕೃಷ್ಣಪ್ಪ,ಪುನೀತ್, ವೆಂಕಟೇಶ, ಭರತ್ ಇದ್ದರು.

ಮಲ್ಟಿಪ್ಲೆಕ್ಸ್‌ಗಳಲ್ಲಿ ಸಿನಿಮಾ ಶೈಲಿಯ ಕ್ರಿಕೆಟ್ ಪ್ರದರ್ಶನ

• ಉದಯವಾಹಿನಿ, ಬೆಂಗಳೂರು

ಮಲ್ಟಿಪ್ಲೆಕ್ಸ್‌ಗಳಲ್ಲಿ ಕ್ರಿಕೆಟ್ ಪಂದ್ಯಾವಳಿಯನ್ನು ಚಲನಚಿತ್ರದಂತೆ ತೋರಿಸಲು ಪಿವಿಆರ್ ಬಿಸಿಸಿಐ ಜೊತೆ ಒಪ್ಪಂದ ಮಾಡಿಕೊಳ್ಳಲು ಯೋಜಿಸುತ್ತಿದೆ ಎಂಬ ವದಂತಿಗಳಿವೆ. ಮಲ್ಟಿಪ್ಲೆಕ್ಸ್‌ಗಳಲ್ಲಿ ಕ್ರಿಕೆಟ್ ಚಲನಚಿತ್ರದಂತೆ ತೋರಿಸುವ ಯೋಜನೆ ಇದೆ. ಭಾರತದ 30 ನಗರಗಳಲ್ಲಿ ಕ್ರಿಕೆಟ್ ಪ್ರದರ್ಶನವನ್ನು ಪ್ರಸಾರ ಮಾಡಲು ಪಿವಿಆರ್‌ಗೆ ಅನುಮತಿ ನೀಡಲಾಗಿದೆ ಮತ್ತು ಕರ್ನಾಟಕದ ಬೆಂಗಳೂರು ಮತ್ತು ಧಾರವಾಡ ಹಾಗೂ ಮಹಾರಾಷ್ಟ್ರ, ಗುಜರಾತ್ ಮತ್ತು ಹೈದರಾಬಾದ್ ಸೇರಿದಂತೆ ಹೆಚ್ಚಿನ ಸ್ಥಳಗಳಲ್ಲಿ ಇದನ್ನು ಪ್ರದರ್ಶಿಸುವ ಸಾಧ್ಯತೆಯಿದೆ ಎಂದು ಮೂಲಗಳು ತಿಳಿಸಿವೆ. ಸಿನಿಮಾ ಕಾಯ್ದೆಯ ಪ್ರಕಾರ, ಸೆನ್ಸಾರ್‌ಶಿಪ್ ಇಲ್ಲದೆ ಥಿಯೇಟರ್‌ಗಳು ಮತ್ತು ಪಿವಿಆರ್‌ಗಳಲ್ಲಿ ಏನನ್ನೂ ಪ್ರದರ್ಶಿಸಲಾಗುವುದಿಲ್ಲ. ಒಂದು ವೇಳೆ ಕ್ರಿಕೆಟ್ ತೋರಿಸಲು ಅನುಮತಿ ನೀಡಿದರೆ, ಕಷ್ಟ ಎದುರಾಗಲಿದೆ ಚಿತ್ರಮಂದಿರಗಳು ಮತ್ತು ಸಿಂಗಲ್ ಸ್ಕ್ರೀನ್‌ಗಳು ಈಗಾಗಲೇ ಪ್ರೇಕ್ಷಕರಿಲ್ಲದೆ ಸಮಸ್ಯೆಗಳನ್ನು ಎದುರಿಸುತ್ತಿವೆ. ಈಗ, ಪಿವಿಆರ್ ಭವಿಷ್ಯದಲ್ಲಿ ಕ್ರಿಕೆಟ್ ಮತ್ತು ಇತರ ಕಾರ್ಯಕ್ರಮಗಳನ್ನು ತೋರಿಸಲು ಒಪ್ಪಿಕೊಂಡರೆ, ಚಲನಚಿತ್ರಗಳಿಗೆ ಭಾರೀ ಹೊಡೆತ ಬೀಳಲಿದೆ.

ಉತ್ತಮ ಚಿತ್ರಗಳ ಕೊರತೆಯಿಂದಾಗಿ ಸಿನಿಮಾ ಮಂದಿರಗಳು ಈಗಾಗಲೇ ಸಮಸ್ಯೆಗಳನ್ನು ಎದುರಿಸುತ್ತಿವೆ, ಇದು ಸಿನಿಮಾ ಪ್ರದರ್ಶನದ ಸಂಸ್ಕೃತಿಗೆ ಉಳಿಯುತ್ತದೆಯೇ ಎಂಬ ಪ್ರಶ್ನೆಯನ್ನು ಹುಟ್ಟುಹಾಕುತ್ತದೆ.

ಬ್ರಾಹ್ಮಣ ಮಹಾಸಭಾ ಚುನಾವಣೆ ಭಾನುಪ್ರಕಾಶ್ ಶರ್ಮಾ ನಾಮಪತ್ರ ಸಲ್ಲಿಕೆ

• ಉದಯವಾಹಿನಿ, ಬೆಂಗಳೂರು

ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದ (ಎಕೆಬಿಎಂಎಸ್) ಚುನಾವಣೆ ಏಪ್ರಿಲ್ 13ರಂದು ನಡೆಯಲಿದ್ದು, ಅಧ್ಯಕ್ಷೀಯ ಅಭ್ಯರ್ಥಿ ಭಾನುಪ್ರಕಾಶ್ ಶರ್ಮಾ ಅವರು ಗಾಯತ್ರಿ ಭವನದ ಕೇಂದ್ರ ಕಚೇರಿಯಲ್ಲಿ ತಮ್ಮ ನಾಮಪತ್ರ ಸಲ್ಲಿಸಿದರು. ಇದಕ್ಕೂ ಮೊದಲು ಇಲ್ಲಿನ ಕೆ.ಆರ್.ರಸ್ತೆಯಲ್ಲಿರುವ ಉಮಾ ಮಹೇಶ್ವರ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಿದ ಅವರು, ಮಹಾಸಭಾದ ಹಾಲಿ ಅಧ್ಯಕ್ಷ ಅಶೋಕ ಹಾರನಹಳ್ಳಿ ಸಹಿತ ಇತರ ಮುಖಂಡರ ಜತೆಗೆ ಗಾಯತ್ರಿ ಭವನದ ವರೆಗೆ ಮೆರವಣಿಗೆಯಲ್ಲಿ ತೆರಳಿದರು. ಭಾನುಪ್ರಕಾಶ್ ಶರ್ಮಾ ಅವರು ಈ ಸಂದರ್ಭದಲ್ಲಿ ಮಾತನಾಡಿ, ಎಲ್ಲಾ ಬ್ರಾಹ್ಮಣರ ಪ್ರಾತಿನಿಧಿಕ ಸಂಸ್ಥೆಯಾದ ಎಕೆಬಿಎಂಎಸ್ ಮೂಲಕ ಸಮಗ್ರ ಬ್ರಾಹ್ಮಣರ ಕ್ಷೇಮಾಭಿವೃದ್ಧಿಗೆ ಶ್ರಮಿಸುವುದಾಗಿ ಭರವಸೆ ನೀಡಿದರು.'

ಮಹಾಸಭಾದ ಹಾಲಿ ಅಧ್ಯಕ್ಷ ಅಶೋಕ ಹಾರನಹಳ್ಳಿ ಅವರು ಬಹಳಷ್ಟು ಕೆಲಸ ಮಾಡಿದ್ದಾರೆ. ಬ್ರಾಹ್ಮಣರ ಹಲವು ಬೇಡಿಕೆಗಳನ್ನು ಸರ್ಕಾರದ ಗಮನಕ್ಕೆ ತರುವಲ್ಲಿ ಹಾಗೂ ಹಲವು ಪ್ರಗತಿಪರ ಕೆಲಸ ಮಾಡುವಲ್ಲಿ ಅವರು ಸಫಲರಾಗಿದ್ದಾರೆ.

ಬ್ರಾಹ್ಮಣರ ಸಮಗ್ರ ಅಭಿವೃದ್ಧಿ

ನಾನು ಸಹ ಅದೇ ಹಾದಿಯಲ್ಲಿ ಸಾಗಲಿದ್ದು, ಬ್ರಾಹ್ಮಣರ ಸಮಗ್ರ ಅಭಿವೃದ್ಧಿಯೇ ನನ್ನ ಗುರಿ, ಈ ಪ್ರಯತ್ನಕ್ಕೆ ನೀವೆಲ್ಲ ಕೈಜೋಡಿಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ ಮಾಜಿ ಅಧ್ಯಕ್ಷ ಸಚ್ಚಿದಾನಂದ ಮೂರ್ತಿ, ಮುಖಂಡರಾದ ವೈ.ಎನ್.ಶರ್ಮಾ, ಸುಧಾಕರ ಬಾಬು, ರಾಘವೇಂದ್ರ ಭಟ್ಟ, ಎಚ್.ಸಿ.ಸುರೇಶ್, ವತ್ಸಲಾನಾಗೇಶ್, ಛಾಯಾಪತಿ, ರೂಪಾ ಅಯ್ಯರ್, ಅಶ್ವತ್ಥನಾರಾಯಣ ಇತರರು ಇದ್ದರು.

ಎಚ್‌ಡಿಕೆ ವಿರುದ್ಧ ಬಲವಂತದ ಕ್ರಮ ಇಲ್ಲ: ಹೈಕೋರ್ಟ್

ಆರು ಎಕರೆ ಒತ್ತುವರಿ ಸಂಬಂಧ ಸ್ಥಳೀಯ ತಹಶೀಲ್ದಾರ್ ನೀಡಿರುವ ನೋಟಿಸ್

• ಉದಯವಾಹಿನಿ, ಬೆಂಗಳೂರು

ಬಿಡದಿಯ ಕೇತಗಾನಹಳ್ಳಿ ಬಳಿ ಸರಕಾರಿ ಜಮೀನು ಒತ್ತುವರಿ ಆರೋಪ ಸಂಬಂಧ ತಹಶೀಲ್ದಾರ್ ನೀಡಿರುವ ನೋಟಿಸ್ ಪ್ರಶ್ನಿಸಿ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಹೈಕೋರ್ಟ್ ಮೊರೆ ಹೋಗಿದ್ದಾರೆ.

ಆರು ಎಕರೆ ಒತ್ತುವರಿ ಸಂಬಂಧ ಸ್ಥಳೀಯ ತಹಶೀಲ್ದಾರ್ ನೀಡಿರುವ ನೋಟಿಸ್ ಪ್ರಶ್ನಿಸಿ ಎಚ್.ಡಿ. ಕುಮಾರಸ್ವಾಮಿ ಸಲ್ಲಿಸಿದ್ದ ಅರ್ಜಿಯು ನ್ಯಾ.ಎನ್.ಎಸ್. ಸಂಜಯಗೌಡ ಅವರಿದ್ದ ಏಕಸದಸ್ಯ ಪೀಠದ ಮುಂದೆ ವಿಚಾರಣೆಗೆ ಬಂದಿತು. ಅರ್ಜಿದಾರರ ಪರವಾಗಿ ವಾದ ಮಂಡಿಸಿದ ಹಿರಿಯ ವಕೀಲ ಉದಯ್ ಹೊಳ್ಳ, ಅಧಿಕಾರ ವ್ಯಾಪ್ತಿ ಇಲ್ಲದಿದ್ದರೂ ತಹಶೀಲ್ದಾರ್ ಅರ್ಜಿದಾರರಿಗೆ ನೋಟಿಸ್ ನೀಡಿದ್ದಾರೆ. 1985 ರಲ್ಲಿಯೇ ಕ್ರಯಪತ್ರವಾಗಿರುವ ಜಮೀನಿಗೆ ಈಗ ನೋಟಿಸ್ ನೀಡಲಾಗಿದೆ. ನ್ಯಾಯಾಂಗ ನಿಂದನೆ ಪ್ರಕರಣವನ್ನು ಸುಪ್ರೀಂಕೋರ್ಟ್‌ನಲ್ಲಿ ಪ್ರಶ್ನಿಸಲಾಗಿದೆ. ಹಾಗಾಗಿ, ತಹಶೀಲ್ದಾರ್ ನೋಟಿಸ್‌ಗೆ ತಡೆ ನೀಡಬೇಕು, ಎಂದು ಕೋರಿದರು.

ಎಚ್.ಡಿ. ಕುಮಾರಸ್ವಾಮಿ ಮತ್ತು ಅವರ ಸಂಬಂಧಿ ಡಿ.ಸಿ.ತಮ್ಮಣ್ಣ ಮತ್ತಿತರರು ಕೇತಗಾನಹಳ್ಳಿಯಲ್ಲಿ 14 ಎಕರೆ ಭೂಮಿ ಒತ್ತುವರಿ ಮಾಡಿದ್ದಾರೆಂಬ ಆರೋಪವಿದೆ. ಈ ಸಂಬಂಧ ಲೋಕಾಯುಕ್ತ ನೀಡಿದ್ದ ವರದಿ ಜಾರಿಗೊಳಿಸಲು ಹೈಕೋರ್ಟ್ ಆದೇಶ ನೀಡಿದ್ದರೂ ಅದನ್ನು ಪಾಲನೆ ಮಾಡಿಲ್ಲ ಎಂದು ಆರೋಪಿಸಿ ಸಮಾಜ ಪರಿವರ್ತನಾ ಸಮುದಾಯದ ಎಸ್.ಆರ್.ಹಿರೇಮಠ ದಾಖಲಿಸಿದ್ದ ನ್ಯಾಯಾಂಗ ನಿಂದನೆ ಅರ್ಜಿ ಪರಿಶೀಲಿಸಿದ ಹೈಕೋರ್ಟ್ ವಿಭಾಗೀಯ ಪೀಠ ಭೂಮಿ ಒತ್ತುವರಿ ತೆರವಿಗೆ ಕ್ರಮ ಕೈಗೊಳ್ಳದ ಅಧಿಕಾರಿಗಳನ್ನು ಜೈಲಿಗೆ ಕಳುಹಿಸುವುದಾಗಿ ಎಚ್ಚರಿಕೆ ನೀಡಿತ್ತು. ಆನಂತರ ಜಮೀನಿನ ಸರ್ವೆ ಕಾರ್ಯ ನಡೆಸಿದ ಸ್ಥಳೀಯ ತಹಶೀಲ್ದಾರ್, ಎಚ್‌ಡಿಕೆ ಮತ್ತಿತರರಿಗೆ ಕಾನೂನಿನ್ವಯ ನೋಟಿಸ್ ಜಾರಿಗೊಳಿಸಿದ್ದರು. ಅದನ್ನು ಪ್ರಶ್ನಿಸಿ ಎಚ್‌ಡಿಕೆ ನ್ಯಾಯಾಲಯದ ಮೆಟ್ಟಿಲೇರಿದ್ದಾರೆ.

14 ಎಕರೆ ಭೂಮಿ ಒತ್ತುವರಿ ಆರೋಪ

ವಕೀಲರ ವಾದಕ್ಕೆ ತೀವ್ರ ಆಕ್ಷೇಪ ವ್ಯಕ್ತಪಡಿಸಿದ ಎಎಜಿ ಕಿರಣ್ ರೋಣ್, 2025 ರ ತಿದ್ದುಪಡಿಯನ್ವಯ ತಹಶೀಲ್ದಾರ್‌ಗೆ ಅಧಿಕಾರವಿದೆ. ಹಾಗಾಗಿಯೇ, ನೋಟಿಸ್ ಜಾರಿಗೊಳಿಸಲಾಗಿದೆ,' ಎಂದು ವಾದ ಮಂಡಿಸಿದರು. ಅಲ್ಲದೆ, ಆ ಕುರಿತು ದಾಖಲೆ ಸಲ್ಲಿಸಲು ಕಾಲಾವಕಾಶ ಕೋರಿದರು.

ಅರ್ಜಿದಾರರ ಪರ ವಕೀಲರು, 'ತಹಶೀಲ್ದಾರ್ ನೋಟಿಸ್ ಆಧರಿಸಿ ಅರ್ಜಿದಾರರ ವಿರುದ್ಧ ಬಲವಂತದ ಕ್ರಮ ಜರುಗಿಸುವ ಸಾಧ್ಯತೆ ಇದೆ. ಹಾಗಾಗಿ, ಮಧ್ಯಂತರ ರಕ್ಷಣೆ ನೀಡಬೇಕು ಎಂದು ಕೋರಿದರು. ಅದಕ್ಕೆ ಎಎಜಿ, 'ಮಾರ್ಚ್ 27 ರವರೆಗೂ ಅರ್ಜಿದಾರರ ವಿರುದ್ಧ ಯಾವುದೇ ವಿಧವಾದ ಬಲವಂತದ ಕ್ರಮ ಕೈಗೊಳ್ಳುವುದಿಲ್ಲ, ಎಂದು ಹೇಳಿದರು. ಆ ಹೇಳಿಕೆಯನ್ನು ದಾಖಲಿಸಿಕೊಂಡ ನ್ಯಾಯಾಲಯ ವಿಚಾರಣೆಯನ್ನು ಮಾರ್ಚ್ 27ಕ್ಕೆ ನಿಗದಿಪಡಿಸಿತು.

ಮರಗಳಿಗೆ ಕಿಡಿಗೇಡಿಗಳಿಂದ ಬೆಂಕಿ

• ಉದಯವಾಹಿನಿ, ರಾಜರಾಜೇಶ್ವರಿನಗರ

ಹೊರವರ್ತುಲ ರಸ್ತೆಯ ಮಲ್ಲತ್ತಹಳ್ಳಿಯಿಂದ ಕೇಂದ್ರ ಸಾಹಿತ್ಯ ಅಕಾಡೆಮಿವರೆಗಿನ ಪಾದಚಾರಿ ಮಾರ್ಗದಲ್ಲಿರುವ ಮರಗಳ ಬುಡಗಳಿಗೆ ಕಿಡಿಗೇಡಿಗಳು ಬೆಂಕಿ ಹಾಕಿದ್ದಾರೆ.

ಪಾದಚಾರಿ ಮಾರ್ಗದಲ್ಲಿರುವ ಮರಗಳ ಬಳಿ ಒಣತ್ಯಾಜ್ಯ, ಪ್ಲಾಸ್ಟಿಕ್, ತ್ಯಾಜ್ಯ, ಕಸ ಕಡ್ಡಿಗಳನ್ನು ಹಾಕಿ, ಬೆಂಕಿ ಹಾಕುವುದರಿಂದ ಮರ ಗಳು ನಾಶವಾಗುತ್ತಿದ್ದರೂ ಬಿಬಿಎಂಪಿ ಅರಣ್ಯ, ಬೃಹತ್ ರಸ್ತೆ ಕಾಮಗಾರಿ, ಬಿಬಿಎಂಪಿ ವಾರ್ಡ್ ಮಟ್ಟದ ಅಧಿಕಾರಿಗಳು ಕ್ರಮ ಕೈಗೊಳ್ಳುತ್ತಿಲ್ಲ' ಎಂದು ಸ್ಥಳೀಯ ನಿವಾಸಿಗಳಾದ ಗಿರೀಶ್, ರಾಮಚಂದ್ರ, ತನುಜ ಅವರು ಬೇಸರ ವ್ಯಕ್ತಪಡಿಸಿದರು.

ಬಿಬಿಎಂಪಿ ವ್ಯಾಪ್ತಿಯಲ್ಲಿರುವ ಬಿಡಿಎ, ಖಾಸಗಿ, ರೆವಿನ್ಯೂ ಬಡಾವಣೆಗಳಲ್ಲಿ ಮನೆ ನಿರ್ಮಾಣ, ವಾಣಿಜ್ಯ, ಇನ್ನಿತರೆ ಕಟ್ಟಡಗಳನ್ನು ನಿರ್ಮಿಸುವಾಗ ಅವಶ್ಯವಿಲ್ಲದಿದ್ದರೂ ಮರಗಳನ್ನು ಕಡಿದು ಹಾಕಲಾಗುತ್ತಿದೆ. ಈ ಬಗ್ಗೆ ದೂರು ನೀಡಿದರೂ ಬಿಬಿಎಂಪಿ ಕ್ರಮಕೈಗೊಳ್ಳುತ್ತಿಲ್ಲ ಎಂದು ನಾಗರಿಕರು ಆಕ್ರೋಶ ವ್ಯಕ್ತಪಡಿಸಿದರು.

ಉದ್ಯಾನನಗರ,

ಮಂಡ್ಯ ತಾಲ್ಲೂಕಿನಲ್ಲೇ ಅತಿ ಹೆಚ್ಚು ಪ್ರಕರಣಗಳು: ಒತ್ತುವರಿ ತೆರವಿಗೆ ಪರಿಸರ ಪ್ರೇಮಿಗಳ ಆಗ್ರಹ

ಮಂಡ್ಯ: ಜಿಲ್ಲೆಯಲ್ಲಿ 2,341 ಎಕರೆ ಅರಣ್ಯ ಒತ್ತುವರಿ

• ಉದಯವಾಹಿನಿ, ಮಂಡ್ಯ

ಜಿಲ್ಲೆಯ 7 ತಾಲ್ಲೂಕುಗಳ ವ್ಯಾಪ್ತಿಯಲ್ಲಿ ಒಟ್ಟು 48.281 ಹೆಕ್ಟೇರ್ (1.21 ಲಕ್ಷ ಎಕರೆ) ಅರಣ್ಯ ಪ್ರದೇಶವಿದ್ದು, ಅದರಲ್ಲಿ ಬರೋಬ್ಬರಿ 2,341 ಎಕರೆ ಒತ್ತುವರಿಯಾಗಿದೆ. ಒತ್ತುವರಿ ತೆರವುಗೊಳಿಸಲು ಅರಣ್ಯ ಇಲಾಖೆ ಅಧಿಕಾರಿಗಳು ಇಚ್ಛಾಶಕ್ತಿ ತೋರುತ್ತಿಲ್ಲ ಎಂಬುದು ಪರಿಸರ ಪ್ರೇಮಿಗಳ ಗಂಭೀರ ಆರೋಪ.

ಮಂಡ್ಯ ಪ್ರಾದೇಶಿಕ ಅರಣ್ಯ ವಿಭಾಗದಲ್ಲಿ ಮಂಡ್ಯ, ನಾಗಮಂಗಲ ಎಂಬ ಎರಡು ಉಪವಿಭಾಗಗಳಿವೆ. ಮಂಡ್ಯ ಉಪವಿಭಾಗದಲ್ಲಿ ಮಂಡ್ಯ, ಮಳವಳ್ಳಿ, ಮದ್ದೂರು, ಶ್ರೀರಂಗಪಟ್ಟಣ ಸೇರಿದಂತೆ 4 ವಲಯಗಳಿವೆ. ನಾಗಮಂಗಲ ಉಪ ವಿಭಾಗದಲ್ಲಿ ನಾಗಮಂಗಲ, ಕೆ.ಆರ್.ಪೇಟೆ, ಪಾಂಡವಪುರ ಸೇರಿದಂತೆ 3 ವಲಯಗಳಿವೆ. ಇದು ಅತಿ ಕಡಿಮೆ ಅರಣ್ಯ ಹೊಂದಿರುವ ಜಿಲ್ಲೆಗಳಲ್ಲಿ ಒಂದಾಗಿದೆ.

727 ಒತ್ತುವರಿ ಪ್ರಕರಣ: ಮಂಡ್ಯ ತಾಲ್ಲೂಕಿನಲ್ಲಿ 5859 ಹೆಕ್ಟೇರ್, ಮದ್ದೂರು-1001, ಮಳವಳ್ಳಿ-2730, ಪಾಂಡವಪುರ-5803, ಶ್ರೀರಂಗಪಟ್ಟಣ-2815, ಕೆ.ಆರ್.ಪೇಟೆ-8342 ಮತ್ತು ನಾಗಮಂಗಲ ತಾಲ್ಲೂಕಿನಲ್ಲಿ 22,140 ಹೆಕ್ಟೇರ್ ಅರಣ್ಯ ಪ್ರದೇಶವಿದೆ. ಜಿಲ್ಲೆಯಲ್ಲಿ ಒಟ್ಟು 727 ಒತ್ತುವರಿ ಪ್ರಕರಣಗಳು ದಾಖಲಾಗಿವೆ.


ಉದಯವಾಹಿನಿ ಚಿತ್ರ

331 ಪ್ರಕರಣ ದಾಖಲು

ಮಂಡ್ಯ ತಾಲ್ಲೂಕಿನಲ್ಲಿ 396 ಪ್ರಕರಣಗಳು, ಶ್ರೀರಂಗಪಟ್ಟಣ ತಾಲ್ಲೂಕಿನಲ್ಲಿ 144 ಪ್ರಕರಣಗಳು ದಾಖಲಾಗಿದ್ದು, ಈ ಎರಡು ತಾಲ್ಲೂಕುಗಳಲ್ಲಿ ಒತ್ತು ವರಿ ಸಮಸ್ಯೆ ಹೆಚ್ಚಾಗಿ ಕಂಡುಬಂದಿದೆ. ಪಾಂಡವಪುರ ತಾಲ್ಲೂಕಿನಲ್ಲಿ 1 ಪ್ರಕರಣ ಮತ್ತು ಮಳವಳ್ಳಿ ತಾಲ್ಲೂಕಿನಲ್ಲಿ 2 ಪ್ರಕರಣಗಳು ದಾಖಲಾಗಿದ್ದು, ಅತಿ ಕಡಿಮೆ ಪ್ರಕರಣಗಳು ಎನಿಸಿವೆ. 727 ಪ್ರಕರಣಗಳ ಪೈಕಿ, 10ರಿಂದ 30 ಎಕರೆಯಷ್ಟು ಒತ್ತುವರಿ ವಿಭಾಗದಲ್ಲಿ 10 ಪ್ರಕರಣಗಳು, 3ರಿಂದ 10 ಎಕರೆಯಷ್ಟು ಒತ್ತುವರಿ ವಿಭಾಗದಲ್ಲಿ 339 ಪ್ರಕರಣಗಳು, 3 ಎಕರೆಗಿಂತ ಕಡಿಮೆ ಒತ್ತುವರಿ ವಿಭಾಗದಲ್ಲಿ 331 ಪ್ರಕರಣಗಳು ದಾಖಲಾಗಿವೆ.

ಸಿಬ್ಬಂದಿ ಕೊರತೆ

ಮಂಡ್ಯ ಪ್ರಾದೇಶಿಕ ಅರಣ್ಯ ವಿಭಾಗಕ್ಕೆ ಒಟ್ಟು 160 ಹುದ್ದೆಗಳು ಮಂಜೂರಾಗಿದ್ದು, ಅದರಲ್ಲಿ 100 ಹುದ್ದೆಗಳು ಮಾತ್ರ ಭರ್ತಿಯಾಗಿವೆ. ವಲಯ ಅರಣ್ಯಾಧಿಕಾರಿ-2 ಹುದ್ದೆ, ಎಫ್‌ಡಿಎ-2, ಎಸ್‌ಡಿಎ-7, ಅರಣ್ಯ ವೀಕ್ಷಕರು-22, ದಲಾಯತ್-18 ಸೇರಿದಂತೆ ಒಟ್ಟು 60 ಹುದ್ದೆಗಳು ಖಾಲಿ ಉಳಿದಿವೆ. ಸಿಬ್ಬಂದಿ ಕೊರತೆಯಿಂದ ಇಲಾಖೆಯ ಕೆಲಸ ಕಾರ್ಯಗಳನ್ನು ನಿಗದಿತ ವೇಳೆಯಲ್ಲಿ ಮತ್ತು ಪರಿಣಾಮಕಾರಿಯಾಗಿ ಮಾಡಲು ತೊಡಕಾಗಿದೆ ಎನ್ನುತ್ತಾರೆ ಅರಣ್ಯ ಅಧಿಕಾರಿಗಳು.

> 727 ಒತ್ತುವರಿ ಪ್ರಕರಣಗಳಲ್ಲಿ 47 ಪ್ರಕರಣಗಳಿಗೆ ಸಂಬಂಧಿಸಿದಂತೆ 185 ಎಕರೆ ಒತ್ತುವರಿಯನ್ನು ತೆರವುಗೊಳಿಸಿದ್ದು ಪ್ರಕ್ರಿಯೆ ಜಾರಿಯಲ್ಲಿದೆ. ಅರಣ್ಯ ಪ್ರದೇಶ ಸಂರಕ್ಷಣೆಗೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುತ್ತೇವೆ
> -ರಾಜು, ಡಿಸಿಎಫ್ ಮಂಡ್ಯ

> ಕಾಡು ಉಳಿದರೆ ನಾಡು ಉಳಿದಂತೆ. ಮನುಷ್ಯರ ಭೂದಾಹಕ್ಕೆ ಅರಣ್ಯ ಸಂಪತ್ತು ನಾಶವಾಗುತ್ತಿದೆ. ಅರಣ್ಯ ಅಧಿಕಾರಿಗಳು ಇದಕ್ಕೆ ಕಡಿವಾಣ ಹಾಕಬೇಕು. ಕೂಡಲೇ ಒತ್ತುವರಿ ತೆರವುಗೊಳಿಸಬೇಕು
> -ಸುಮನ್ಸ್ ಕೌಲಗಿ, ಪರಿಸರ ಪ್ರೇಮಿ

ರಾಮನಗರ: ಗುತ್ತಿಗೆಯಲ್ಲಿ ಮುಸ್ಲಿಮರ ಮೀಸಲಾತಿಗೆ ಖಂಡನೆ

• ಉದಯವಾಹಿನಿ, ರಾಮನಗರ

ಸರ್ಕಾರಿ ಗುತ್ತಿಗೆ ಕಾಮಗಾರಿಗಳಲ್ಲಿ ಮುಸ್ಲಿಮರಿಗೆ ಶೇ 4ರಷ್ಟು ಮೀಸಲಾತಿ ನೀಡಿರುವುದನ್ನು ಖಂಡಿಸಿ, ಬಿಜೆಪಿ-ಜೆಡಿಎಸ್ ಮೈತ್ರಿಕೂಟದಿಂದ ನಗರದಲ್ಲಿ ಪ್ರತಿಭಟನೆ ನಡೆಯಿತು. ಐಜೂರು ವೃತ್ತದಲ್ಲಿ ಜಮಾಯಿಸಿದ ಎರಡೂ ಪಕ್ಷಗಳ ಮುಖಂಡರು, ಕಾರ್ಯಕರ್ತರು, ರಾಜ್ಯ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ರಾಜ್ಯ ಸರ್ಕಾರದ ವಿರುದ್ಧ ಪ್ರತಿಭಟನಾ ಫಲಕಗಳನ್ನು ಪ್ರದರ್ಶಿಸಿ ಘೋಷಣೆಗಳನ್ನು ಕೂಗಿದ ಕಾರ್ಯಕರ್ತರು, ಬೆಂಗಳೂರು-ಮೈಸೂರು ಹೆದ್ದಾರಿಯನ್ನು ಕೆಲ ಹೊತ್ತು ತಡೆದರು. ರಾಜ್ಯ ಸರ್ಕಾರವು ಒಂದು ಧರ್ಮದ ಓಲೈಕೆಗಾಗಿ ಇತರ ಧರ್ಮಗಳನ್ನು ಕಡೆಗಣಿಸುವ ಕೆಲಸ ಮಾಡುತ್ತಿದೆ ಎಂದು ಅಸಮಾಧಾನ ಹೊರಹಾಕಿದರು.

ಬಿಜೆಪಿ ಜಿಲ್ಲಾ ಘಟಕದ ಅಧ್ಯಕ್ಷ ಆನಂದಸ್ವಾಮಿ ಮಾತನಾಡಿ, ಗುತ್ತಿಗೆಯಲ್ಲಿ ಮುಸ್ಲಿಮರಿಗೆ ಮೀಸಲಾತಿ ನಿರ್ಧಾರ ಕೋಮು ರಾಜಕಾರಣದ ಪರಮಾವಧಿಯಾಗಿದೆ. ಹಿಂದೆ ಯಾವ ಸರ್ಕಾರಗಳೂ ಮಾಡದ್ದನ್ನು ಈಗಿನ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೇಸ್ ಸರ್ಕಾರ ಮಾಡುತ್ತಿದೆ.

ಸರ್ಕಾರ ಕೂಡಲೇ ತನ್ನ ನಿರ್ಧಾರ ಹಿಂಪಡೆಯಬೇಕು

ಉದಯವಾಹಿನಿ ಚಿತ್ರ

ಎಂದು ಆಗ್ರಹಿಸಿದರು. ಪರಿಶಿಷ್ಟರ ಅಭಿವೃದ್ಧಿಗೆ ಮೀಸಲಿಟ್ಟಿದ್ದ ಹಣವನ್ನು ಗ್ಯಾರಂಟಿ ಯೋಜನೆಗಳು ಸೇರಿದಂತೆ ಅನ್ಯ ಉದ್ದೇಶಕ್ಕೆ ಬಳಸಿದ್ದನ್ನು ಖಂಡಿಸಿ, ಸದನದ ಬಾವಿಗಿಳಿದು ಪ್ರತಿಭಟಿಸಿದ ಬಿಜೆಪಿಯ 18 ಶಾಸಕರನ್ನು 6 ತಿಂಗಳು ಅಮಾನತು ಮಾಡಿರುವುದು ಖಂಡನೀಯ. ಸ್ಪೀಕರ್ ಸ್ಥಾನದಲ್ಲಿರುವ ಯು.ಟಿ. ಖಾದರ್ ಅವರು ಪಕ್ಷಾತೀತ ಸ್ಥಾನಮಾನದಲ್ಲಿದ್ದರೂ ಕಾಂಗ್ರೇಸ್ ಪರವಾಗಿ ನಡೆದುಕೊಂಡಿದ್ದಾರೆ ಎಂದು ಬೇಸರ ವ್ಯಕ್ತಪಡಿಸಿದರು.

ಬಿಜೆಪಿ ಮುಖಂಡ ಗೌತಮ್ ಗೌಡ ಮಾತನಾಡಿ, ಸರ್ಕಾರದ ಗುತ್ತಿಗೆ ಮೀಸಲಾತಿ ನಿರ್ಧಾರವು ಸಮಾಜವನ್ನು ಒಡೆಯುತ್ತದೆ. ಹದಿನಾರು ಬಜೆಟ್‌ಗಳನ್ನು ಮಂಡಿಸಿರುವ ಸಿದ್ದರಾಮಯ್ಯ ಅವರು ಸಾಲರಾಮಯ್ಯ ಆಗಿದ್ದಾರೆ. ಗ್ಯಾರಂಟಿ ಯೋಜನೆಗಳಿಗೆ ಹಣ ಹೊಂದಿಸಲು ಸಾಧ್ಯವಾಗದೆ,

> ಬಿಜೆಪಿ ಮುಖಂಡ ಪ್ರಸಾದ್ ಗೌಡ, ಧರ್ಮಾಧಾರಿತ ಮೀಸಲಾತಿಯು ದೇಶದ ರಾಜಕೀಯ ವ್ಯವಸ್ಥೆಯನ್ನು ಬುಡಮೇಲು ಮಾಡಲಿದೆ. ಸರ್ಕಾರವು ಮುಸ್ಲಿಮರಿಗೆ ಮಾತ್ರ ಮೀಸಲಾತಿ ಕೊಟ್ಟರೆ ಉಳಿದ ಸಿಖ್, ಬೌದ್ಧ, ಜೈನ ಹಾಗೂ ಹಿಂದೂ ಧರ್ಮದವರು ಎಲ್ಲಿಗೆ ಹೋಗಬೇಕು. ಸರ್ಕಾರ ಇಂತಹ ತಾರತಮ್ಯ ಮಾಡದೆ, ಎಲ್ಲಾ ಧರ್ಮ ಗಳನ್ನು ಸಮಾನವಾಗಿ ಕಾಣಬೇಕು ಎಂದರು.

ಸಾಲದಲ್ಲಿ ಆಡಳಿತ ನಡೆಸುತ್ತಿದ್ದಾರೆ. ಮುಖ್ಯಮಂತ್ರಿ ಕುರ್ಚಿಗಾಗಿ ಸಚಿವರು ಸೇರಿದಂತೆ ಶಾಸಕರ ಹನಿಟ್ರಾಪ್ ಪ್ರಯತ್ನದಿಂದ ರಾಜ್ಯದ ಗೌರವ ಹಾಳಾಗಿದೆ ಎಂದರು. ಜೆಡಿಎಸ್ ತಾಲ್ಲೂಕು ಘಟಕದ ಅಧ್ಯಕ್ಷ ಸಬ್ಬಕೆರೆ ಶಿವಲಿಂಗಪ್ಪ, ಮುಸ್ಲಿಮರಿಗೆ ಮೀಸಲಾತಿ ವಿಷಯದಲ್ಲಿ ರಾಜಕೀಯ ಲಾಭವಲ್ಲದೆ ಬೇರಾವ ಉದ್ದೇಶವೂ ಇಲ್ಲ. ಕೂಡಲೇ ಸರ್ಕಾರ ತನ್ನ ನಿರ್ಧಾರವನ್ನು ಹಿಂಪಡೆಯಬೇಕು. ಇಲ್ಲದಿದ್ದರೆ, ಮುಂದಿನ ದಿನಗಳಲ್ಲಿ ಜೆಡಿಎಸ್ ಮತ್ತು ಬಿಜೆಪಿ ಕಾರ್ಯಕರ್ತರು ತೀವ್ರತರವಾದ ಹೋರಾಟ ನಡೆಸಲಿದ್ದೇವೆ ಎಂದು ಎಚ್ಚರಿಕೆ ನೀಡಿದರು.

ನೆಲ ಕಚ್ಚಿದ ಚೆಂಡು ಹೂ ಬೆಲೆ: ಬೆಳೆ ಮೇಯಲು ದನ ಬಿಟ್ಟರು

• ಉದಯವಾಹಿನಿ, ಮುಳಬಾಗಿಲು

ಆಸೆ ಇಟ್ಟುಕೊಂಡು, ಬಂಡವಾಳ ಹಾಕಿ ಬೆಳೆದ ಚೆಂಡು ಹೂವಿನ ಬೆಲೆ ನೆಲ ಕಚ್ಚಿದೆ. ಕೈಸುಟ್ಟುಕೊಂಡ ರೈತ ಕಷ್ಟಪಟ್ಟು ತಾ ಬೆಳೆದ ತುಂಬಿದ ಹೊಲಕ್ಕೆ ತಾನೇ ದನ ಕರುಗಳನ್ನು ಬಿಟ್ಟು ಮೇಯಿಸುತ್ತಿದ್ದಾನೆ. ಚೆಂಡು ಹೂಗೆ ಮಾರುಕಟ್ಟೆಯಲ್ಲಿ ಒಳ್ಳೇ ಬೆಲೆ ಇದೆ ಎನ್ನುವುದನ್ನು ತಿಳಿದು ತಾಲ್ಲೂಕಿನಲ್ಲಿ ಸುಮಾರು ನೂರಾರು ಎಕರೆಗಳಲ್ಲಿ ಅನೇಕ ರೈತರು ಚೆಂಡು ಹೂ ಬೆಳೆದಿದ್ದಾರೆ. ಬಹುತೇಕ ಎಲ್ಲಾ ಕಡೆಗಳಲ್ಲಿ ಚೆಂಡು ಹೂ ಅರಳಿ ನಳನಳಿಸುತ್ತಿವೆ.

ಸಮೃದ್ಧವಾಗಿ ಬೆಳೆದ ಹೂಗಳು ನೋಡುಗರನ್ನು ಸೆಳೆಯುತ್ತಿವೆ. ಆದರೆ, ಮಾರುಕಟ್ಟೆಯಲ್ಲಿ ಬೆಲೆ ಕುಸಿದು ರೈತರ ಕಣ್ಣಲ್ಲಿ ನೀರಿಳಿಯುತ್ತಿದೆ.

ಹೂವುಗಳನ್ನು ಕೀಳಿ, ಮಾರುಕಟ್ಟೆಗೆ ಸಾಗಿಸಿದರೂ ಬಂಡವಾಳದ ಮಾತಿರಲಿ, ಮಾರುಕಟ್ಟೆಗೆ ಸಾಗಿಸಲು ಕರ್ಚಾದ ಹಣವೂ ವಾಪಸ್ಸು ಬರಲಾರದು ಎಂದು ತಲೆ ಮೇಲೆ ಕೈ ಹೊತ್ತು ಕೂತಿದ್ದಾನೆ ರೈತ.

ತಾಲ್ಲೂಕಿನ ನಂಗಲಿ, ನೆರೆಯ ಚೆನ್ನೈ ಮಾರುಕಟ್ಟೆಗಳು ಸಮೀಪದಲ್ಲಿರುವ ಕಾರಣದಿಂದ ಬಹುತೇಕ ರೈತರು ಚೆಂಡು ಹೂಗಳನ್ನು ಬೆಳೆಯುವುದು ಸಾಮಾನ್ಯ. ಇತ್ತೀಚೆಗೆ ಹಬ್ಬದ ಸಮಯಗಳಲ್ಲಿ ಬೆಲೆ ಚೆನ್ನಾಗೇ ಇತ್ತು. ಇದೀಗ ಸುಮಾರು ತಿಂಗಳಿನಿಂದ ಈಚೆ ಚೆಂಡು ಹೂಗಳಿಗೆ ಬೆಲೆಯೇ ಇಲ್ಲ. ಹೀಗಾಗಿ ಕೆಲ ರೈತರು ಹೂಗಳನ್ನು ತೋಟಗಳಲ್ಲಿಯೇ ಬಾಡಲು ಬಿಟ್ಟರೆ,


ಉದಯವಾಹಿನಿ ಚಿತ್ರ

ಕೆಲವರು ಮೇಯಲು ಜಾನುವಾರಗಳನ್ನು ಬಿಡುತ್ತಿದ್ದಾರೆ. ನಂಗಲಿ ಹಾಗೂ ಚೆನ್ನೈ ಮಾರುಕಟ್ಟೆಯಲ್ಲಿ ಒಂದು ಕೇಜಿ ಚೆಂಡು ಹೂ ಕೇವಲ 10ಗಳಿಗೆ ಮಾರಾಟವಾಗುತ್ತಿದೆ. ಇದರಿಂದ ತೋಟದಿಂದ ಹೂಗಳನ್ನು ಕೀಳುವ ಕೂಲಿ, ಸಾಗಾಟ ವೆಚ್ಚ, ಮಾರುಕಟ್ಟೆಯ ಕಮಿಷನ್ ಮತ್ತಿತರ ಖರ್ಚುಗಳಿಗೆ ಆಗುತ್ತಿಲ್ಲ. ತಾಲ್ಲೂಕಿನ ನಂಗಲಿ, ಮರವೇಮನೆ, ಸುನುಪಕುಂಟೆ, ಬೈರಕೂರು, ತಿಮ್ಮರಾವುತ್ತನಹಳ್ಳಿ, ಹೆಬ್ಬಣಿ, ಗೊಲ್ಲಹಳ್ಳಿ, ಗಡೂರು, ಮಣಿಘಟ್ಟ ಮಿಟ್ಟೆ, ಗೂಕುಂಟೆ ಮತ್ತಿತರ ಕಡೆಗಳಲ್ಲಿ ನೂರಾರು ಎಕರೆಗಳಲ್ಲಿ ಚೆಂಡು ಹೂ ಸಮೃದ್ಧವಾಗಿ ಬೆಳೆದಿದ್ದು ಕೆಲವು ಕಡೆ ಹಸುಗಳನ್ನು ಬಿಟ್ಟು ಮೇಯಿಸುತ್ತಿದ್ದರೆ ಕೆಲವು ಕಡೆ ಟ್ರ್ಯಾಕ್ಟರ್ ಮೂಲಕ ಉಳುಮೆ ಮಾಡಲು ಚಿಂತಿಸುತ್ತಿದ್ದಾರೆ.

ಹೂಗಳಿಂದ ಬದುಕು ಕಟ್ಟಿಕೊಳ್ಳಬಹುದು ಎಂದು ನಂಬಿಕೊಂಡಿದ್ದೆವು. ಹಾಕಿದ ಬಂಡವಾಳವೂ ಸಿಗದೆ ತಲೆ ಮೇಲೆ ಸಾಲ ಹೊರುವಂತಾಗಿದೆ. ಸರ್ಕಾರ ಕನಿಷ್ಠ ಬೆಂಬಲ ಬೆಲೆಯಾದರೂ ಘೋಷಿಸಿ ಹೂ ಬೆಳೆಗಾರರ ಬದುಕು ಬೀದಿಗೆ ಬೀಳುವುದನ್ನು ತಡೆಯಬೇಕು ಎಂದು ರೈತ ಗಟ್ಟಣ್ಣ ಆಗ್ರಹಿಸಿದರು.

ಕೌಶಲಾಧಾರಿತ ತರಬೇತಿ ಅಗತ್ಯ: ರವೀಂದ್ರ

• ಉದಯವಾಹಿನಿ, ಜಯಪುರ

ಉನ್ನತ ಶಿಕ್ಷಣ ಪಡೆಯುವುದರ ಜೊತೆಗೆ ಕೌಶಲಾಧಾರಿತ ತರಬೇತಿಯೂ ಬಹುಮುಖ್ಯ ಎಂದು ಮೈಸೂರು ರುಡ್‌ಸೆಟ್ ಸಂಸ್ಥೆಯ ನಿವೃತ್ತ ಅಧಿಕಾರಿ ರವೀಂದ್ರ ಹೇಳಿದರು.

ಸ್ವಾಮಿ ವಿವೇಕಾನಂದ ಯೂತ್ ಮೂವ್‌ಮೆಂಟ್‌ನ ಅಂಗಸಂಸ್ಥೆ ವಿವೇಕ ಗ್ರಾಮೀಣ ಜೀವನಾಧಾರ ಕೇಂದ್ರದ ಜಯಪುರ ಶಾಖೆಯಲ್ಲಿ ಅಮಿಟೆಕ್ ಸಂಸ್ಥೆ ಸಹಯೋಗದಲ್ಲಿ ಫ್ಯಾಷನ್ ಡಿಸೈನಿಂಗ್ ಮತ್ತು ಬ್ಯೂಟಿಷಿಯನ್ ತರಬೇತಿ ಪಡೆದ ಅಭ್ಯರ್ಥಿಗಳಿಗೆ ಪ್ರಮಾಣಪತ್ರ ವಿತರಣಾ ಕಾರ್ಯಕ್ರಮದಲ್ಲಿ ಮಾತನಾಡಿದರು.

ವಿಆರ್‌ಎಲ್‌ಸಿ ಸಂಯೋಜಕ ಅಬ್ದುಲ್

ಉದಯವಾಹಿನಿ ಚಿತ್ರ

ರಶೀದ್ ಮಾತನಾಡಿ, ಗ್ರಾಮೀಣ ಭಾಗದ ನಿರುದ್ಯೋಗ ಯುವಕ, ಯುವತಿಯರಿಗೆ ಕೌಶಲಾಧಾರಿತ ತರಬೇತಿ ನೀಡಿ ಜೀವನ ರೂಪಿಸುವುದು ಸ್ವಾಮಿ ವಿವೇಕಾನಂದ ಯೂತ್ ಮೂವ್‌ಮೆಂಟ್ ಸಂಸ್ಥೆಯ ಮೂಲ ಉದ್ದೇಶವಾಗಿದೆ' ಎಂದರು. ಕಾರ್ಯಕ್ರಮವನ್ನು ಬರಡನಪುರ ಗುರುಮಹಾಂತೇಶ್ವರ ಮಠದ ಚನ್ನಬಸವ ಸ್ವಾಮೀಜಿ ಉದ್ಘಾಟಿಸಿದರು.

ತಿಪಟೂರು ಎಪಿಎಂಸಿ: 19 ಸಾವಿರ ದಾಟಿದ ಕ್ವಿಂಟಲ್ ಕೊಬ್ಬರಿ

• ಉದಯವಾಹಿನಿ, ತುಮಕೂರು

ತಿಪಟೂರು ಎಪಿಎಂಸಿ ಮಾರುಕಟ್ಟೆಯಲ್ಲಿ ಸೋಮವಾರ ಕ್ವಿಂಟಲ್ ಕೊಬ್ಬರಿ ಧಾರಣೆ 19 ಸಾವಿರ ಗಡಿ ದಾಟುವ ಮೂಲಕ ಸಾರ್ವಕಾಲಿಕ ದಾಖಲೆ ಬರೆದಿದೆ. 2014-15ರಲ್ಲಿ 19 ಸಾವಿರ ಗರಿಷ್ಠ ಬೆಲೆ ಪಡೆದಿದ್ದು ಈವರೆಗಿನ ದಾಖಲೆಯಾಗಿತ್ತು. ಸೋಮವಾರ ಕ್ವಿಂಟಲ್ ಕೊಬ್ಬರಿ 19,051ಕ್ಕೆ ಮಾರಾಟವಾಗುವ ಮೂಲಕ ಈ ಹಿಂದಿನ ದಾಖಲೆ ಮುರಿದಿದೆ. ಎಪಿಎಂಸಿ ಮಾರುಕಟ್ಟೆಗೆ 2,704 ಕ್ವಿಂಟಲ್ (6,296 ಚೀಲ) ಕೊಬ್ಬರಿ ಆವಕವಾಗಿದ್ದು, ಕನಿಷ್ಠ 16,800ಕ್ಕೆ ಮಾರಾಟವಾಗಿದೆ.

ಕಳೆದ ಕೆಲ ದಿನಗಳಿಂದ ಕೊಬ್ಬರಿ ಧಾರಣೆ ದಿನದಿಂದ ದಿನಕ್ಕೆ ನಿಧಾನವಾಗಿ ಏರಿಕೆಯಾಗುತ್ತಿರುವುದು ತೆಂಗು ಬೆಳೆಗಾರರ ಮೊಗದಲ್ಲಿ ಮಂದಹಾಸ ಮೂಡಿಸಿದೆ.

ಉದಯವಾಹಿನಿ ಚಿತ್ರ

ಮಾರ್ಚ್ 13ರಂದು ನಡೆದ ಹರಾಜಿನಲ್ಲಿ 14 ಸಾವಿರಕ್ಕೆ ಹೆಚ್ಚಳವಾಗಿತ್ತು. ಮಾರ್ಚ್ 20ರಂದು 17 ಸಾವಿರಕ್ಕೆ ಏರಿಕೆಯಾಗಿತ್ತು. ಕೇವಲ ಹತ್ತು ದಿನದ ಅಂತರದಲ್ಲಿ ಕ್ವಿಂಟಲ್‌ಗೆ 5 ಸಾವಿರ ಜಿಗಿತ ಕಂಡಿದೆ.

ತೆಂಗಿನ ಜಾಗ ಆಕ್ರಮಿಸುತ್ತಿರುವ ಅಡಿಕೆ: ಸತತ ಬರ ನೀರಿನ ಕೊರತೆಯಿಂದ ತೆಂಗಿನ ಮರಗಳು ಒಣಗುತ್ತಿದ್ದು ರೋಗ ಬಾಧೆಯಿಂದ ಇಳುವರಿ ಕುಸಿತವಾಗಿದೆ. ಎಳನೀರಿಗೆ ಹೆಚ್ಚಿದ ಬೇಡಿಕೆಯಿಂದಾಗಿ ಬೆಳೆಗಾರರು ಅತ್ತ ಮುಖ ಮಾಡಿದ್ದಾರೆ. ತೆಂಗು ಪ್ರದೇಶ ವಿಸ್ತರಣೆ ಆಗದಿರುವುದು ತೆಂಗಿನ ಜಾಗದಲ್ಲಿ ಅಡಿಕೆ ಬೆಳೆ ಕಾಲಿಟ್ಟಿರುವುದು ಕೊಬ್ಬರಿ ಉತ್ಪಾದನೆ ಕಡಿಮೆಯಾಗಲು ಪ್ರಮುಖ ಕಾರಣವಾಗಿದೆ ಎನ್ನುತ್ತಾರೆ ತೆಂಗು ಬೆಳೆಗಾರರು.

ಬೆಲೆ ಏರಿಕೆಗೆ ಕಾರಣ ಏನು?

ಬೇಡಿಕೆಯಷ್ಟು ಅವಕ ಇಲ್ಲದಿರುವುದು ಬೆಲೆ ಹೆಚ್ಚಳಕ್ಕೆ ಪ್ರಮುಖ ಕಾರಣವಾಗಿದೆ. ಉತ್ತರ ಭಾರತದ ರಾಜ್ಯಗಳಲ್ಲಿ ಕೊಬ್ಬರಿ ಹಾಗೂ ಎಣ್ಣೆಗೆ ಬೇಡಿಕೆ ಹೆಚ್ಚಿದೆ. ಅದರೊಂದಿಗೆ ಕೇರಳ ತಮಿಳುನಾಡಿನಲ್ಲೂ ಬೇಡಿಕೆ ಹೆಚ್ಚಾಗಿರುವುದು ಒಮ್ಮೆಲೆ ದರ ಏರಿಕೆಯಾಗುವಂತೆ ಮಾಡಿದೆ ಎನ್ನುವುದು ವರ್ತಕರ ವಿಶ್ಲೇಷಣೆ.

ನಾಪೋಕ್ಲು: ಮತ್ತೆ ಬಂತು ಹಾಕಿ ಉತ್ಸವದ ಸಂಭ್ರಮ

• ಉದಯವಾಹಿನಿ, ನಾಪೋಕ್ಲು

ಕಳೆದ 24 ವರ್ಷಗಳಲ್ಲಿ 360 ಕುಟುಂಬಗಳ 3 ಸಾವಿರಕ್ಕೂ ಅಧಿಕ ಹಾಕಿ ಆಟಗಾರರು ಪಾಲ್ಗೊಳ್ಳುವ ಮೂಲಕ ದಾಖಲೆ ಮಾಡಿದ ಕುಂಡೋಳಂಡ ಹಾಕಿ ಟೂರ್ನಿ ಕಳೆದ ವರ್ಷ ಅಧಿಕೃತವಾಗಿ ಗಿನ್ನಿಸ್ ಪುಟ ಗಳನ್ನು ಸೇರಿತು.

ಅದರ ಸವಿ ನೆನಪಿನಲ್ಲಿ ಈ ವರ್ಷ ಪಂದ್ಯಾವಳಿಯ ಬೆಳ್ಳಿ ಹಬ್ಬ ಬಂದಿದ್ದು, ಮುದ್ದಂಡ ಕಪ್‌ಗೆ ಭರ್ಜರಿ ಸಿದ್ಧತೆ ನಡೆಸಲಾಗಿದೆ. ಮಾರ್ಚ್ ಏಪ್ರಿಲ್ ತಿಂಗಳುಗಳಲ್ಲಿ ಗ್ರಾಮ ದೇವಾಲ ಯಗಳಲ್ಲಿ ವಿವಿಧ ಉತ್ಸವಗಳು ಜರುಗಲಿದ್ದು, ಅಧಿಕ ಸಂಖ್ಯೆಯ ಭಕ್ತ ಸಮೂಹವನ್ನು ಸೆಳೆದರೆ, ಇತ್ತ ಕ್ರೀಡಾ ಮೈದಾನದಲ್ಲಿ ಜರುಗುವ ಕೊಡವ ಕೌಟುಂಬಿಕ ಹಾಕಿ ಉತ್ಸವ ಕ್ರೀಡಾ ಪ್ರೇಮಿಗಳ ಮನಸೆಳೆಯಲಿದೆ.

ಅಧಿಕ ಸಂಖ್ಯೆಯ ಕೊಡವ ಕುಟುಂಬಗಳನ್ನು ವ್ಯವಸ್ಥಿತವಾಗಿ ಆಡಿಸಲು ವೇಳಾಪಟ್ಟಿ ತಯಾರಿಸುವ ಕಾರ್ಯ ಭರದಿಂದ ಸಾಗಿದ್ದು, ಬಹುತೇಕ ಅಂತಿಮ ಹಂತ ತಲುಪಿದೆ. ಮಡಿಕೇರಿಯಲ್ಲಿನ ಕನೆಕ್ಷಿಂಗ್ ಕೊಡವ ಸಂಘಟನೆ ಕಚೇರಿಯಲ್ಲಿ ಈ ಕಾರ್ಯ ನಡೆಯುತ್ತಿದ್ದು ಕ್ರೀಡಾ ತರಬೇತುದಾರ ಕೇಚಂಡ ಪ್ರಸನ್ನ ನೇತೃತ್ವದಲ್ಲಿ ವೇಳಾಪಟ್ಟಿ ನಿಗದಿ ಪ್ರಕ್ರಿಯೆ ನಡೆಯುತ್ತಿದೆ. ಕೇಚಂಡ ಪ್ರಸನ್ನ 25 ವರ್ಷಗಳ ಅವಧಿಯಲ್ಲಿ 19 ಬಾರಿ ಟೈಸ್ ರಚನೆ ಮಾಡಿ ಗಮನ ಸೆಳೆದಿದ್ದಾರೆ.

2003ರಲ್ಲಿ ನಾಪೋಕ್ಲುವಿನಲ್ಲಿ ಕಲಿಯಂಡ ಕುಟುಂಬದವರು ಕೊಡವ ಕೌಟುಂಬಿಕ ಹಾಕಿ ಟೂರ್ನಿಯನ್ನು ನಡೆಸಿದರು. ಬಳಿಕ ಬಿದ್ದಾಟಂಡ, ಕುಲ್ಲೇಟಿರ, ಅಪ್ಪಚಿಟ್ಟೋಳಂಡ,

ಅಂತರಾಳದಿಂದ... EDITORIAL

ಅಪಾಯಕಾರಿ ಕೈಗಾರಿಕೆಗಳು ಬೇಡ



ಎಲ್ಲರಿಗೂ ಉದ್ಯೋಗಾವಕಾಶಗಳನ್ನು ಸೃಷ್ಟಿಸಲು ಕೃಷಿಯ ಜೊತೆಗೆ ಕೈಗಾರಿಕೋದ್ಯಮಗಳು ಬೇಕು ಎಂಬುವುದರಲ್ಲಿ ಭಿನ್ನಾಭಿಪ್ರಾಯವಿಲ್ಲ. ಆದರೆ ನಮ್ಮ ನದಿ, ಕೆರೆಗಳನ್ನು ನಾಶ ಮಾಡಿ ಜನಸಾಮಾನ್ಯರನ್ನು ಅನಾರೋಗ್ಯದ ಮಡಿಲಿಗೆ ಹಾಕುವ ಕೈಗಾರಿಕೆಗಳು ಬೇಡ.

ಇಂತಹ ಅಪಾಯಕಾರಿ ಉದ್ಯಮಗಳು ಹೊರಬಿಡುವ ಧೂಳು ಮತ್ತು ಮಲಿನಗೊಂಡ ಗಾಳಿಯಿಂದಾಗಿ ನಾಡಿನ ಕೆಲವೆಡೆ ಸಾರ್ವಜನಿಕರು ರೋಸಿ ಹೋಗಿದ್ದಾರೆ.ಇಂತಹ ಕೈಗಾರಿಕೆಗಳ ವಿರುದ್ಧ ಕಲ್ಯಾಣ ಕರ್ನಾಟಕದ ಕೊಪ್ಪಳದ ಜನರು ಕಳೆದ ಕೆಲವು ವಾರಗಳಿಂದ ಬೀದಿಗಿಳಿದು ಹೋರಾಟ ನಡೆಸುತ್ತಿದ್ದಾರೆ. ಬಳ್ಳಾರಿಯ ಗಣಿಗಾರಿಕೆಯಿಂದ ಈಗಾಗಲೇ ತತ್ತರಿಸಿ ಹೋಗಿರುವ ಈ ಪ್ರದೇಶದ ಪರಿಸರದ ಮೇಲೆ ಮತ್ತೆ ಕೈಗಾರಿಕೆಗಳ ಹಲ್ಲೆ ನಡೆಯುತ್ತಲೇ ಇದೆ. ಇದಕ್ಕೆ ತಾಜಾ ಉದಾಹರಣೆಯೆಂದರೆ ಕೊಪ್ಪಳ ಸಮೀಪದ ಬಳ್ಳಾರಿ ಮತ್ತು ಸಂಡೂರು ಗಣಿಗಾರಿಕೆಯಿಂದ ತತ್ತರಿಸಿರುವ ಕೊಪ್ಪಳ ಸುತ್ತುವರಿದ ಅಪಾಯಕಾರಿ ಉದ್ಯಮಗಳಿಂದಾಗಿ ಉಸಿರಾಡಲು ಪರದಾಡುತ್ತಿದೆ. ಕೊಪ್ಪಳ ತಾಲ್ಲೂಕು ಕೇಂದ್ರದ ವ್ಯಾಪ್ತಿಯಲ್ಲಿ ಒಟ್ಟು 202 ಸಣ್ಣ ಮಧ್ಯಮ ಹಾಗೂ ಭಾರೀ ಪ್ರಮಾಣದ ಕೈಗಾರಿಕೆಗಳಿವೆ. ಇವುಗಳಲ್ಲಿ 40ಕ್ಕೂ ಹೆಚ್ಚು ಕಬ್ಬಿಣ ಮತ್ತು ಉಕ್ಕು ತಯಾರಿಕಾ ಘಟಕಗಳಿವೆ. ಈ ಪ್ರದೇಶದ ಒಟ್ಟು 33 ಕೈಗಾರಿಕೆಗಳು ಪರಿಸರ ಮಾಲಿನ್ಯಕ್ಕೆ ಕಾರಣವಾಗಿವೆ ಎಂದು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಲಿ ಸರಕಾರಕ್ಕೆ ವರದಿ ಸಲ್ಲಿಸಿದೆ. ಇವುಗಳಲ್ಲಿ 22 ಕೈಗಾರಿಕೆಗಳಿಂದ ವ್ಯಾಪಕವಾಗಿ ಮಾಲಿನ್ಯ ಉಂಟಾಗುತ್ತಿದೆ ಎಂದು ಈ ವರದಿಯಲ್ಲಿ ದಾಖಲಿಸಲಾಗಿದೆ. ಈ ಕೈಗಾರಿಕೆಗಳಿಂದ ಉಂಟಾಗುತ್ತಿರುವ ಮಾಲಿನ್ಯವು ಸುತ್ತಮುತ್ತಲಿನ ಪ್ರದೇಶದ ಜನಸಾಮಾನ್ಯರ ಆರೋಗ್ಯದ ಮೇಲೆ ದುಷ್ಪರಿಣಾಮ ಉಂಟು ಮಾಡುತ್ತಿದೆ. ಕೊಪ್ಪಳ ಜಿಲ್ಲಾ ಕೇಂದ್ರದಿಂದ ಕೇವಲ ಒಂದು ಕಿ.ಮೀ. ಅಂತರದಲ್ಲಿ ಬಲ್ಲೋಟಾ ಕಂಪೆನಿ ಸಾವಿರಾರು ಎಕರೆ ಜಮೀನನ್ನು ಬಳಸಿಕೊಂಡು ಉಕ್ಕು ಹಾಗೂ ವಿದ್ಯುತ್ ಕಾರ್ಖಾನೆಯನ್ನು ವಿಸ್ತರಣೆ ಮಾಡಲು ಮುಂದಾಗಿದೆ. ಇದರ ವಿರುದ್ಧ ಕೊಪ್ಪಳ ಮತ್ತು ಸುತ್ತಮುತ್ತಲಿನ ಪ್ರದೇಶಗಳ ಜನರು ಪಕ್ಷಬೇದ ಮರೆತು ಚಳವಳಿಗೆ ಮುಂದಾಗಿದ್ದಾರೆ. ಪ್ರತಿಭಟನೆ ತೀವ್ರ ಸ್ವರೂಪ ತಾಳಿದಾಗ ಮುಖ್ಯ ಮಂತ್ರಿ ಸಿದ್ದರಾಮಯ್ಯನವರು ಮಧ್ಯ ಪ್ರವೇಶ ಮಾಡಿ ಬಲ್ಕೋಟಾ ಕಂಪೆನಿಯ ವಿಸ್ತರಣಾ ಕಾರ್ಯಕ್ಕೆ ತಡೆ ಹಾಕಿದ್ದಾರೆ. ಇದರಿಂದಾಗಿ ಕೊಂಚ ಉಸಿರಾಡಲು ಅವಕಾಶ ದೊರಕಿದೆಯಾದರೂ ಇದು ತಾತ್ಕಾಲಿಕ ಮಾತ್ರ ಇದಕ್ಕೊಂದು ಶಾಶ್ವತ ಪರಿಹಾರದ ಅಗತ್ಯವಿದೆ. ಈ ಅಪಾಯಕಾರಿ ಉದ್ಯಮಗಳ ಪೈಕಿ ಕೆಲವು ಉಕ್ಕು ಸಿಮೆಂಟ್, ರಸಗೊಬ್ಬರ ಉದ್ಯಮಗಳ ಘಟಕಗಳು ಕೈಗಾರಿಕಾ ತ್ಯಾಜ್ಯವನ್ನು ಸಂಸ್ಕರಿಸದೆ ಹೊರಗೆ ಬಿಡಲಾಗುತ್ತದೆ ಎಂಬ ದೂರುಗಳಿವೆ. ಈ ಅಪಾಯಕಾರಿ ತ್ಯಾಜ್ಯಗಳಿಂದಾಗಿ ಆ ಭಾಗದ ರೈತರ ಫಲವತ್ತಾದ ಜಮೀನುಗಳು ಬಂಜರು ಭೂಮಿಯಾಗಿ ಬದಲಾಗುತ್ತಿವೆ. ಕೈಗಾರಿಕೆಗಳ ತ್ಯಾಜ್ಯದಿಂದಾಗಿ ಕೃಷಿ ಚಟುವಟಿಕೆಗಳ ಮೇಲೆ ಕೆಟ್ಟ ಪರಿಣಾಮವನ್ನುಂಟು ಮಾಡುತ್ತಿದೆ. ಬೆಳೆ ಹಾನಿಯಾದ ರೈತರಿಗೆ ಪರಿಹಾರವನ್ನು ನೀಡುವುದಾಗಿ ಸದರಿ ಕಾರ್ಖಾನೆಯ ಮಾಲಕರು ಹೇಳುತ್ತಿದ್ದಾರೆ. ಆದರೆ ಅವರು ಕೊಡುವ ಪರಿಹಾರದ ಮೊತ್ತ ಅತ್ಯಂತ ಕಡಿಮೆ ಅಷ್ಟೇ ಅಲ್ಲ, ನ್ಯಾಯ ಸಮ್ಮತವಾಗಿಲ್ಲ ಎಂಬುದು ರೈತರ ಆಕ್ಷೇಪವಾಗಿದೆ. ಕೈಗಾರಿಕೆಗಳ ಮಾಲಕರು ಮಾಲಿನ್ಯ ತಡೆಯಲು ಸೂಕ್ತವಾದ ಕ್ರಮಗಳನ್ನು ಕೈಗೊಳ್ಳದ ಕಾರಣ ಕೈಗಾರಿಕೆಗಳ ಹಾರು ಬೂದಿ ನೇರವಾಗಿ ಜನರ ಶ್ವಾಸ ಕೋಶವನ್ನು ಸೇರುತ್ತದೆ. ಹೀಗಾಗಿ ಕೊಪ್ಪಳ ಸುತ್ತಮುತ್ತಲಿನ ಪ್ರದೇಶಗಳ ಶಾಲಾ ಮಕ್ಕಳಲ್ಲಿ ಹೆಚ್ಚಿನ ಮಟ್ಟದಲ್ಲಿ ಉಸಿರಾಟದ ತೊಂದರೆಗಳು ಕಾಣಿಸಿಕೊಳ್ಳುತ್ತಿದೆ. ಈ ಬಗ್ಗೆ ಸಾರ್ವಜನಿಕರಿಂದ ನಿರಂತರವಾಗಿ ದೂರುಗಳು ಬರುತ್ತಿದ್ದರೂ ಮಾಲಿನ್ಯ ನಿಯಂತ್ರಣ ಮಂಡಳಿ ಕಾಟಾಚಾರಕ್ಕೆ ಕೈಗಾರಿಕೆಗಳ ಮಾಲಕರಿಗೆ ನೋಟಿಸ್ ನೀಡುವುದನ್ನು ಬಿಟ್ಟರೆ, ನೇರವಾದ ಯಾವುದೇ ಕ್ರಮಗಳನ್ನು ಕೈಗೊಳ್ಳುತ್ತಿಲ್ಲ ಎಂಬ ಅಸಮಾಧಾನ ಕೊಪ್ಪಳ ಜಿಲ್ಲೆಯ ಜನರಲ್ಲಿ ವ್ಯಾಪಕವಾಗಿದೆ.ಮಾಲಿನ್ಯ ನಿಯಂತ್ರಣ ಮಂಡಳಿ ಎಂಬುದು ಇದೆಯೇ ಎಂಬ ಸಂದೇಹ ಬರುವಂತೆ ಅದು ನಡೆದುಕೊಳ್ಳುತ್ತಿದೆ. ಸಾರ್ವಜನಿಕ ಹಿತಾಸಕ್ತಿಯ ವಿಷಯದಲ್ಲಿ ಜನಸಾಮಾನ್ಯರು ಸರಕಾರದ ಮೇಲೆ ಇರಿಸಿರುವ ನಂಬಿಕೆಗೆ ದ್ರೋಹ ಬಗೆದಂತಾಗಿದೆ. ಜನಸಾಮಾನ್ಯರ ಮೇಲೆ, ಸಣ್ಣಪುಟ್ಟ ವ್ಯಾಪಾರಿಗಳ ಮೇಲೆ ಕ್ರಮಗಳನ್ನು ಕೈಗೊಳ್ಳುವ ಮಾಲಿನ್ಯ ನಿಯಂತ್ರಣ ಮಂಡಳಿ ದೊಡ್ಡ ಬಂಡವಾಳಗಾರರು ಮತ್ತು ಪ್ರಭಾವಿ ರಾಜಕಾರಣಿಗಳನ್ನು ಕಂಡರೆ ತೆಪ್ಪಗಾಗುತ್ತಿದೆ.ಮಾಲಿನ್ಯ ನಿಯಂತ್ರಣ ಮಂಡಳಿ ಪ್ರಭಾವಿ ರಾಜಕಾರಣಿಗಳು ಹಾಗೂ ಮಠಾಧೀಶರ ಕೈ ಗೊಂಬೆಯಂತೆ ವರ್ತಿಸಬಾರದು. ಜನ ಸಾಮಾನ್ಯರ ಆರೋಗ್ಯ ಜೀವನೋಪಾಯ ಸರಕಾರದ ಮುಖ್ಯ ಹೊಣೆಗಾರಿಕೆಯಾಗಿದೆ. ಕರ್ನಾಟಕ ರಾಜ್ಯದ ಸರ್ವತೋಮುಖ ಅಭಿವೃದ್ಧಿಗೆ ಕೈಗಾರಿಕೆಗಳ ಅಭಿವೃದ್ಧಿಯೂ ಅವಶ್ಯಕ. ಅದಕ್ಕಾಗಿ ಜನರ ಆರೋಗ್ಯ ಮತ್ತು ಪರಿಸರವನ್ನು ಬಲಿಕೊಡಬಾರದು. ಒಂದು ಮೂಲದ ಪ್ರಕಾರ ಬೆಂಗಳೂರಿನಲ್ಲಿ 300ಕ್ಕೂ ಅಧಿಕ ಅನಧಿಕೃತ ಕೈಗಾರಿಕೆಗಳಿದ್ದು ರಾಜ್ಯದಲ್ಲಿ 3,000ದಷ್ಟು ಕೈಗಾರಿಕೆಗಳು ಅನಧಿಕೃತವಾಗಿ ಕಾರ್ಯಾಚರಿಸುತ್ತಿವೆ. ಪರವಾನಿಗೆ ಪಡೆಯದೆ ಕಾರ್ಯನಿರ್ವಹಿಸುತ್ತಿರುವ ಈ ಕೈಗಾರಿಕೆಗಳು ಮಾಲಿನ್ಯ ನಿಯಂತ್ರಣ ಮಂಡಳಿಯ ಕಾನೂನಿನಿಂದ ಸುಲಭದಲ್ಲಿ ನುಣುಚಿಕೊಳ್ಳುತ್ತವೆ. ಇಂತಹ ಕೈಗಾರಿಕೆಗಳ ಮೇಲೆ ಕಠಿಣ ಕ್ರಮವನ್ನು ಕೈಗೊಂಡು ಅವುಗಳನ್ನು ಮಂಡಳಿಯ ವ್ಯಾಪ್ತಿಗೆ ತರಬೇಕು. ಅಥವಾ ಅವುಗಳಿಗೆ ಬೀಗ ಜಡಿಯಬೇಕು. ದೇಶದ ರಾಜಧಾನಿ ಹೊಸದಿಲ್ಲಿ ವಾಯು ಮಾಲಿನ್ಯಗಳಿಗಾಗಿ ಪ್ರತಿದಿನ ಮಾಧ್ಯಮಗಳಲ್ಲಿ ಸುದ್ದಿಯಾಗುತ್ತಿರುತ್ತವೆ. ಇದೀಗ ದೇಶದ ಇತರ ನಗರಗಳು ಕೂಡ ಮಾಲಿನ್ಯಕ್ಕಾಗಿ ದಿಲ್ಲಿಯೊಂದಿಗೆ ಸ್ಪರ್ಧೆಯಲ್ಲಿವೆ. ಕರ್ನಾಟಕವೂ ಇದಕ್ಕೆ ಹೊರತಾಗಿಲ್ಲ. ರಾಜ್ಯದ ನಾಲ್ಕು ಜಿಲ್ಲೆಗಳಲ್ಲಿ 2030ಕ್ಕೆ ಶೇ. 38ರಷ್ಟು ವಾಯುಮಾಲಿನ್ಯ ಹೆಚ್ಚಳವಾಗಲಿದೆ ಎಂದು ವರದಿಯೊಂದು ಹೇಳುತ್ತದೆ.

ರಾಮಾಯಣ

ಸೀತಾದೇವಿಯು ತಾನು ವನಕ್ಕೆ ಬರಲು ಕಾರಣಗಳನ್ನು ಹೇಳಿದ್ದು

• ಹಿಂದಿನ ಸಂಚಿಕೆಯಿಂದ 78 ನೆಯ ಅಧ್ಯಾಯ

ಋಷಿಗಳ ಹಾಗೆ ತಾವರೆಯ ಹೂಗಳನ್ನು ತಂದು ದೇವರ ಪೂಜೆಯನ್ನು ಮಾಡಬೇಕು. ಯಾವಯಾವ ದಿನದಲ್ಲಿ ಎಷ್ಟೆಷ್ಟು ಆಹಾರವು ದೊರೆಯುವುದೋ ಅಷ್ಟುಮಾತ್ರದಿಂದಲೇ ಸಂತೋಷಪಡಬೇಕು. ಒಂದೊಂದು ಸ್ಥಳದಲ್ಲಿ ಅತಿಭಯಂಕರವಾದ ಬಿರುಗಾಳಿಯು ಬೀಸುವುದು. ಅರಣ್ಯವು ನಾನಾ ಪ್ರಕಾರವಾದ ಸರ್ಪಗಳಿಂದ ಭಯಂಕರವಾಗಿರುವುದು. ನದಿಗಳಲ್ಲಿ ಹಾವುಗಳು ತುಂಬಿರುವುವು. ಚಿಕ್ಕ ನದಿಗಳು ದಾರಿಯನ್ನಡ್ಡಗಟ್ಟಿಕೊಂಡಿರುವುವು. ಗೂಬೆ ರಣಹದ್ದು ಮೊದಲಾದ ಭಯಂಕರವಾದ ಪಕ್ಷಿಗಳು ಧ್ವನಿಗೈಯುತ್ತಲಿರುವುವು. ಎಲ್ಲಿನೋಡಿದರೂ ಕ್ಷುದ್ರಜಂತುಗಳಾದ ಚೇಳು ಕಾಡುಸೊಣ ಸೊಳ್ಳೆಗಳು ಬಾಧಿಸುವುವು. ಮುಳ್ಳುಮರಗಳು ದರ್ಭೆಗಳು ಮೊದಲಾದ ಹೊದರುಗಳೂ ಆಕಾಶವನ್ನು ತುಡುಕುತ್ತಲಿರುವ ಮರಗಳೂ ಅತಿಭಯಂಕರವಾಗಿರುವುವು. ವನವಾಸವನ್ನು ಮಾಡುವವರು ಬಹಳವಾಗಿ ಕಾಯಕ್ಲೇಶಗಳನ್ನು ಅನುಭವಿಸಬೇಕು. ಕ್ರೋಧ ಲೋಭಗಳಿಲ್ಲದೆ ತಪಸ್ಸನ್ನೇ ಮಾಡಬೇಕು. ಪಾಪಕ್ಕೆ ಅಂಜಬೇಕು.

ಸುಖದುಃಖ ಶೀತೋಷ್ಣ ಮಾನಾವಮಾನವೆಂಬ ದ್ವಂದ್ವದುಃಖಗಳಿಗೆ ಅಂಜಬಾರದು, ಈ ರೀತಿಯಲ್ಲಿ ವನವಾಸವನ್ನು ಮಾಡುವವರಿಗೆ ಬಹುದುಃಖ ಗಳುಂಟು. ಆದ್ದರಿಂದ ನೀವು ಬರುವುದು ಯೋಗ್ಯವಲ್ಲ. ಹೀಗೆ ವನದಲ್ಲಿ ಸಂಚರಿಸುವುದು ಬಹುದುಖಕರವೆಂಧು ಆಲೋಚಿಸಿ ವಿನ್ಯನ್ನು ಕರೆದುಕೊಂಡಂಹೋಗುವುದಕ್ಕೆ ನನಗೆ ಬುದ್ಧಿ ಹುಟ್ಟಲಿಲ್ಲ ಎಂಧೂ-ಹೊಳಿದಮ. ಅನಂತರ ಸೀತಾದೇವಿಯು

ಶ್ರೀರಾಮನನ್ನು ಕುರಿತು ಹೇಳತೊಡಗಿದಳು: ಎಲೈ ಸ್ವಾಮಿಯೆ, ವನದಲ್ಲಿ ದುಃಖದೋಷ ಗಳುಂಟೆಂದೂ ಬಹು ಭಯವುಂಟೆಂದೂ ಹೇಳುತ್ತೀಯೆ. ಆ ದೋಷಗಳೆಲ್ಲವೂ ನಿನ್ನ ಜೊತೆಯಲ್ಲಿ ಬರುವ ನನಗೆ ನಿನ್ನ ಸಹವಾಸಾತಿಶಯದಿಂದ ಸುಖಸಾಧನಗಳಾಗುವುವು. ಸಿಂಹ ಕಾಡಾನೆ ವ್ಯಾಘ್ರ ಶರಭ ಚಮರೀಮೃಗ ಮೊದಲಾದ ಭಯಂಕರವಾದ ಮೃಗಗಳು ಮನುಷ್ಯರ ಸ್ವರೂಪವನ್ನು ಕಾಣದವಾದ್ದರಿಂದ ನಿನ್ನನ್ನು ಕಂಡು ಭೀತಿಪಟ್ಟು ಓಡಿಹೋಗುವವಲ್ಲದೆ ಎದುರಾಗಿ ಬರಲಾರವು. ನಿನ್ನ ತಂದೆಯು ನಿನಗೆ ಗುರುವಾದಕಾರಣ ಆತನ ಆಜ್ಞೆಯನ್ನು ಮೀರಬಾರದೆಂದು ಹೇಗೆ ವನಕ್ಕೆ ತೆರಳುತ್ತಿದ್ದೀಯೋ, ಆ ರೀತಿಯಲ್ಲಿ ನಾನು ನಿನ್ನ ಶರೀರದೊಳಗೆ ಅಂತರ್ಭೂತಳಾದ್ದರಿಂದ ನನಗೂ ದಶರಥರಾಯನ ವಾಕ್ಯವನ್ನು ಮೀರಬಾರದೆಂಬ ಶಾಸ್ತ್ರವು ಅನ್ವಯಿಸುತ್ತದೆ. ಆದಕಾರಣ ನಾನು ನಿನ್ನ ಸಂಗಡ ವನಕ್ಕೆ ಬರುವುದು ನಿಶ್ಚಯ. ಅಲ್ಲದಿದ್ದರೆ ನಿನ್ನ ಅಗಲಿಕೆಯಿಂದ ನಾನು ಶರೀರವನ್ನು ಬಿಡುವೆನು. ನನಗೆ ವನದಲ್ಲಿ ಕಷ್ಟವೆಂದು ತಿಳಿಯಬೇಡ. ನಾನು ನಿನ್ನ ಸಮೀಪದಲ್ಲಿದ್ದರೆ ಸಮಸ್ತ ದೇವತೆ ಗಳಿಗೂ ಒಡೆಯನಾದ ದೇವೇಂದ್ರನಾದರೂ ತನ್ನ ಸಾಮರ್ಥ್ಯದಿಂದ ನನ್ನನ್ನು ಕಣ್ಣೆತ್ತಿನೋಡಲಾರನು.

ಮುಂದುವರಿಯುವುದು...

ನನ್ನಾಕೆ ಹೇಳಿದ್ದು

ವಿಶ್ವಾಸ್.ಡಿ.ಗೌಡ
• ಉದಯವಾಹಿನಿ, ವಿಶೇಷ

ನನ್ನಾಕೆ ಹೇಳಿದ್ದು ಇದು ಸಮುದ್ರವಳ್ಳಿ ವಾಸು ಅವರ ಹನಿಗವನಗಳ ಸಂಕಲನ. ಈ ಕೃತಿಗೆ ಮುರಳೀರವರು ಮುನ್ನುಡಿಯನ್ನು ಬರೆದಿದ್ದಾರೆ. ಯಮನಂದನ ಪ್ರಕಾಶನಅವರಿಂದ ಪ್ರಕಟಣೆಗೊಂಡಿದೆ.

ಪ್ರತಿಯೊಬ್ಬರ ಮನಸ್ಸಿನಲ್ಲೂ ತನ್ನ ನಿತ್ಯಕರ್ಮಗಳ ಜೊತೆ ಜೊತೆಗೇ ಅನೇಕ ರೀತಿಯ ವಿಭಿನ್ನ ಆಲೋಚನೆಗಳು ಮೂಡಿಬರುತ್ತವೆ. ಅದು ನಿಸರ್ಗ ಸಹಜ ಕೂಡಾ. ಆತನಿಗೆ ತನ್ನಲ್ಲಿ ಮೂಡಿಬರುವ ಆಲೋಚನೆಗಳನ್ನು ಮತ್ತೊಬ್ಬರಿಗೆ ಹೇಳಿ ಅದರ ಕುರಿತಾದ ಅಭಿಪ್ರಾಯ ಪಡೆಯುವ ಹಂಬಲ ಕೂಡಾ ಅಷ್ಟೇ ಸಹಜ ಪ್ರಕ್ರಿಯೆ. ಆದರೆ ಅದನ್ನು ಮತ್ತೊಬ್ಬರಿಗೆ ಹೇಳುವ ಅಥವಾ ಮುಟ್ಟಿಸುವ ರೀತಿ ಅನೇಕರಿಗೆ ದೊರಕದೆ ಸಾಧ್ಯವಾಗದೆ ಹೋಗಬಹುದು. ಆದರೆ, ತನ್ನಲ್ಲಿ ಮೂಡಿದ ವಿಚಾರಗಳನ್ನು ಒಬ್ಬ ಕತೆಗಾರ ಒಂದು ಕತೆಯ ಮೂಲಕವೂ, ಒಬ್ಬ ನಿರ್ದೇಶಕ ಒಂದು ನಾಟಕ ಅಥವಾ ಚಲನಚಿತ್ರದ ಮೂಲಕ, ಒಬ್ಬ ಚಿತ್ರಕಾರ ಒಂದು ಚಿತ್ರದ ಮೂಲಕ ತಿಳಿಸುವಂತೆ ಒಬ್ಬ ಕವಿ ತನ್ನ ಕವನದ ಮೂಲಕ ತಿಳಿಯಪಡಿಸುತ್ತಾನೆ.

ಕಲೆಗಳಲ್ಲಿ ಕಾವ್ಯವೂ ಒಂದು ಕಲೆ, ಸೌಂದರ್ಯ ಅದರ ಇನ್ನೊಂದು ಹೆಸರು. ಬರಿಗಣ್ಣಿಗೆ ಕಾಣುವ ಸೌಂದರ್ಯವೇ ಬೇರೆ, ಒಳಗಣ್ಣಿಗೆ ಕಾಣುವ ಸೌಂದರ್ಯವೇ ಬೇರೆ. ಬಾಹ್ಯದಲ್ಲಿ ಕಾಣುವ ಸೌಂದರ್ಯ ಕ್ರಮೇಣ ಒಳಗಣ್ಣಿಗೆ ಇಳಿದು ನವರಸಗಳಲ್ಲಿ ರೂಪುಗೊಂಡು ಕಾವ್ಯವೋ, ಪದ್ಯವೋ ಆಗಿ ಪದಗಳ ಮೂಲಕ, ಧ್ವನಿಗಳ ಮೂಲಕ ಓದುಗರಿಗೆ, ಶ್ರೋತೃಗಳಿಗೆ ತಲುಪುತ್ತದೆ. ಕಣ್ಣಿಗೆ ಕಾಣದ ವಿದ್ಯುತ್ತು ತಂತಿಗಳ ಮೂಲಕ ಹರಿಯುವಂತೆ, ಸೃಜನಶೀಲ ವ್ಯಕ್ತಿಯ ಮೂಲಕ ಜಗತ್ತಿನ ಭಾವ ಅನುಭಾವಗಳು ಕಾವ್ಯರಸವಾಗಿ 'ಕವಿವಾಹಕ'ನ ಮೂಲಕ ಹರಿಯುತ್ತದೆ. ಪಂಚೇಂದ್ರಿಯಗಳಿಗೆ ಸಿಕ್ಕಿದ, ಜಗತ್ತಿನ ಮತ್ತು ಅದರಾಚೆಗಿನ ವಿಷಯಗಳು ಕಾವ್ಯವಾಗಿ ಜನರಿಂದ ಜನರಿಗೆ ಸಂವಹನಗೊಳ್ಳಬೇಕಾದರೆ ಕವಿ ವಾಹಕ ನಾಗಿರಬೇಕು. ನಾನು ಕೇಳಿದ್ದೇನೆ. ಆದರೆ ಸಾಧ್ಯವಾದಷ್ಟೂ ಪ್ರಾಸಗಳನ್ನು ಹೊಂದಿಸಿ ರಚಿಸಿದರೆ ಓದುಗನ ಮನದಲ್ಲಿ ಅಳಿಯದ ಅಚ್ಚತುವ ಸಂಭವ ಹೆಚ್ಚು. ಉದಾಹರಣೆಗೆ ಜಿ.ಪಿ. ರಾಜರತ್ನಂರವರ 'ಒಂದು ಎರಡು ಬಾಳೆಲೆ ಹರಡು. ಎಂಬ ಮಕ್ಕಳ ಪದ್ಯ, ಅದನ್ನು ರಚಿಸಿ ದಶಕಗಳೇ ಸಂದರೂ ಇಂದಿಗೂ ಪ್ರಸ್ತುತವಾಗಿರುವುದರ ಜೊತೆಗೆ ಹಿರಿಯರ ಕಿರಿಯರ ಬೇಧವಿಲ್ಲದೆ ಎಲ್ಲರ ನಾಲಿಗೆಯಲ್ಲೂ ನಲಿದಾಡುತ್ತಿದೆ. ಅದರಂತೆಯೇ ಸರ್ವಜ್ಞನ ವಚನಗಳೂ ಸಹ. ಹಾಗಾಗಿ ಹನಿಗವನಗಳಲ್ಲಿ ಪಾಸವಿದ್ದರೆ ಉತ್ತಮ. ಯಾವುದೇ ಪ್ರಕಾರದ ಕವನಗಳಲ್ಲಿ ಪ್ರಾಸ, ಪ್ರತಿಮೆ, ಹಾಗೂ ರೂಪಕಗಳನ್ನು ಬಳಸಿ ಸರಳ ಪದಗಳ ಮುಖಾಂತರ ಪದ್ಯಕಟ್ಟಿದರೆ ಅವು ಬಹುಬೇಗ ಮನಸ್ಸನ್ನು ಹೊಕ್ಕುತ್ತವೆ. ಈ ಕೃತಿಯಲ್ಲಿ ತುಂಬಾ ಸುಂದರವಾದ ಹನಿಗವನಗಳಿವೆ ಈ ಕೃತಿಯನ್ನು ಎಲ್ಲರೂ ಓದಿ ಮತ್ತು ಕವಿಗಳಿಗೆ ಹರಸಿ ಎಂದು ಈ ಮೂಲಕ ಕೇಳಿಕೊಳ್ಳುತ್ತಿದ್ದೇನೆ.



ನವಾಜುದ್ದೀನ್ ಸಿದ್ದಿಕಿ ಬಿಗ್ ಕ್ಯಾಶ್ ಮೇಲೆ ಕ್ರಮ ಕೈಗೊಳ್ಳಲಾಗುವುದು

• ಉದಯವಾಹಿನಿ, ಬೆಂಗಳೂರು

ಹಿಂದೂ ಜನಜಾಗೃತಿ ಸಮಿತಿಯ ಸುರಾಜ್ಯ ಅಭಿಯಾನದ ಬೆಂಬೆತ್ತುವಿಕೆಯ ನಂತರ ಪೊಲೀಸರ ಸಮವಸ್ತ್ರದಲ್ಲಿ ನಟ ನವಾಜವುದ್ದಿನ ಸಿದ್ದಿಕಿ ಇವರನ್ನು ತೋರಿಸಿ ಜನರಿಗೆ ಜೂಜಾಡಲು ಪ್ರಚೋದಿಸುವ ವಿವಾದಿತ ಬಿಗ್ ಕ್ಯಾಶ್ ಪೋಕರ್ ಜಾಹೀರಾತು ಸೋಶಿಯಲ್ ಮೀಡಿಯಾದಿಂದ ಕೊನೆಗೂ ತೆರವುಗೊಂಡಿದೆ ; ಆದರೆ ಇಲ್ಲಿಯವರೆಗೆ ತಪ್ಪಿತಸ್ಥರ ಮೇಲೆ ಕ್ರಮ ಕೈಗೊಂಡಿಲ್ಲ.

ಆದ್ದರಿಂದ ಸುರಾಜ್ಯ ಅಭಿಯಾನದ ವತಿ ಯಿಂದ ಶ್ರೀ ಸತೀಶ ಸೋನಾರ, ಶ್ರೀ ರವಿ ನಲಾವಡೆ ಇವರು ಮಹಾರಾಷ್ಟ್ರದ ಗೃಹಮಂತ್ರಿ ಶ್ರೀ ಯೋಗೇಶ್ ಕದಮ ಇವರನ್ನು ಭೇಟಿ ಮಾಡಿದರು ಮತ್ತು ಈ ಜಾಹೀರಾತು ಪೊಲೀಸ ಪಡೆಯ ಪ್ರತಿಷ್ಠೆಗೆ ಧಕ್ಕೆ ತರುವಂತಹ ಗಂಭೀರ ಪ್ರಕರಣ ಎಂದು ಗಮನಕ್ಕೆ ತರಲಾಯಿತು.

ಈ ಭೇಟಿಯಲ್ಲಿ ವಿಷಯದ ಗಾಂಭೀರ್ಯವನ್ನು ಗಮನಿಸಿ ಗೃಹ ರಾಜ್ಯ ಮಂತ್ರಿ ಶ್ರೀ. ಯೋಗೇಶ ಕದಮ ಇವರು ಮುಂಬಯಿ ಪೊಲೀಸ ಅಧಿಕಾರಿಗಳಿಗೆ ತಪಾಸಣೆ ನಡೆಸಿ ಕ್ರಮ ಕೈಗೊಳ್ಳುವ ಆದೇಶ ನೀಡಿದ್ದಾರೆ. ಈ ಜಾಹೀರಾತನ್ನು ತೆರವುಗೊಳಿಸಲಾಗಿದ್ದರೂ, ನಟ ನವಾಜುದ್ದಿನ ಸಿದ್ದಿಕಿ ಮತ್ತು ಬಿಗ್ ಕ್ಯಾಶ್ ನ ಮಾಲಿಕ ಅಂಕೂರ್ ಸಿಂಗ್ ಇವರ ಮೇಲೆ ಇಲ್ಲಿಯವರೆಗೆ ಯಾವುದೇ ಕ್ರಮ ಕೈಗೊಳ್ಳಲಾಗಿಲ್ಲ. ಸುರಾಜ್ಯ ಅಭಿಯಾನವು ಈ ಪ್ರಕರಣದ ಕುರಿತು ಆಗಾಗ ಫೇಸ್ಬುಕ್, ಯೂಟ್ಯೂಬ್ ಮತ್ತು ಟ್ವಿಟರ್ (ಫಿ) ಇವುಗಳ ದೂರು ನಿವಾರಣೆ ಅಧಿಕಾರಿಗಳ ಬಳಿ ದೂರುಗಳನ್ನು ನೀಡಿತ್ತು; ಆದರೆ ಯಾವುದೇ ಕ್ರಮ ಕೈಗೊಂಡಿಲ್ಲ.

ಕೊನೆಗೆ ದೂರು ಅಪಿಲ ಸಮಿತಿ (GAC) ಗೆ ದೂರು ನೀಡಿದ ನಂತರ ಈ ಜಾಹೀರಾತು ತೆರವು ಗೊಳಿಸಲಾಗಿದೆ. ಸರ್ವೋಚ್ಚ ನ್ಯಾಯಾಲಯದ ನ್ಯಾಯವಾದಿ ಅಮಿತಾ ಸಚದೇವಾ ಇವರಿಂದಾದ ಕಾನೂನುರೀತ್ಯಾ ಹಸ್ತಕ್ಷೇಪದಿಂದ ಈ ಯಶಸ್ಸು ದೊರೆತಿದೆ.

ಉದಯವಾಹಿನಿ ಚಿತ್ರ

ಕಂಪನಿಯ ಮೇಲೆ ಕಠಿಣ ಕ್ರಮ

**ಯಾವ ಪೊಲೀಸ ಇಲಾಖೆ ಜೂಜ ಆಡುವವರ ಮೇಲೆ ದೂರು ದಾಖಲಿಸಿ ಅವರನ್ನು ಬಂಧಿಸುತ್ತದೆಯೋ, ಅದೇ ಪೊಲೀಸರ ಉಡುಪಿನಲ್ಲಿ ಇಂತಹ ಜಾಹೀರಾತು

ಶೇ.4 ರಷ್ಟು ಮೀಸಲಾತಿ, 18 ಜನ ಶಾಸಕರ ಅಮಾನತು ಆದೇಶ ರದ್ದತಿಗೆ ಆಗ್ರಹಿಸಿ ಬಿಜೆಪಿ ಪ್ರತಿಭಟನೆ

• ಉದಯವಾಹಿನಿ ಕಲಬುರಗಿ

ರಾಜ್ಯದಲ್ಲಿ ಮುಸಲ್ಮಾನರಿಗೆ ಸರಕಾರಿ ಕಾಮಗಾರಿಯಲ್ಲಿ ಶೇ.4 ರಷ್ಟು ಮೀಸಲಾತಿ ನೀಡಿರುವುದನ್ನು ಮತ್ತು 18 ಜನ ಬಿಜೆಪಿ ಶಾಸಕರನ್ನು ಅಮಾನತ್ತು ಮಾಡಿರುವುದನ್ನು ರದ್ದುಪಡಿಸುವಂತೆ ಆಗ್ರಹಿಸಿ ಬಿಜೆಪಿ ಕಾರ್ಯಕರ್ತರು ನಗರದ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಬೃಹತ್ ಪ್ರತಿಭಟನೆ ನಡೆಸಿದರು.

ಪ್ರತಿಭಟನೆ ನಂತರ ಜಿಲ್ಲಾಧಿಕಾರಿಗಳ ಮುಖಾಂತರ ರಾಜ್ಯಪಾಲರಿಗೆ ಮನವಿಪತ್ರ ಸಲ್ಲಿಸಲಾಯಿತು.

ರಾಜ್ಯ ಸರ್ಕಾರ ಮುಸಲ್ಮಾನರಿಗೆ ಬಜೆಟ್‌ನಲ್ಲಿ ಶೇ.4 ರಷ್ಟು ಧರ್ಮಾಧರಿತ ಮೀಸಲಾತಿ ನೀಡಿರುವುದು ಸಂವಿಧಾನ ಬಾಹಿರವಾಗಿದ್ದು, ಇದರಿಂದ ಹಿಂದುಳಿದ ವರ್ಗದವರಿಗೆ ಅನ್ಯಾಯವಾಗಿದೆ. ಹಿಂದಿನ ಬಿಜೆಪಿ ಸರ್ಕಾರ ಹಿಂದುಳಿದ ಸಣ್ಣ ಸಮುದಾಯಗಳನ್ನು ಗುರುತಿಸಿ ಅಭಿವೃದ್ಧಿ ನಿಗಮಗಳನ್ನು ಸ್ಥಾಪಿಸುವುದರ ಮೂಲಕ ಅವರನ್ನು ಶೈಕ್ಷಣಿಕವಾಗಿ ಮತ್ತು ಆರ್ಥಿಕವಾಗಿ ಮುಖ್ಯವಾಹಿನಿಗೆ ತರಲು 2000 ಕೋಟಿ ರೂ.ಅನುದಾನ ನೀಡಿತ್ತು. ಆದರೆ ಕಾಂಗ್ರೇಸ್ ಸರ್ಕಾರ ಹಿಂದುಳಿದ ವರ್ಗದವರಿಗೆ ಬಜೆಟ್‌ನಲ್ಲಿ ಒಂದು ಪೈಸೆಯೂ ಕೂಡ ಘೋಷಣೆ ಮಾಡದೆ ಮುಸಲ್ಮಾನರಿಗೆ ಶೇ.4 ರಷ್ಟು ಮೀಸಲಾತಿ ನೀಡಿರುವುದು ಸಂವಿಧಾನ ಬಾಹಿರವಾಗಿದೆ. ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಅವರು ಸಾಧ್ಯವಾದರೆ ಸಂವಿಧಾನ ಬದಲಾಯಿಸಿ ಮುಸಲ್ಮಾನರಿಗೆ ಮೀಸಲಾತಿ ನೀಡುತ್ತೇವೆ ಎಂದು ಅತಿರೇಕದ ಮಾತುಗಳನ್ನು ಆಡಿರುವುದು ಖಂಡನೀಯವಾಗಿದೆ.

ಆದ್ದರಿಂದ ಶೇ.4 ರಷ್ಟು ಮೀಸಲಾತಿ ರದ್ದುಪಡಿಸಬೇಕು ಮತ್ತು ಕರ್ನಾಟಕ ವಿಧಾನಸಭೆಯಲ್ಲಿ ಬಿಜೆಪಿಯ 18 ಜನ ಸದಸ್ಯರನ್ನು ಸಭಾಪತಿಗಳು ಅಮಾನತ್ತುಗೊಳಿಸಿರುವ ಆದೇಶವನ್ನು ಕೂಡಲೇ ರದ್ದುಪಡಿಸಬೇಕು ಎಂದು ಮನವಿ ಪತ್ರದಲ್ಲಿ ಆಗ್ರಹಿಸಲಾಗಿದೆ.

ಉದಯವಾಹಿನಿ ಚಿತ್ರ

ಆಸ್ತಿ ಘೋಷಣೆ ಮಾಡದ ಎಲ್ಲಾ 35 ಪಾಲಿಕೆ ಸದಸ್ಯರ ಸದಸ್ಯತ್ವ ಅನರ್ಹ

• ಉದಯವಾಹಿನಿ ವಿಜಯಪುರ

ವಿಜಯಪುರ ಮಹಾನಗರ ಪಾಲಿಕೆಯ ಎಲ್ಲಾ 35 ಸದಸ್ಯರ ಸದಸ್ಯತ್ವ ಅನರ್ಹಗೊಳಿಸಿ ಬೆಳಗಾವಿ ಪ್ರಾದೇಶಿಕ ಆಯುಕ್ತ ಸಂಜಯ ಶೆಟ್ಟೆಣ್ಣವರ ಆದೇಶ ಹೊರಡಿಸಿದ್ದಾರೆ. ಆಸ್ತಿ ಘೋಷಣೆ ಮಾಡದ ಹಿನ್ನಲೆಯಲ್ಲಿ ಬಿಜೆಪಿಯ 17, ಕಾಂಗ್ರೇಸ್ 10, ಜೆಡಿಎಸ್ 1, ಎಂಐಎಂ 2, ಪಕ್ಷೇತರರು 5 ಸದಸ್ಯರ ಸದಸ್ಯತ್ವ ಅನರ್ಹಗೊಳಿಸಿ ಆದೇಶ ಮಾಡಲಾಗಿದೆ.

ಉದಯವಾಹಿನಿ ಚಿತ್ರ

2022ರಲ್ಲಿ ನಡೆದ ಪಾಲಿಕೆ ಚುನಾವಣೆಯಲ್ಲಿ ಆಯ್ಕೆಯಾಗಿದ್ದ ಸದಸ್ಯರು ನಂತರ 2024 ರ ಜನೇವರಿ 9 ರಂದು ಮೇಯರ್ ಉಪ ಮೇಯರ್ ಚುನಾವಣೆ ನಡೆದಿತ್ತು. ಕಾಂಗ್ರೇಸ್‌ನ ಮೆಹೆಜಬೀನ್ ಹೊರ್ತಿ ಮೇಯರ್ ಆಗಿ ದಿನೇಶ ಹಳ್ಳಿ ಉಪಮೇಯರ್ ಆಗಿ ಆಯ್ಕೆಯಾಗಿದ್ದರು. ಆದರೆ ಯಾವುದೇ ಸದಸ್ಯರು ಕಾನೂನು ಪ್ರಕಾರ ಆಸ್ತಿ ಘೋಷಣಾ ಪತ್ರ ಸಲ್ಲಿಕೆ ಮಾಡಿರಲಿಲ್ಲ. ಇದನ್ನು ಪ್ರಶ್ನಿಸಿ ಮಾಜಿ ಸದಸ್ಯರಾದ ಪ್ರಕಾಶ ಮಿರ್ಜಿ ಮೈನುದ್ದೀನ್ ಬೀಳಗಿ ಕಲಬುರಗಿ ಹೈಕೋರ್ಟ್ ಮೊರೆ ಹೋಗಿದ್ದರು. ಹೈಕೋರ್ಟ್ ಈ ಸಂಬಂಧ ಕ್ರಮ ತೆಗೆದುಕೊಳ್ಳಲು ಸರ್ಕಾರಕ್ಕೆ ಸೂಚಿಸಿತ್ತು. ಈ ಹಿನ್ನಲೆ ಪರಿಶೀಲನೆ ಮಾಡಿ ವಿಚಾರಣೆ ನಡೆಸಿ ಎಲ್ಲಾ 35 ಸದಸ್ಯರ ಸದಸ್ಯತ್ವ ಅನರ್ಹತೆ ಮಾಡಿ ಪ್ರಾದೇಶಿಕ ಆಯುಕ್ತರು ಆದೇಶ ಹೊರಡಿಸಿದ್ದು, ಈಗ ಮಹಾನಗರ ಪಾಲಿಕೆಯ ಎಲ್ಲಾ ಸದಸ್ಯರು ಅಧಿಕಾರ ಕಳೆದುಕೊಂಡಂತಾಗಿದೆ. ಮತ್ತೆ ಪಾಲಿಕೆಗೆ ಚುನಾವಣೆ ನಡೆಯುವ ಸಾಧ್ಯತೆ ದಟ್ಟವಾಗಿದೆ.

ತಾಯಿ ಮರಣ, ಸಿಜೇರಿಯನ್ ಹೆರಿಗೆ ಪ್ರಮಾಣ ಹೆಚ್ಚಳಕ್ಕೆ ಸಚಿವ ಡಿ. ಸುಧಾಕರ್ ಕಳವಳ

ಸರ್ಕಾರಿ ಆಸ್ಪತ್ರೆಗಳಲ್ಲಿಯೇ ಯಾಕೆ ತಾಯಿ ಮರಣ ಸಂಭವಿಸುತ್ತದೆ

• ಉದಯವಾಹಿನಿ ಚಿತ್ರದುರ್ಗ

ರಾಜ್ಯದ ಸರಾಸರಿಗಿಂತಲೂ, ಜಿಲ್ಲೆಯಲ್ಲಿ ತಾಯಿ ಮರಣ, ಶಿಶು ಮರಣ ಹಾಗೂ ಸಿಜೇರಿಯನ್ ಪ್ರಮಾಣ ಹೆಚ್ಚಳಕ್ಕೆ ಕೆಡಿಪಿ ಸಭೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್ ಅವರು ಕಳವಳ ವ್ಯಕ್ತಪಡಿಸಿ, ತಾಯಿ ಮರಣ, ಶಿಶು ಮರಣಕ್ಕೆ ಸಂಬಂಧಿಸಿದಂತೆ ಪ್ರತಿ ಕೇಸ್‌ಗೂ ಪ್ರತ್ಯೇಕ ವಿಶ್ಲೇಷಣಾ ವರದಿ ಸಲ್ಲಿಸುವಂತೆ ಆರೋಗ್ಯ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಉದಯವಾಹಿನಿ ಚಿತ್ರ

ಕೆಡಿಪಿ ತ್ರೈಮಾಸಿಕ ಸಭೆ

ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಜರುಗಿದ ತ್ರೈಮಾಸಿಕ ಕೆಡಿಪಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ರಾಜ್ಯದ ಸರಾಸರಿಗಿಂತಲೂ ಜಿಲ್ಲೆಯಲ್ಲಿ ತಾಯಿ ಮರಣ, ಶಿಶು ಮರಣ ಹಾಗೂ ಸಿಜೇರಿಯನ್ ಪ್ರಮಾಣ ಹೆಚ್ಚಳಕ್ಕೆ ಕೆಡಿಪಿ ಸಭೆಯಲ್ಲಿ ಸಚಿವರು ಸೇರಿದಂತೆ ಶಾಸಕರು ತೀವ್ರ ಕಳವಳ ವ್ಯಕ್ತಪಡಿಸಿದರು.

ಹೊಸದುರ್ಗ ಶಾಸಕ ಬಿ.ಜಿ.ಗೋವಿಂದಪ್ಪ ಮಾತನಾಡಿ, ಹೊಸದುರ್ಗ ತಾಲ್ಲೂಕಿನಲ್ಲಿಯೂ ಗರ್ಭಿಣಿಯರ ಸಾವು ಹಾಗೂ ಬಾಲ ಗರ್ಭಿಣಿಯರ ಸಂಖ್ಯೆ ಹೆಚ್ಚಳವಾಗುತ್ತಿದೆ. ತಾಯಿ ಮರಣ, ಶಿಶು ಮರಣ ತಡೆಯುವವರು ಯಾರು ಎಂದು ಪ್ರಶ್ನಿಸಿದ ಅವರು, ಆರೋಗ್ಯ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯವರು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು. ವಿಧಾನ ಪರಿಷತ್ ಸದಸ್ಯ ಕೆ.ಎಸ್ ನವೀನ್ ಮಾತನಾಡಿ, ತಾಯಿ ಮರಣ, ಶಿಶು ಮರಣ ಹಾಗೂ ಸಿಜೇರಿಯನ್ ಹೆಚ್ಚಳ ಕುರಿತಂತೆ ಆರೋಗ್ಯ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಧಿಕಾರಿಗಳಿಗೆ ವರದಿ ನೀಡುವಂತೆ ನೋಟಿಸ್ ನೀಡುವಂತೆ ತಾಕೀತು ಮಾಡಿದರು.

ತಾಯಿ ಮರಣ, ಶಿಶು ಮರಣಕ್ಕೆ ಸಂಬಂಧಿಸಿದಂತೆ ಪ್ರತಿ ಕೇಸ್‌ಗೂ ಪತ್ಯೇಕ ವಿಶ್ಲೇಷಣಾ ವರದಿ ನೀಡುವಂತೆ ಜಿಲ್ಲಾ ಆರೋಗ್ಯಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್ ಅವರಿಗೆ ಜಿಲ್ಲಾ ಉಸ್ತುವಾರಿ ಸಚಿವರು ಸೂಚನೆ ನೀಡಿದರು.

> ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿಯೂ ತಾಯಿ ಮತ್ತು ಮಕ್ಕಳ ಆಸ್ಪತ್ರೆಗಳು ಕಾರ್ಯನಿರ್ವಹಿಸುತ್ತಿವೆ. ಆಸ್ಪತ್ರೆಗಳಲ್ಲಿ ತಜ್ಞ ವೈದ್ಯರು ಇದ್ದಾರೆ. ಜತೆಗೆ ಪೂರಕ ಪೌಷ್ಠಿಕ ಆಹಾರ, ಅಗತ್ಯ ಔಷಧಿಗಳು ಇವೆ. ಆದಾಗ್ಯೂ ಸರ್ಕಾರಿ ಆಸ್ಪತ್ರೆಗಳಲ್ಲಿಯೇ ಯಾಕೆ ತಾಯಿ ಮರಣ ಸಂಭವಿಸುತ್ತದೆ. ಬಡವರ ಹೆಣ್ಣು ಮಕ್ಕಳ ಸಾವಿಗೆ ಬೆಲೆ ಇಲ್ಲವೇ? ಇದಕ್ಕೆ ವೈದ್ಯರ ನಿರ್ಲಕ್ಷ್ಯವೇ ಕಾರಣ ಎಂದು ಆರೋಪಿಸಿದ ಅವರು, ಇದರ ಬಗ್ಗೆ ಹೆಚ್ಚಿನ ಗಮನಹರಿಸಬೇಕು
–ಡಾ. ಎಂ.ಚಂದ್ರಪ್ಪ, ಹೊಳಲ್ಕೆರೆ ಶಾಸಕ

ಜಿಲ್ಲೆಯಲ್ಲಿ ತಾಯಿ ಮರಣ, ಶಿಶು ಮರಣ ಕಡಿಮೆ ಮಾಡುವ ನಿಟ್ಟಿನಲ್ಲಿ ಪ್ರತಿ ತಿಂಗಳು 6ನೇ ತಾರೀಖು ಹಾಗೂ 24 ನೇ ತಾರೀಖು ಗರ್ಭಿಣಿಯರಿಗೆ ವಿವಿಧ ಪರೀಕ್ಷೆಗಳನ್ನು ನಡೆಸಿ, ಅವರಿಗೆ ಕಬ್ಬಿಣಾಂಶದ ಮಾತ್ರೆ ಸೇರಿದಂತೆ ವಿವಿಧ ಅಗತ್ಯ ಚಿಕಿತ್ಸೆ ಔಷಧಗಳನ್ನು ನೀಡಲಾಗುತ್ತಿದೆ ಎಂದು ಡಾ. ರೇಣುಪ್ರಸಾದ್ ಮಾಹಿತಿ ನೀಡಿದರು.

> ಸಹಜ ಹೆರಿಗೆ ಮಾಡಿಸಲು ಶಿಫಾರಸ್ಸು ಮಾಡುವಂತೆ ಮನೆಗೆ ಬಂದು ಅಳಲು ತೋಡಿಕೊಳ್ಳುತ್ತಿದ್ದಾರೆ. ಸಾರ್ವಜನಿಕರಿಗೆ ಸಹಜ ಹೆರಿಗೆಯ ಅರಿವು ಆಗಿದೆ. ಆದರೆ ವೈದ್ಯಾಧಿಕಾರಿಗಳೇ ಸಿಜೇರಿಯನ್‌ಗೆ ಮುಂದಾಗುತ್ತಿದ್ದಾರೆ. ಸಹಜ ಹೆರಿಗೆ ಮಾಡಿಸುವಂತೆ ಶಿಫಾರಸ್ಸು ಮಾಡುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು
–ಕೆ.ಸಿ.ವೀರೇಂದ್ರ ಪಪ್ಪಿ, ಶಾಸಕ

ಸಭೆಯಲ್ಲಿ ಶಾಸಕರಾದ ಎನ್.ವೈ. ಗೋಪಾಲಕೃಷ್ಣ, ಟಿ.ರಘುಮೂರ್ತಿ, ಬಿ.ಜಿ. ಗೋವಿಂದಪ್ಪ, ಡಾ.ಎಂ.ಚಂದ್ರಪ್ಪ, ಕೆ.ಸಿ. ವೀರೇಂದ್ರ ಪಪ್ಪಿ, ವಿಧಾನ ಪರಿಷತ್ ಸದಸ್ಯ ಕೆ.ಎಸ್.ನವೀನ್, ಜಿಲ್ಲಾ ಗ್ಯಾರಂಟಿ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಆರ್.ಶಿವಣ್ಣ, ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿಲ್ಲಾ ಪಂಚಾಯಿತಿ ಸಿಇಒ ಎಸ್.ಜೆ. ಸೋಮಶೇಖರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಇದ್ದರು.

ಮಿನಿ ನ್ಯೂಸ್

ಮೊಬೈಲ್, ನಗದು ಕಳ್ಳತನ ಪ್ರಕರಣ ಆರೋಪಿಯನ್ನು ಬಂಧಿಸಿದ ಪೊಲೀಸರು

• ಉದಯವಾಹಿನಿ ಉಡುಪಿ

ಮಲ್ಪೆ ಪೊಲೀಸ್ ಠಾಣಾ ವ್ಯಾಪ್ತಿಯ ಸಂತೆಕಟ್ಟೆಯಲ್ಲಿ ನಡೆದ ಮೊಬೈಲ್ ಫೋನ್ ಕಳವು ಘಟನೆಗೆ ಸಂಬಂಧಿಸಿದಂತೆ ಮಲ್ಪೆ ಪೊಲೀಸರು ವ್ಯಕ್ತಿಯನ್ನು ಬಂಧಿಸಿದ್ದಾರೆ. ಮಾರ್ಚ್ 21 ರಂದು ಬಾಗಲಕೋಟೆ ಜಿಲ್ಲೆಯ ನಿವಾಸಿ ಸರಸ್ವತಿ (21) ತನ್ನ ಮಗುವಿನೊಂದಿಗೆ ಕೆಲಾರ್ಕಳಬೇಟು-ಸಂತೆಕಟ್ಟೆ ರಸ್ತೆಯಲ್ಲಿ ನಡೆದುಕೊಂಡು ಹೋಗುತ್ತಿದ್ದಾಗ ಈ ಘಟನೆ ಸಂಭವಿಸಿದೆ. ಆಕೆ ಸಂತೆಕಟ್ಟೆಯಲ್ಲಿರುವ ವೈದ್ಯರ ಕ್ಲಿನಿಕ್‌ಗೆ ಹೋಗುತ್ತಿದ್ದಾಗ ಈ ಅಪರಾಧ ನಡೆದಿದೆ. ಆಕೆ ಶಂಕರ್ ಸುವರ್ಣ ಎಂಬವರ ಮನೆ ಸಮೀಪಿಸುತ್ತಿದ್ದಾಗ, ಮೋಟಾರ್ ಸೈಕಲ್‌ನಲ್ಲಿ ಬಂದ ಅಪರಿಚಿತ ವ್ಯಕ್ತಿಯೊಬ್ಬರು ಹಿಂದಿನಿಂದ ಆಕೆಯ ಬಳಿಗೆ ಬಂದರು.

ಆರೋಪಿಗಳು ಸರಸ್ವತಿಯ ಕೈಯಿಂದ ಬಲವಂತವಾಗಿ ಒಂದು ಚೀಲವನ್ನು ಕಸಿದುಕೊಂಡರು, ಅದರಲ್ಲಿ ಒಂದು ಮೊಬೈಲ್ ಫೋನ್ ಮತ್ತು 2,500 ರೂ. ನಗದು ಇದ್ದ ಪರ್ಸ್ ಇತ್ತು. ದರೋಡೆಯ ನಂತರ, ಆರೋಪಿಗಳು ಕೆಮ್ಮಣ್ಣು ಕಡೆಗೆ ಪರಾರಿಯಾಗಿದ್ದರು.

ದೇಶದ ಪ್ರಗತಿಯಲ್ಲಿ ಮಹಿಳೆಯ ಪಾತ್ರ ಹಿರಿದು : ಲಕ್ಷ್ಮಣ ಕಾಂಬಳೆ

• ಉದಯವಾಹಿನಿ ಭಾಲ್ಕಿ

ಪುರುಷರು ಮತ್ತು ಮಹಿಳೆಯರು ಎಲ್ಲಾ ಕ್ಷೇತ್ರಗಳಲ್ಲಿ ಸರಿ ಸಮಾನರಾಗಿ ನಡೆದಾಗ ಮಾತ್ರ ದೇಶದ ಪ್ರಗತಿ ಸಾಧ್ಯ ಎಂದು ಪ್ರಾಚಾರ್ಯ ಲಕ್ಷ್ಮಣ ಕಾಂಬಳೆ ಹೇಳಿದರು. ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ವಿಶ್ವ ಮಹಿಳಾ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಹೆಣ್ಣು ಸಮಾಜದ ಕಣ್ಣು. ಹೆಣ್ಣೊಂದು ಕಲಿತರೆ ಶಾಲೆ ತೆರೆದಂತೆ ಎಂಬ ಹೇಳಿಕೆಗಳು ಹೆಣ್ಣಿನ ಮಹತ್ವದ ಕುರಿತು ಮಾಹಿತಿ ನೀಡುತ್ತವೆ ಎಂದರು. ಡಾ. ಜೈ ಶ್ರೀ ಪಿ. ಮಾತನಾಡಿ, ಮಹಿಳೆಯರು ಮನಸ್ಸು ಮಾಡಿದರೆ ಏನನ್ನಾದರೂ ಸಾಧಿಸಬಹುದು. ಮಹಿಳೆಯರು ತಮಗೆ ದೊರೆಯುತ್ತಿರುವ ಅವಕಾಶಗಳಿಗಾಗಿ ಅಂಬೇಡ್ಕರ್ ಅವರಿಗೆ ಸದಾ ಚಿರಋಣಿಯಾಗಿರಬೇಕು ಎಂದು ಹೇಳಿದರು.

ವಿದ್ಯುತ್ ಶಾರ್ಟ್ ಸರ್ಕ್ಯೂಟ್ 15 ವಾಹನಗಳು ಭಸ್ಮ

• ಉದಯವಾಹಿನಿ ವಿಜಯಪುರ

ವಿದ್ಯುತ್ ಶಾರ್ಟ್ ಸರ್ಕ್ಯೂನಿಂದ ಬೆಂಕಿ ಅವಘಡ ಸಂಭವಿಸಿ15 ವಾಹನಗಳು ಭಸ್ಮವಾಗಿರುವ ಘಟನೆ ನಗರದ ಗಾಂಧಿಚೌಕ್ ಪೊಲೀಸ್ ಠಾಣೆಯ ಹಿಂಭಾಗದ ಆವರಣದಲ್ಲಿ ಮಧ್ಯಾಹ್ನ ನಡೆದಿದೆ.

ಅಪಘಾತ ಹಾಗೂ ಇತರೆ ಪ್ರಕರಣಗಳಲ್ಲಿ ಜಪ್ತಿ ಮಾಡಿದ ವಾಹನಗಳು ಬೆಂಕಿ ಕೆನ್ನಾಲಿಗೆಗೆ ಸುಟ್ಟು ಕರಕಲಾಗಿದ್ದು, ವಾಹನಗಳ ಟೈರ್‌ಗಳು ಸ್ಫೋಟಗೊಂಡಿವೆ. ದಟ್ಟನೆ ಹೊಗೆ ಕಂಡು ಜನರು ಆತಂಕಕ್ಕೀಡಾಗಿದ್ದರು. ಸ್ಥಳಕ್ಕೆ ಅಗ್ನಿಶಾಮಕ ದಳ ಸಿಬ್ಬಂದಿ ಆಗಮಿಸಿ, ಬೆಂಕಿ ನಂದಿಸಲು ಹರಸಾಹಸ ಪಟ್ಟರು. ಬಹಳ ಹೊತ್ತಿನ ನಂತರ ಬೆಂಕಿ ನಂದಿಸಲು ಸಾಧ್ಯವಾಯಿತು.

ಪೊಲೀಸ ಠಾಣೆಯ ಕಟ್ಟಡಕ್ಕೆ ಭೂಮಿ ಪೂಜೆ

• ಉದಯವಾಹಿನಿ ಆಲಮೇಲ

ದಿನದ 24ಗಂಟೆಯೂ ಸೇವೆ ಸಲ್ಲಿಸುತ್ತಿರುವ ಹಾಗೂ ಸಾರ್ವಜನಿಕರಿಗೆ ರಕ್ಷಣೆ ನೀಡುತ್ತಿರುವ ಪೊಲೀಸರ ಆರೋಗ್ಯ ಮತ್ತು ಹಿತ ಕಾಪಾಡುವುದು ಸರಕಾರದ ಜವಾಬ್ದಾರಿ. ರಾಜ್ಯದಲ್ಲಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೇಸ್ ಸರಕಾರ ಅಧಿಕಾರಕ್ಕೆ ಬಂದ ನಂತರ ಎಲ್ಲ ಪೊಲೀಸ್ ಠಾಣೆ ನಿರ್ಮಾಣ, ಪೊಲೀಸ್ ವಸತಿ ಗೃಹಗಳಿಗೆ ಹಣ ಬಿಡುಗಡೆ ಮಾಡಿದೆ ಎಂದರು. ಪಟ್ಟಣದ ಪೊಲೀಸ ಠಾಣೆಯ ಕಟ್ಟಡದ ಭೂಮಿ ಪೂಜೆಯನ್ನು ನೇರವೇರಿಸಿ ಮಾತನಾಡಿದರು. ನಂತರ ಅವರು ಪೊಲೀಸ ಠಾಣೆಯ ಕಟ್ಟಡಕ್ಕೆ 88 ಲಕ್ಷ ರೂಪಾಯಿ ಬಿಡುಗಡೆಯಾಗಿದೆ ಎಂದರು. ಆಲಮೇಲ ಪೊಲೀಸ ಠಾಣೆಯ ಪಿಎಸ್‌ಐ ಅರವಿಂದ ಅಂಗಡಿ ಮಾತನಾಡಿ ಆಲಮೇಲ ಪೊಲೀಸ ಠಾಣೆಯು ಶಿಥಿಲಾವಸ್ಥೆಗೆ ತಲುಪಿದ್ದ ಕಟ್ಟಡದಲ್ಲಿ ಪೊಲೀಸರು ಕರ್ತವ್ಯ ನಿರ್ವಹಿಸುವುದು ಕಡತಗಳ ಸಂರಕ್ಷಣೆ ತುಂಬಾ ಕಷ್ಟವಾಗಿತ್ತು ನೂತನ ಕಟ್ಟಡವಾದರೇ ತುಂಬಾ ಪ್ರಯೋಜನವಾಗಲಿದೆ.

ನೀರಿನ ಶುದ್ಧೀಕರಣ ಘಟಕಗಳ ದುರಸ್ತಿಗೆ ಆಗ್ರಹ

• ಉದಯವಾಹಿನಿ ವಡಗೇರಾ

ತಾಲ್ಲೂಕಿನ ಕೊಂಕಲ್ ಗ್ರಾಮದಲ್ಲಿರುವ ಎರಡು ನೀರಿನ ಶುದ್ಧೀಕರಣ ಘಟಕಗಳು ಕೇಟ್ಟು ನಿಂತಿದ್ದು ದುರಸ್ತಿಗೊಳಿಸುವಂತೆ ಗ್ರಾಮದ ಯುವ ಮುಖಂಡ ಭೀಮಣ್ಣ ಮಡಿವಾಳ ಆಗ್ರಹಿಸಿದ್ದಾರೆ.

ಕೊಂಕಲ್ ಗ್ರಾಮವು ಪಂಚಾಯಿತಿ ಕೇಂದ್ರ ಸ್ಥಾನವನ್ನು ಹೊಂದಿದ್ದು ಸುಮಾರು 2 ಸಾವಿರಕ್ಕೂ ಹೆಚ್ಚು ಜನ ವಾಸ ಮಾಡುತ್ತಾರೆ ಗ್ರಾಮದ ಹನುಮಾನ್ ದೇವಸ್ಥಾನದ ಹತ್ತಿರವಿರುವ ನೀರಿನ ಶುದ್ದಿಕರಣ ಘಟಕವು ಕೆಟ್ಟು ಸುಮಾರು ವರ್ಷಗಳೇ ಕಳೆದಿವೆ ಅದರ ದುರಸ್ತಿಗೆ ಅಧಿಕಾರಿಗಳು ಮುಂದಾಗಿಲ್ಲ.

ಇನ್ನೊಂದು ನೀರಿನ ಶುದ್ಧೀಕರಣ ಘಟಕವು ಪಂಚಾಯಿತಿ ಪಕ್ಕದಲ್ಲಿ ಇದ್ದು ಅದು ಕೂಡ ಸುಮಾರು 15 ದಿನಗಳಿಂದೆ ಕೆಟ್ಟಿದೆ ದುರಸ್ತಿಗೊಳಿಸುವಂತೆ ಅಧಿಕಾರಿಗಳ ಗಮನಕ್ಕೆ ತಂದರು ಯಾವುದೇ ರೀತಿಯಾದ ಪ್ರಯೋಜನವಾಗಿಲ್ಲವೆಂದು ಗ್ರಾಮಸ್ಥರು ದೂರಿದ್ದಾರೆ. ಈಗಾಗಲೇ ಬೇಸಿಗೆ ಆರಂಭಿಸಿದ್ದು ಶುದ್ಧ ಕುಡಿಯುವ ನೀರಿಗಾಗಿ ಪಕ್ಕದ ಗ್ರಾಮಗಳಿಗೆ ತೆರಳಿ ತರುವಂತಾಗಿದೆ ಅಶುದ್ಧ ನೀರು ಕುಡಿಯುತ್ತಿರುವುದರಿಂದ ಸಾರ್ವಜನಿಕರಿಗೆ ಹಲವಾರು ಕಾಯಿಲೆಗಳು ಹರಡುತ್ತಿವೆ ಕೂಡಲೇ ಸಂಭವಿಸಿದ ಅಧಿಕಾರಿಗಳು ಗ್ರಾಮದಲ್ಲಿರುವ ಎರಡು ನೀರಿನ ಶುದ್ಧೀಕರಣ ಘಟಕಗಳನ್ನು ದುರಸ್ತಿಗೊಳಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕು ಒಂದು ವೇಳೆ ವಿಳಂಬ ಮಾಡಿದಲ್ಲಿ ಉಗ್ರ ಹೋರಾಟ ಮಾಡುವುದಾಗಿ ಗ್ರಾಮದ ಮುಖಂಡರಾದ ಭೀಮಣ್ಣ ಮಡಿವಾಳ, ಸುರೇಶ್ ಬಚ್ಚನವರ, ಹೊನ್ನಪ್ಪ ಪೂಜಾರಿ, ಅಹ್ಮದ್ ಪಾಷ ದೇವದುರ್ಗ, ಭೀಮರಾಯ ಮಡಿವಾಳ, ಹಾಗೂ ಇನ್ನಿತರರು ಎಚ್ಚರಿಸಿದ್ದಾರೆ.

ಉದಯವಾಹಿನಿ ಚಿತ್ರ

ಮುಂದಿನ ಮಳೆಗಾಲದಲ್ಲಿ ಜನತೆಗೆ ಸಂಕಷ್ಟ ಉಂಟು ಮಾಡುವ ಸ್ಥಿತಿ

ರಾ.ಹೆ. ಕೂಟೇಲು ಬಳಿ ವಾಹನಚಾಲಕರಿಗೆ 'ಪ್ರಾಣಭಯ'

• ಉದಯವಾಹಿನಿ ಪುತ್ತೂರು

ರಾಷ್ಟ್ರೀಯ ಹೆದ್ದಾರಿ ಮಂಗಳೂರು-ಬೆಂಗಳೂರು ಚತುಷ್ಪಥ ರಸ್ತೆ ಕಾಮಗಾರಿ ಕುಂಟುತ್ತಲೇ ಸಾಗುತ್ತಿರುವ ಜತೆಗೆ ಈ ಕಾಮಗಾರಿ ಮಳೆಗಾಲದ ಸಂದರ್ಭದಲ್ಲಿ ಕೆಲ ಕಡೆಗಳಲ್ಲಿ ಅಪಾಯ ಸೃಷ್ಟಿಸುವ ಪರಿಸ್ಥಿತಿ ನಿರ್ಮಾಣವಾಗಿದೆ. ಉಪ್ಪಿನಂಗಡಿಯಿಂದ ವಳಾಲು ತನಕದ ರಸ್ತೆ ಬದಿಯ ಗುಡ್ಡಗಳನ್ನು ನೇರವಾಗಿ ಅಗೆಯಲಾಗಿದ್ದು, ಇದರ ಪರಿಣಾಮ ಮುಂದಿನ ಮಳೆ

ದಿನ ಭವಿಷ್ಯ

ರಾಹುಕಾಲ	ಮಧ್ಯಾಹ್ನ	12:00 ರಿಂದ 01:30
ಗುಳಿಕ ಕಾಲ	ಬೆಳಿಗ್ಗೆ	10:30 ರಿಂದ 12:00
ಯಮಗಂಡ ಕಾಲ	ಬೆಳಿಗ್ಗೆ	07:30 ರಿಂದ 09:00

ಮೇಷ ನೀವು ನಿಮ್ಮನ್ನು ಒಂದು ರೋಮಾಂಚಕಾರಿ ಪರಿಸ್ಥಿತಿಯಲ್ಲಿ ಕಂಡುಕೊಳ್ಳಬಹುದು–ಇದು ನಿಮಗೆ ಆರ್ಥಿಕ ಲಾಭವನ್ನೂ ತರುತ್ತದೆ. ನಿಮ್ಮ ಮನೆಯ ಪರಿಸರದಲ್ಲಿ ಒಳ್ಳೆಯ ಬದಲಾವಣೆಗಳನ್ನು ಮಾಡುತ್ತೀರಿ.

ವೃಷಭ ಮಕ್ಕಳ ನಿಮ್ಮ ಸಂಜೆಯನ್ನು ಉಲ್ಲಾಸಮಯವಾಗಿಸುತ್ತಾರೆ. ಮಂಕು ಕವಿದ ಮತ್ತು ಒತ್ತಡದ ದಿನಕ್ಕೆ ಮಂಗಳ ಹಾಡಲು ಸಂತೋಷಕೂಟವನ್ನು ಯೋಜಿಸಿ. ಮಕ್ಕಳ ಸಾಂಗತ್ಯ ನಿಮ್ಮ ದೇಹವನ್ನು ಪುನಶ್ಚೇತನಗೊಳಿಸುತ್ತದೆ.

ಮಿಥುನ ಆರೋಗ್ಯವು ಇತರರೊಂದಿಗೆ ಸಂತೋಷವನ್ನು ಹಂಚಿಕೊಳ್ಳುವ ಮೂಲಕ ಅರಳುತ್ತದೆ. ಇಂದು ನೀವು ಒಳ್ಳೆಯ ಹಣ ಮಾಡುತ್ತೀರಿ – ಆದರೆ ಅದು ನಿಮ್ಮ ಕೈಯಿಂದ ಜಾರಿಹೋಗದಿರಲು ಪ್ರಯತ್ನಿಸಿ.

ಕರ್ಕಾಟಕ ನಿಮ್ಮನ್ನು ನೀವೇ ನೋಡಿಕೊಳ್ಳುವ ಬಯಕೆಗೆ ಇತರರ ಅಗತ್ಯಗಳು ಕಡಿವಾಣ ಹಾಕುತ್ತವೆ. ಭಾವನೆಗಳನ್ನು ತಡೆಹಿಡಿಯಬೇಡಿ ಹಾಗೂ ವಿಶ್ರಾಂತಿ ಪಡೆಯುವ ಸಲುವಾಗಿ ನೀವು ಇಷ್ಟಪಡುವುದನ್ನೇನಾದರೂ ಮಾಡಿ.

ಸಿಂಹ ನಿಮ್ಮ ಮಗುವಿನ ಸಾಧನೆ ನಿಮಗೆ ಅಪಾರ ಸಂತೋಷ ನೀಡಬಹುದು. ಸಂಬಂಧಿಕರಿಂದ ಹಣದ ಸಾಲವನ್ನು ತೆಗೆದುಕೊಂಡಿರುವ ಜನರು, ಯಾವುದೇ ಪರಿಸ್ಥಿತಿಯಲ್ಲಿಯೂ ಸಾಲವನ್ನು ಮರುಪಾವತಿ ಮಾಡಬೇಕಾಗುತ್ತದೆ.

ಕನ್ಯಾ ಆರೋಗ್ಯ ಪರಿಪೂರ್ಣವಾಗಿರುತ್ತದೆ. ನಿಮ್ಮ ಜೀವನದ ಕಳಪೆ ಆರೋಗ್ಯದಿಂದಾಗಿ, ನಿಮ್ಮ ಹಣವನ್ನು ಇಂದು ಖರ್ಚು ಮಾಡಬಹುದು, ಆದರೆ ನೀವು ಅದರ ಬಗ್ಗೆ ಚಿಂತಿಸಬೇಕಾಗಿಲ್ಲ ಏಕೆಂದರೆ ಹಣವನ್ನು ಉಳಿಸಲಾಗಿದೆ.

ತುಲಾ ನೀವು ಕೆಲಸದಲ್ಲಿ ಇಂದು ನಿಜವಾಗಿಯೂ ಏನಾದರೂ ಅದ್ಭುತವಾದದ್ದನ್ನು ಮಾಡಬಹುದು. ವಿದ್ಯಾರ್ಥಿಗಳು ಇಂದು ತಮ್ಮ ಕೆಲಸವನ್ನು ನಾಳೆಯ ಮೇಲೆ ಮುಂದೂಡಬಾರದು.

ವೃಶ್ಚಿಕ ನಿಮ್ಮಲ್ಲಿ ಕೆಲವರು ಇಂದು ಬಲವಂತವಾಗಿ ಪ್ರಮುಖ ನಿರ್ಧಾರಗಳನ್ನು ಕೈಗೊಳ್ಳಬೇಕಾಗಬಹುದು ಹಾಗೂ ನಿಮ್ಮನ್ನು ಉದ್ವೇಗಭರಿತರನ್ನಾಗಿಯೂ ಹಾಗೂ ಗಾಬರಿಯಿರುವವರನ್ನಾಗಿಯೂ ಮಾಡಬಹುದು.

ಧನಸ್ಸು ಮೋಜಿಗಾಗಿ ಹೊರಹೋಗುವವರಿಗೆ ಸಂತೋಷ ಮತ್ತು ಆನಂದವನ್ನು ಹಂಚಿಕೊಳ್ಳಿ. ಹೊಸ ಒಪ್ಪಂದಗಳು ಲಾಭದಾಯಕವೆಂದು ಕಂಡರೂ ಬಯಸಿದ ಲಾಭ ತರುವುದಿಲ್ಲ.

ಮಕರ ನಿಮ್ಮ ಆಕರ್ಷಕ ವರ್ತನೆ ಗಮನ ಸೆಳೆಯುತ್ತದೆ. ಇಂದು ನಿಮ್ಮ ಹಣವನ್ನು ಅನೇಕ ವಿಷಯಗಳಿಗೆ ಖರ್ಚು ಮಾಡಬಹುದು, ನೀವು ಇಂದು ಉತ್ತಮ ಬಜೆಟ್ ಅನ್ನು ಯೋಜಿಸಬೇಕಾಗಿದೆ.

ಕುಂಭ ಮನರಂಜನೆ ಮತ್ತು ಮೋಜಿನ ಒಂದು ದಿನ. ಕೆಲವರಿಗೆ ಪ್ರಯಾಣದ ಗಡಿಬಿಡಿ ಮತ್ತು ಒತ್ತಡದಿಂದ ಕೂಡಿರುತ್ತವೆ – ಆದರೆ ಆರ್ಥಿಕವಾಗಿ ಲಾಭದಾಯಕವಾಗಿರುತ್ತವೆ.

ಮೀನ ನಿಮ್ಮ ಕಚೇರಿಯನ್ನು ಬೇಗನೆ ಬಿಡಲು ಮತ್ತು ನೀವು ನಿಜವಾಗಿಯೂ ಆನಂದಿಸುವದನ್ನು ಮಾಡಲು ಪ್ರಯತ್ನಿಸಿ. ಹೆಚ್ಚುವರಿ ಹಣವನ್ನು ರಿಯಲ್ ಎಸ್ಟೇಟ್‌ನಲ್ಲಿ ಹೂಡಿಕೆ ಮಾಡಬೇಕು.

ಲಾರಿ ಹರಿದು ಓರ್ವ ವ್ಯಕ್ತಿ ಸಾವು

• ಉದಯವಾಹಿನಿ ಚಿತ್ತಾಪುರ

ಪಟ್ಟಣದ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಯ ಎದರುಗಡೆ ಲಾರಿ ಹರಿದು ಓರ್ವ ವ್ಯಕ್ತಿ ಮೃತಪಟ್ಟಿರುವ ಘಟನೆ ಜರುಗಿದೆ. ಮೊಗಲಾ ಗ್ರಾಮದ ನಿವಾಸಿ ಚಂದ್ರಪ್ಪ ಮಲಕಪ್ಪ 45 ಮೃತಪಟ್ಟ ದುರ್ದೈವಿ. ಪಟ್ಟಣದ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಗೆ ಚಿಕಿತ್ಸೆ ಪಡೆದುಕೊಳ್ಳಲು ಬರುತ್ತಿದ್ದಾಗ ಈ ಘಟನೆ ಜರುಗಿದೆ ಎಂದು ತಿಳಿದು ಬಂದಿದೆ.

ಸುದ್ದಿ ತಿಳಿಯುತ್ತಿದ್ದಂತೆ ಪಿಎಸ್'ಐ ಶ್ರೀಶೈಲ್ ಅಂಬಾಟಿ, ಸಿಬ್ಬಂದಿಗಳಾದ ಬಸವರಾಜ, ದತ್ತು, ಸವಿಕುಮಾರ, ರವಿಕುಮಾರ ಅವರು ಭೇಟಿ ನೀಡಿ ಪರಿಶೀಲನೆ ನಡೆಸಿದರು. ಈ ಕುರಿತು ಚಿತ್ತಾಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಕುಡಿಯುವ ನೀರಿನ ಸಮಸ್ಯೆ ಆಗದಂತೆ ಎಚ್ಚರವಹಿಸಿ ಸಚಿವ ಡಾ. ಶರಣ ಪ್ರಕಾಶ್ ಪಾಟೀಲ್

• ಉದಯವಾಹಿನಿ ಸೇಡಂ

ತಾಲ್ಲೂಕು ಪಂಚಾಯಿತಿ ಸಭಾಂಗಣದ ತಾಲ್ಲೂಕಾ ಮಟ್ಟದ ಟಾಸ್ಕ್ ಫೋರ್ಸ್ ಸಭೆಯನ್ನು ವೈದ್ಯಕೀಯ ಶಿಕ್ಷಣ ಸಚಿವರಾದ ಡಾ. ಶರಣಪ್ರಕಾಶ್ ಪಾಟೀಲ್ ಊಡಗಿ ರವರ ಅಧ್ಯಕ್ಷತೆ ವಹಿಸಿ ಮಾತನಾಡಿದರು. ತಾಲ್ಲೂಕಿನ ಎಲ್ಲಾ ಗ್ರಾಪಂಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಆಗದಂತೆ ಎಚ್ಚರ ವಹಿಸಬೇಕು ಎಂದರು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯಯ ಇಲಾಖೆಯ ಅಧಿಕಾರಿಗಳಿಗೆ ಹಾಗೂ ಗ್ರಾಪಂ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚಿಸಿದರು.

ಮಹಿಳೆಗೆ ಹಲ್ಲೆ: ಚಿಕಿತ್ಸೆಗೆ ದಾಖಲು

• ಉದಯವಾಹಿನಿ ಉಡುಪಿ

ಉಡುಪಿ ರಿಕ್ಷಾ ನಿಲ್ದಾಣದ ಬಳಿ ಮಹಿಳೆ ಯೊಬ್ಬರಿಗೆ ವ್ಯಕ್ತಿಯೋರ್ವ ಹಲ್ಲೆ ನಡೆಸಿದ್ದು ಮುಖ ಮೂಗಿನಲ್ಲಿ ರಕ್ತ ಸೋರುತ್ತಿದ್ದು, ವಿಶು ಶೆಟ್ಟಿ ಅಂಬಲಪಾಡಿ ಜಿಲ್ಲಾಸ್ಪತ್ರೆಗೆ ದಾಖಲಿಸಿದ್ದಾರೆ. ಮಹಿಳೆ ತನ್ನ ಹೆಸರು ಮಹಿರ್ ನಿಶಾ(28) ತಂದೆ ಅಬ್ಬಾಸ್ ಶಿಕಾರಿಪುರ ಮೂಲದವಳಾಗಿದ್ದೇನೆ ಎಂದು ಮಾಹಿತಿ ನೀಡಿದ್ದಾಳೆ.

ಹಲ್ಲೆ ನಡೆಸಿದ ವ್ಯಕ್ತಿ ಹಾಗೂ ಮಹಿಳೆಗೆ ಏನು ಸಂಬಂಧ ಎಂದು ತಿಳಿದು ಬಂದಿಲ್ಲ. ರಿಕ್ಷಾ ಚಾಲಕರು ಸಹಕರಿಸಿದ್ದಾರೆ.

ಒಂದೇ ಟಯರ್‌ನಲ್ಲಿ ಬಸ್ ಸಂಚಾರ ಸಾರ್ವಜನಿಕರ ಆಕ್ರೋಶ

• ಉದಯವಾಹಿನಿ ಬಂಟ್ವಾಳ

ವಿಟ್ಲ ಮತ್ತು ಮುಡಿಪು ನಡುವೆ ಸತತ ಎರಡು ದಿನಗಳಿಂದ ಒಂದೇ ಹಿಂಬದಿಯ ಟೈರ್‌ನೊಂದಿಗೆ ಸಂಚರಿಸುತ್ತಿದ್ದ ಖಾಸಗಿ ಬಸ್ಸನ್ನು ಸಾರ್ವಜನಿಕರು ತಡೆದು ವಿಟ್ಲ ಪೊಲೀಸರಿಗೆ ಹಸ್ತಾಂತರಿಸಿದ್ದಾರೆ. ವಿಟ್ಲ, ಮುಡಿಪು ಮತ್ತು ಮಂಗಳೂರು ನಡುವೆ ಸಂಚರಿಸುವ 'ಸಾರಾ' ಎಂಬ ಖಾಸಗಿ ಬಸ್ಸಿನ ಬಸ್ಸಿನ ಹಿಂದಿನ ಎಡಭಾಗದಲ್ಲಿ ಒಂದೇ ಚಕ್ರದಲ್ಲಿ ಸಂಚರಿಸುತ್ತಿತ್ತು. ಇನ್ನೊಂದು ಟಯರ್ ಒಡೆದು ವಿಚಿತ್ರ ಶಬ್ದ ಬರುತ್ತಿದ್ದರೂ ಚಾಲಕ, ನಿರ್ವಾಹಕ ಈ ಬಗ್ಗೆ ನಿರ್ಲಕ್ಷ್ಯ ವಹಿಸಿದ್ದಾರೆ. ಮಧ್ಯಾಹ್ನದಿಂದ ವಿಟ್ಲ ಮುಡಿಪು ಮಂಗಳೂರು ಮಧ್ಯೆ ಹಿಂಬದಿಯ ಒಂದೇ ಟಯರ್‌ನಲ್ಲಿ ಸಂಚರಿಸುತ್ತಿದ್ದುದ್ದನ್ನು ಗಮನಿಸಿದ ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಉದಯವಾಹಿನಿ ಚಿತ್ರ

ಪ್ರಯಾಣಿಕರ ಜೀವದ ಜೊತೆ ಬಸ್ ಚಾಲಕ ಹಾಗೂ ನಿರ್ವಾಹಕ ಚೆಲ್ಲಾಟ ಆಡುತ್ತಿದ್ದರೆಂದು ಪ್ರಯಾಣಿಕರು ಆರೋಪಿಸಿ, ಸಾಲೆತ್ತೂರು ಪೇಟೆಯಲ್ಲಿ ಬಸ್ಸನ್ನು ತಡೆ ಹಿಡಿದು ವಿಟ್ಲ ಪೊಲೀಸರ ವಶಕ್ಕೆ ಒಪ್ಪಿಸಿದ್ದಾರೆ. ಘಟನೆ ಬಗ್ಗೆ ಬಂಟ್ವಾಳ ಸಾರಿಗೆ ಅಧಿಕಾರಿಗಳಿಗೂ ಮಾಹಿತಿ ನೀಡಿದ್ದಾರೆ.

35 ಗ್ರಾಮ ಪಂಚಾಯಿತಿಗಳನ್ನು ಕ್ಷಯ ಮುಕ್ತ ಗ್ರಾ.ಪಂ ಗಳನ್ನಾಗಿ ಮಾಡಿದ್ದು ಅಭಿನಂದನೀಯ

ಧಾರವಾಡ ಜಿಲ್ಲೆ ಕ್ಷಯ ಮುಕ್ತ ಜಿಲ್ಲೆ ಆಗಬೇಕು: ದಿವ್ಯ ಪ್ರಭು

• ಉದಯವಾಹಿನಿ ಧಾರವಾಡ

ಧಾರವಾಡ ಜಿಲ್ಲೆಯಲ್ಲಿನ ಸುಮಾರು 35 ಗ್ರಾಮ ಪಂಚಾಯಿತಿಗಳನ್ನು ಕ್ಷಯ ಮುಕ್ತ ಗ್ರಾಮ ಪಂಚಾಯಿತಿಗಳನ್ನಾಗಿ ಮಾಡಿದ್ದು ಅಭಿನಂದನೀಯ.

ಧಾರವಾಡ ಇಡಿ ಜಿಲ್ಲೆಯನ್ನು ಕ್ಷಯ ಮುಕ್ತ ಜಿಲ್ಲೆಯನ್ನಾಗಿ ಮಾಡಲು ಆರೋಗ್ಯ ಇಲಾಖೆ ಸಿಬ್ಬಂದಿ ಹಾಗೂ ನಗರ ಮತ್ತು ಗ್ರಾಮೀಣ ಸ್ಥಳೀಯ ಸಂಸ್ಥೆಗಳು ಸಕ್ರಿಯವಾಗಿ ಭಾಗವಹಿಸಿ, ತೊಡಗಿಸಿಕೊಳ್ಳಬೇಕೆಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಹೇಳಿದರು.

ಅವರು ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ರಾಷ್ಟ್ರೀಯ ಆರೋಗ್ಯ ಅಭಿಯಾನದಲ್ಲಿ ರಾಷ್ಟ್ರೀಯ ಕ್ಷಯ ರೋಗ ನಿರ್ಮೂಲನಾ ಕಾರ್ಯಕ್ರಮದ ಅಂಗವಾಗಿ ಹಮ್ಮಿಕೊಂಡಿದ್ದ ವಿಶ್ವ ಕ್ಷಯರೋಗ ದಿನಾಚರಣೆ ಹಾಗೂ ಕ್ಷಯ ಮುಕ್ತ ಗ್ರಾಮ ಪಂಚಾಯಿತಿಗಳ ಸತ್ಕಾರ ಸಮಾರಂಭ ಉದ್ಘಾಟಿಸಿ, ಮಾತನಾಡಿದರು. ವಿಶ್ವ ಆರೋಗ್ಯ ಸಂಸ್ಥೆಯು 2030ರ ವೆಳೆಗೆ ಇಡೀ ವಿಶ್ವವನ್ನು ಕ್ಷಯರೋಗದಿಂದ ಮುಕ್ತಗೊಳಿಸುವ ಘೋಷಣೆ ಮಾಡಿದೆ. ಈ ನಿಟ್ಟಿನಲ್ಲಿ ಧಾರವಾಡ ಜಿಲ್ಲೆಯಲ್ಲಿ ಕಳೆದ ಒಂದು ವರ್ಷದಲ್ಲಿ 35 ಗ್ರಾಮ ಪಂಚಾಯಿತಿಗಳನ್ನು ಕ್ಷಯರೋಗ ಮುಕ್ತಗೊಳಿಸಲು ಪ್ರಯತ್ನಿಸಿ, ಜಿಲ್ಲೆಯ 35 ಗ್ರಾಮ ಪಂಚಾಯಿತಿಗಳನ್ನು ಕ್ಷಯ ಮುಕ್ತಗೊಳಿಸಿದ್ದು ಸಂತಸ ತಂದಿದೆ. ಜಿಲ್ಲೆಯಲ್ಲಿ ಈಗ 3,323 ಕ್ಷಯ ರೋಗದ ಪಾಸಿಟಿವ್ ಪ್ರಕರಣಗಳಿವೆ. ಇದರಲ್ಲಿ ಅತೀ ಹೆಚ್ಚು ಪ್ರಕರಣಗಳು ಹುಬ್ಬಳ್ಳಿ ಶಹರದಲ್ಲಿ ಕಂಡು ಬಂದಿವೆ. ಇದಕ್ಕೆ ಹೆಚ್ಚು ಜನಸಾಂದ್ರತೆ ಕಾರಣವಿರಬಹುದು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಉದಯವಾಹಿನಿ ಚಿತ್ರ

ಮುಖ್ಯ ಅತಿಥಿಗಳಾಗಿದ್ದ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಅವರು ಮಾತನಾಡಿ, ಕ್ಷಯರೋಗ ಒಬ್ಬರಿಂದ ಒಬ್ಬರಿಗೆ ಹರಡುವ ರೋಗ. ಇದಕ್ಕೆ ಮುಂಜಾಗೃತೆ ಅಗತ್ಯವಿದೆ. ಜಿಲ್ಲೆಯ ಎಲ್ಲಾ 146 ಗ್ರಾಮ ಪಂಚಾಯಿತಿಗಳನ್ನು ಕ್ಷಯ ಮುಕ್ತ ಗ್ರಾಮ ಪಂಚಾಯಿತಿ ಮಾಡಲು ಕ್ರಮ ವಹಿಸಲಾಗಿದೆ ಎಂದರು. ಪ್ರತಿ ಗ್ರಾಮ ಪಂಚಾಯತ ವ್ಯಾಪ್ತಿಯ ಮನೆಗಳಿಗೆ ಆರೋಗ್ಯ ಇಲಾಖೆ ಸಿಬ್ಬಂದಿ ಭೇಟಿ ನೀಡಿ, ಕ್ಷಯರೋಗದ ತಿಳುವಳಿಕೆ ನೀಡಲಿದ್ದಾರೆ. ಸಂಶಯಾಸ್ಪದ ಪ್ರಕರಣ ಕಂಡು ಬಂದಲ್ಲಿ ಕಫ ಸಂಗ್ರಹಿಸಿ ಪರೀಕ್ಷೆಗೆ ಕಳುಹಿಸುತ್ತಾರೆ. ಕ್ಷಯರೋಗ ಖಚಿತಪಟ್ಟಲ್ಲಿ ಅವರ ಕುಟುಂಬ ಸದಸ್ಯರಿಗೆ ಜಾಗೃತಿ ಮೂಡಿಸಿ, ಮುಂಜಾಗೃತೆ ಕ್ರಮ ತಿಳಿಸುತ್ತಾರೆ ಎಂದರು.

ಗ್ರಾಮ ಪಂಚಾಯತ ಸದಸ್ಯರು, ಸಿಬ್ಬಂದಿಗಳು ಕ್ಷಯ ಮುಕ್ತ ಗ್ರಾಮ ಕಾರ್ಯಕ್ರಮಕ್ಕೆ ಅಗತ್ಯ ಸಹಕಾರ ನೀಡಲಿದ್ದಾರೆ. ಜನಜಾಗೃತಿ, ಮನೆ ಮನೆಗೆ ಭೇಟಿ ಕಾರ್ಯಕ್ರಮಗಳನ್ನು ಹೆಚ್ಚಿಸಬೇಕೆಂದು ಅವರು ಹೇಳಿದರು.

ಕ್ಷಯರೋಗಿಗಳಿಗೆ ಅಗತ್ಯ ಚಿಕಿತ್ಸೆ

2023ರ ಜನವರಿಯಿಂದ ಡಿಸೆಂಬರ್‌ವರೆಗೆ 2,292 ಜನ ಕ್ಷಯರೋಗಿಗಳಿಗೆ ಅಗತ್ಯ ಚಿಕಿತ್ಸೆ ನೀಡಲಾಗಿದೆ. ಇದರಲ್ಲಿ 1,966 ಜನ ಗುಣಮುಖರಾಗಿದ್ದು, ಉಳಿದವರಿಗೆ ಚಿಕಿತ್ಸೆ ಮುಂದುವರಿಸಲಾಗಿದೆ. ಗುಣಮುಖವಾದವರದರ ಜಿಲ್ಲೆಯಲ್ಲಿ ಶೇ. 85.7 ರಷ್ಟಿದೆ. ಆರೋಗ್ಯ ಇಲಾಖೆಯವರು ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದ್ದು, ಸಂಪೂರ್ಣ ಗುರಿ ಸಾಧಿಸಲಿದ್ದಾರೆ ಎಂದು ಜಿಲ್ಲಾಧಿಕಾರಿಗಳ ಭರವಸೆ ವ್ಯಕ್ತಪಡಿಸಿದರು.

> ಆರೋಗ್ಯ ಇಲಾಖೆ ಸಿಬ್ಬಂದಿಗಳು ಹಾಗೂ ಗ್ರಾಮ ಪಂಚಾಯತ ಮತ್ತು ನಗರ ಸಂಸ್ಥೆಗಳ ಸಿಬ್ಬಂದಿ, ಪ್ರತಿನಿಧಿಗಳು ಸಕ್ರಿಯವಾಗಿ ಭಾಗವಹಿಸಬೇಕು. ವಿವಿಧ ಇಲಾಖೆಗಳ ಸಮನ್ವಯದಿಂದ ಈ ಕಾರ್ಯವನ್ನು ಯಶಸ್ವಿಯಾಗಿ ಮಾಡಿ, ಕ್ಷಯ ಮುಕ್ತ ಜಿಲ್ಲಾಯಾಗಿ ರೂಪಿಸಬೇಕು
> –ದಿವ್ಯ ಪ್ರಭು, ಜಿಲ್ಲಾಧಿಕಾರಿ

ಇಬ್ಬರು ಸೈಬರ್ ವಂಚಕರ ಬಂಧನ

• ಉದಯವಾಹಿನಿ ಮಂಗಳೂರು

ಬಡವರ ಬ್ಯಾಂಕ್ ಖಾತೆಗಳನ್ನು ದುರುಪಯೋಗ ಪಡಿಸಿಕೊಂಡು ಆನ್‌ಲೈನ್ ವಂಚನೆ ಮಾಡುತ್ತಿದ್ದ ಇಬ್ಬರು ವ್ಯಕ್ತಿಗಳನ್ನು ಪೊಲೀಸರು ಬಂಧಿಸಿದ್ದಾರೆ. ಬೆಳಗಾವಿಯ ತಹಶೀಲ್ದಾರ್ ಗಲ್ಲಿಯ ಅವಿನಾಶ್ ಸುತಾರ್ (28) ಮತ್ತು ರಾಮದೇವ್ ಗಲ್ಲಿಯ ಅನೂಪ್ ಕಾರೇಕರ್ (42) ಬಂಧಿತರು.

ಸೈಬರ್ ಅಪರಾಧ ಪ್ರಕರಣದ ತನಿಖೆಯ ಸಮಯದಲ್ಲಿ, ಪೊಲೀಸರು ಅಮಾಯಕರ ಬ್ಯಾಂಕ್ ಖಾತೆಗಳನ್ನು ದುರುಪಯೋಗಪಡಿಸಿಕೊಳ್ಳುವ ಇಬ್ಬರ ಯೋಜನೆಯನ್ನು ಬಹಿರಂಗಪಡಿಸಿದರು. ಆರೋಪಿಗಳು ಬಡ ವ್ಯಕ್ತಿಗಳಿಗೆ ಸಣ್ಣ ಪ್ರಮಾಣದ ಹಣವನ್ನು ನೀಡುವ ಮೂಲಕ ಬ್ಯಾಂಕ್ ಖಾತೆಗಳನ್ನು ತೆರೆಯಲು ಮನವೊಲಿಸುತ್ತಿದ್ದರು. ನಂತರ ಅವರು ಆನ್‌ಲೈನ್ ವ್ಯವಹಾರ ನಡೆಸುವ ನೆಪದಲ್ಲಿ ಖಾತೆ ವಿವರಗಳನ್ನು ಸಂಗ್ರಹಿಸಿ ಸೈಬರ್ ವಂಚಕರಿಗೆ ಹಸ್ತಾಂತರಿಸುತ್ತಿದ್ದರು. ವಂಚಕರು ಈ ಖಾತೆಗಳನ್ನು ಬಳಸಿಕೊಂಡು ವಿಡಿಯೋ ಕರೆಗಳು ಮತ್ತು ಡಿಜಿಟಲ್ ಬಂಧನಗಳ ಮೂಲಕ ಶ್ರೀಮಂತ ವ್ಯಕ್ತಿಗಳನ್ನು ಬ್ಲ್ಯಾಕ್‌ಮೇಲ್ ಮಾಡುತ್ತಿದ್ದರು. ಒಮ್ಮೆ ಅವರ ಗುರಿಗಳು ಬಲೆಗೆ ಬಿದ್ದ ನಂತರ, ಅವರನ್ನು ಈ ಅನುಮಾನಾಸ್ಪದ ವ್ಯಕ್ತಿಗಳ ಬ್ಯಾಂಕ್ ಖಾತೆಗಳಿಗೆ ಹಣವನ್ನು ವರ್ಗಾಯಿಸುವಂತೆ ಒತ್ತಾಯಿಸಲಾಯಿತು.

ಉದಯವಾಹಿನಿ ಚಿತ್ರ

ತನಿಖೆಯ ನಂತರ, ಪೊಲೀಸರು ಈ ವ್ಯವಹಾರವನ್ನು ಬೆಳಗಾವಿಯ ಬ್ಯಾಂಕ್ ಖಾತೆಗೆ ಪತ್ತೆಹಚ್ಚಿದರು, ಬಂಧಿತ ವ್ಯಕ್ತಿಗಳ ಭಾಗಿಯಾಗಿರುವುದನ್ನು ಬಹಿರಂಗಪಡಿಸಿದರು.

ಸೈಬರ್ ವಂಚಕರು ಬ್ಯಾಂಕ್ ಖಾತೆಗಳಿಗೆ ಹೇಗೆ ಪ್ರವೇಶ ಪಡೆದರು: ಆರೋಪಿಗಳು ಟೆಲಿಗ್ರಾಮ್ ಮೂಲಕ ಉತ್ತರ ಭಾರತದ ಸೈಬರ್ ಅಪರಾಧಿಗಳೊಂದಿಗೆ ಸಹಕರಿಸಿದ್ದಾರೆ ಎಂದು ವರದಿಯಾಗಿದೆ. ಅವರು ಕಮಿಷನ್‌ಗಾಗಿ ವಂಚಕರಿಗೆ ಬ್ಯಾಂಕ್ ಖಾತೆಗಳನ್ನು ಒದಗಿಸಿದರು. ವಿಚಾರಣೆಯ ಸಮಯದಲ್ಲಿ, ಹಲವಾರು ವ್ಯಕ್ತಿಗಳು ತಮ್ಮ ಬ್ಯಾಂಕ್ ಖಾತೆಗಳನ್ನು ಇತರರಿಗೆ ಮಾರಾಟ ಮಾಡಿದ್ದಾರೆ ಎಂದು ತಿಳಿದು ಬಂದಿದೆ. ಬಂಧಿತ ಇಬ್ಬರು ಆರೋಪಿಗಳು ಈ ಸೈಬರ್ ವಂಚನೆ ಕಾರ್ಯಾಚರಣೆ ಮತ್ತು ಆನ್‌ಲೈನ್ ವಂಚನೆಗಳ ತಾಣವಾದ ಜಾರ್ಖಂಡ್‌ನ ಜಮ್ತಾರಾ ನಡುವಿನ ಸಂಬಂಧವನ್ನು ಬಹಿರಂಗಪಡಿಸಿದ್ದಾರೆ.

ವಂಚನೆ ಹೇಗೆ ಬಹಿರಂಗವಾಯಿತು?

ಪುತ್ತೂರಿನ ರಾಧಾಕೃಷ್ಣ ನಾಯಕ್ ಎಂಬವರಿಗೆ ಸೈಬರ್ ವಂಚಕರು ವಿಡಿಯೋ ಕರೆ ಮಾಡಿ ಹಣ ವರ್ಗಾವಣೆ ಪ್ರಕರಣದಲ್ಲಿ ಡಿಜಿಟಲ್ ಆಗಿ ಬಂಧಿಸುವುದಾಗಿ ಬೆದರಿಕೆ ಹಾಕಿದ ನಂತರ ವಂಚನೆ ಬೆಳಕಿಗೆ ಬಂದಿತು. ಪರಿಣಾಮಗಳಿಗೆ ಹೆದರಿ, ಅವರು ಆರ್‌ಟಿಜಿಎಸ್ ಮೂಲಕ 40 ಲಕ್ಷ ರೂ. ಗಳನ್ನು ವರ್ಗಾಯಿಸಿದರು. ಆದಾಗ್ಯೂ, ಕೆಲವು ದಿನಗಳ ನಂತರ, ಅವರು ಅನುಮಾನಗೊಂಡು ಸಿಇಎನ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದರು.

ಮೂಲಭೂತ ಸೌಕರ್ಯ ವಂಚಿತ ಬಿಲಗುಂದಿ ಗ್ರಾಮ

• ಉದಯವಾಹಿನಿ ಕಲಬುರಗಿ

ಜಿಲ್ಲೆಯ ಆಳಂದ ತಾಲ್ಲೂಕಿನ ಬಿಲಗುಂದಿ ಗ್ರಾಮ ರಸ್ತೆ, ಸಾರಿಗೆ ಸಂಪರ್ಕ, ವಿದ್ಯುತ್, ಶುದ್ಧ ಕುಡಿಯುವ ನೀರು, ಶೌಚಾಲಯ, ಒಳಚರಂಡಿ ವ್ಯವಸ್ಥೆಯಂತಹ ಮೂಲಭೂತ ಸೌಕರ್ಯಗಳಿಂದ ವಂಚಿತವಾಗಿದೆ.

ದೇಶಕ್ಕೆ ಸ್ವಾತಂತ್ರ್ಯ ದೊರೆತು ಇಷ್ಟು ವರ್ಷಗಳಾದರೂ ಬಿಲಗುಂದಿ ಗ್ರಾಮಕ್ಕೆ ಇದುವರೆಗೆ ಅಗತ್ಯ ಮೂಲಭೂತ ಸೌಕರ್ಯಗಳು ಇಲ್ಲದೇ ಇರುವುದರಿಂದ ಗ್ರಾಮಸ್ಥರು ತೀವ್ರ ಸಂಕಷ್ಟ ಎದುರಿಸುವಂತಾಗಿದೆ.

ಗ್ರಾಮಸ್ಥರು ತಾಲ್ಲೂಕು ಕೇಂದ್ರವಾದ ಆಳಂದಗೆ ಹೋಗಲು ಸರಿ ಯಾದ ರಸ್ತೆ ಇಲ್ಲ. ನರೋಣ ಹೋಬಳಿ ಕೇಂದ್ರಕ್ಕೆ ಹೊಂದಿಕೊಂಡಿರುವ ಈ ಗ್ರಾಮ ಸರಿಯಾದ ರಸ್ತೆ ಸೌಕರ್ಯವಿಲ್ಲದೆ ಸುತ್ತಮುತ್ತ ಬರುವ ಗುಂಜಬ ಬಲಾದ, ಬಸವನ ಸಂಗೋಳಗಿ, (ಕುಣಿಸಂಗಾವಿ) ದೇಗಾಂವ, ಭೋದನ, ಕಮಲಾನಗರ ಹೀಗೆ ಹತ್ತಾರು ಗ್ರಾಮದ ಸಂಪರ್ಕದಿಂದ ದೂರ ಉಳಿದಿದೆ. ಗ್ರಾಮಕ್ಕೆ ಅಗತ್ಯ ಮೂಲಭೂತ ಸೌಲಭ್ಯಗಳಾದ ರಸ್ತೆ, ಸಾರಿಗೆ ಸಂಪರ್ಕ, ವಿದ್ಯುತ್ ಸೌಕರ್ಯ, ಶುದ್ಧ ಕುಡಿಯವ ನೀರಿ

ವಧುವಿನ ಫೋಟೋಗಳನ್ನು ಇನ್‌ಸ್ಟಾಗ್ರಾಮ್‌ನಲ್ಲಿ ಹಾಕಿದ ಛಾಯಾಗ್ರಾಹಕನ ಹತ್ಯೆ

ಬಲ್ಲಿಯಾ: ವಿವಾಹದಲ್ಲಿ ತೆಗೆದ ವಧುವಿನ ಫೋಟೋಗಳನ್ನು ಇನ್‌ಸ್ಟಾಗ್ರಾಮ್‌ನಲ್ಲಿ ಹಾಕಿದ್ದಕ್ಕಾಗಿ ಛಾಯಾಗ್ರಾಹಕನನ್ನು ಚಾಕುವಿನಿಂದ ಇರಿದು ಕೊಂದಿರುವ ಘಟನೆ ಇಲ್ಲಿ ನಡೆದಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ವಧುವಿನ ಸಹೋದರ ಮತ್ತು ಸೋದರ ಸಂಬಂಧಿಯನ್ನು ಬಂಧಿಸಲಾಗಿದೆ. ಇಬ್ಬರು ಆರೋಪಿಗಳು ಚಂದನ್ ಬಿಂದ್ (24) ಎಂಬುವ ಛಾಯಾ ಗ್ರಾಹಕನನ್ನು ತೋಟಕ್ಕೆ

ಕರೆಸಿಕೊಂಡು ಮನ ಬಂದಂತೆ ಅನೇಕ ಬಾರಿ ಚಾಕುವಿನಿಂದ ಇರಿದು ದೇಹವನ್ನು ಹೊಲದಲ್ಲಿ ಎಸೆದರು. ಐದು ದಿನಗಳ ನಂತರ ಮಾ.23 ರಂದು ಶವ ಪತ್ತೆಯಾಗಿದೆ ನಂತರ ಪೊಲೀಸರು ತನಿಖೆ ನಡೆಸಿ ಇಬ್ಬರನ್ನು ಬಂಧಿಸಲಾಯಿತು. ಭಿಂದ್ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಚಂದನ್ ಪ್ರಮುಖ ಆರೋಪಿ ಸುರೇಂದ್ರ ಯಾದವ್ ಅವರ ಸಹೋದರಿಯ ಮದುವೆಯಲ್ಲಿ ಛಾಯಾಚಿತ್ರ ತೆಗೆದಿದ್ದನು ವಧುವನ್ನು ಅತ್ತೆಯ ಮನೆಗೆ ಕಳಿಸುವಾಗ ವಧುವನ ಜೊತೆ ಅನುಚಿತವಾಗಿ ನಡೆದುಕೊಂಡಿದ್ದನು. ನಂತರ ತನ್ನ ಹಾಗು ವಧುವಿನ ಫೋಟೋಗಳನ್ನು ಇನ್‌ಸ್ಟಾಗ್ರಾಮ್‌ನಲ್ಲಿ ಹಾಕಿದ್ದಾನೆ. ಹೋಳಿ ಹಬ್ಬದಂದು ಸುರೇಂದ್ರ ಚಂದನ್‌ನೊಂದಿಗೆ ಸ್ನೇಹ ಬೆಳೆಸುವಂತೆ ನಟಿಸಿ, ನಂತರ ಬೇರೆಯವರ ಫೋನ್ ಬಳಸಿ ಮಾರ್ಚ್ 18 ರ ರಾತ್ರಿ ಆವನನ್ನು ಕರೆದೊಯ್ದಿದ್ದಾನೆ. ಅಲ್ಲಿ ಸುರೇಂದ್ರ, ಆತನ ಸೋದರ ಸಂಬಂಧಿ ರೋಹಿತ್ ಯಾದವ್ ಹೊಂಚುಹಾಕಿ ಚಾಕುವಿನಿಂದ ಇರಿದು ಹತ್ಯೆಗೈದು ಶವವನ್ನು ಗದ್ದೆಗೆ ಎಸೆದಿದ್ದಾರೆ. ಬಾಲಿ ಯಾದವ್, ದೀಪಕ್ ಯಾದವ್, ಮಹಿಳೆಯ ಸೋದರ ಸಂಬಂಧಿ ರೋಹಿತ್ ಯಾದವ್ ವಿರುದ್ಧ ಪ್ರಕರಣ ದಾಖಲಾಗಿದೆ.

ಭಾರತವು ವಿಶ್ವದ ಹಾಲು ಉತ್ಪಾದಕರಲ್ಲಿ ಆಗ್ರಸ್ಥಾನ

ನವದೆಹಲಿ: ಭಾರತವು ವಿಶ್ವದ ಹಾಲು ಉತ್ಪಾದಕರಲ್ಲಿ ಆಗ್ರಸ್ಥಾನದಲ್ಲಿದೆ ಮತ್ತು ಈಗಿನ 239 ಎಂಎಂಟಿಯಿಂದ ಮುಂದಿನ ಐದು ವರ್ಷಗಳಲ್ಲಿ 300 ಮಿಲಿಯನ್ ಮೆಟ್ರಿಕ್ ಟನ್ ಹಾಲು ಉತ್ಪಾದಿಸುವ ಗುರಿಯನ್ನು ಹೊಂದಿದೆ ಎಂದು ಕೇಂದ್ರ ಪಶುಸಂಗೋಪನೆ ಮತ್ತು ಹೈನುಗಾರಿಕೆ ಸಚಿವ ರಾಜೀವ್ ರಂಜನ್ ಸಿಂಗ್ ಲೋಕಸಭೆಯಲ್ಲಿ ತಿಳಿಸಿದ್ದಾರೆ. ಮೋದಿ ಸರ್ಕಾರವು 2014 ರಲ್ಲಿ ರಾಷ್ಟ್ರೀಯ

ಗೋಕುಲ್ ಮಿಷನ್ ಅನ್ನು ಪ್ರಾರಂಭಿಸಿದಾಗಿನಿಂದ, ದೇಶದಲ್ಲಿ ಹಾಲಿನ ಉತ್ಪಾದನೆಯು 63.5 ಪ್ರತಿಶತದಷ್ಟು ಹೆಚ್ಚಾಗಿದೆ ಮತ್ತು ಮುಂದಿನ ಮೂರು ವರ್ಷಗಳಲ್ಲಿ ಅದನ್ನು 15 ಪ್ರತಿಶತದಷ್ಟು ಹೆಚ್ಚಿಸುವ ಭರವಸೆಯನ್ನು ಸರ್ಕಾರ ಹೊಂದಿದೆ ಎಂದು ಸಿಂಗ್ ಹೇಳಿದರು. ಭಾರತವು ಈಗ ವಿಶ್ವದ ಅಗ್ರ ಹಾಲು ಉತ್ಪಾದಕ ರಾಷ್ಟ್ರವಾಗಿದೆ. ದೇಶದಲ್ಲಿ ಸುಮಾರು 10 ಕೋಟಿ ಜನರು ಹಾಲು ಉತ್ಪಾದನೆಯಲ್ಲಿ ತೊಡಗಿದ್ದು, ಅದರಲ್ಲಿ ಶೇ.75 ಮಹಿಳೆಯರು ಇದ್ದಾರೆ ಎಂದು ಸಚಿವರು ಹೇಳಿದರು. ಭಾರತದಲ್ಲಿ ಪ್ರತಿ ವ್ಯಕ್ತಿಯ ಹಾಲಿನ ಬಳಕೆ 471 ಗ್ರಾಂ ಎಂದು ಅವರು ಹೇಳಿದರು. ಪಶುಸಂಗೋಪನೆ ಮತ್ತು ಹೈನುಗಾರಿಕೆ ಇಲಾಖೆಯು ರಾಷ್ಟ್ರೀಯ ಗೋಕುಲ್ ಮಿಷನ್ ಅನ್ನು ಅನುಷ್ಠಾನಗೊಳಿಸುತ್ತಿದೆ. ಸ್ಥಳೀಯ ತಳಿಗಳ ಅಭಿವೃದ್ಧಿ ಮತ್ತು ಸಂರಕ್ಷಣೆ, ಗೋವಿನ ಜನಸಂಖ್ಯೆಯ ಆನುವಂಶಿಕ ಉನ್ನತೀಕರಣ, ಹಾಲಿನ ಉತ್ಪಾದನೆ, ಗೋವಿನ ಉತ್ಪಾದಕತೆಯನ್ನು ಹೆಚ್ಚಿಸುವ ಮೂಲಕ ಹಾಲು ಉತ್ಪಾದನೆಯನ್ನು ರೈತರಿಗೆ ಹೆಚ್ಚು ಲಾಭದಾಯಕವಾಗಿಸುವುದು ಇದರ ಮುಖ್ಯ ಉದ್ದೇಶವಾಗಿದೆ. 2014ರಲ್ಲಿ ಪ್ರಾರಂಭಿಸಲಾದ ಯೋಜನೆಯು 2021-2022 ರಿಂದ 2025-2026 ರವರೆಗೆ ಇಲಾಖೆಯ ಪರಿಷ್ಕೃತ ಮರುಜೋಡಣೆ ಯೋಜನೆಗಳ ಅಡಿಯಲ್ಲಿ ಮುಂದುವರಿಯುತ್ತದೆ. ದನಗಳ ಉತ್ಪಾದಕತೆಯನ್ನು ಹೆಚ್ಚಿಸುವುದು ಮತ್ತು ಸುಸ್ಥಿರ ತಂತ್ರಜ್ಞಾನಗಳನ್ನು ಬಳಸಿಕೊಂಡು ಹಾಲಿನ ಉತ್ಪಾದನೆಯನ್ನು ಸುಸ್ಥಿರವಾಗಿ ಹೆಚ್ಚಿಸುವುದು ಮತ್ತು ಸಂತಾನೋತ್ಪತ್ತಿ ಉದ್ದೇಶಗಳಿಗಾಗಿ ಹೆಚ್ಚಿನ ಆನುವಂಶಿಕ ಅರ್ಹತೆ ಹೊಂದಿರುವ ಬುಲ್‌ಗಳ ಬಳಕೆಯನ್ನು ಪ್ರಚಾರ ಮಾಡುವುದು ಇದರ ಉದ್ದೇಶಗಳಾಗಿವೆ. ಸಂತಾನೋತ್ಪತ್ತಿ ಜಾಲವನ್ನು ಬಲಪಡಿಸುವ ಮೂಲಕ ಮತ್ತು ಕೃತಕ ಗರ್ಭಧಾರಣೆಯ ಸೇವೆಗಳನ್ನು ರೈತರ ಮನೆ ಬಾಗಿಲಿಗೆ ತಲುಪಿಸುವ ಮೂಲಕ ಕೃತಕ ಗರ್ಭಧಾರಣೆಯ ವ್ಯಾಪ್ತಿಯನ್ನು ಹೆಚ್ಚಿಸುವ ಗುರಿಯನ್ನು ಹೊಂದಿದೆ ಎಂದರು.

ಇಂಗ್ಲೆಂಡ್‌ನಲ್ಲಿ ಹಕ್ಕಿ ಜ್ವರ ಪತ್ತೆ



ಲಂಡನ್: ಉತ್ತರ ಇಂಗ್ಲೆಂಡ್‌ನ ಹೆಣ್ಣು ಕುರಿಯಲ್ಲಿ ಹಕ್ಕಿ ಜ್ವರ ಪತ್ತೆಯಾಗಿದ್ದು, ಇದು ಬ್ರಿಟನ್‌ನ ಮೊದಲ ಪ್ರಕರಣ ಎಂದು ಇಂಗ್ಲೆಂಡ್ ಸರ್ಕಾರ ಹೇಳಿದೆ. ಸಸ್ತನಿಗಳಲ್ಲಿ (ಹಾಲುಣಿಸುವ ಪ್ರಾಣಿಗಳು) ಸೋಂಕು ಹೆಚ್ಚಳ ಆಗುತ್ತಿರುವುದು ಸಾಂಕ್ರಾಮಿಕ ರೋಗದ ಆತಂಕಕ್ಕೆ ಕಾರಣವಾಗಿದೆ. ಹೆಚ್5ಎನ್1 ಹಕ್ಕಿ ಜ್ವರದ ವೈರಾಣುವಿನಿಂದಾಗಿ ವಿಶ್ವದಾದ್ಯಂತ ಕರಡಿ, ಬೆಕ್ಕು, ಹಸುಗಳು, ಶ್ವಾನಗಳು, ಡಾನ್, ಕಡಲು ನಾಯಿ ಮತ್ತು ಹುಲಿಗಳು ಸಾವನ್ನಪ್ಪಿವೆ.

ಯಾರ್ಕ್‌ಶೈರ್‌ನ ಹಕ್ಕಿಗಳಲ್ಲಿ ಮಾರಕ ಸಾಂಕ್ರಾಮಿಕ ಸೋಂಕು (ಹೆಚ್5ಎನ್1) ಪತ್ತೆಯಾದ ನಂತರ ನಿರಂತರ ತಪಾಸಣೆ ವೇಳೆ ಕುರಿಯಲ್ಲಿ ಹಕ್ಕಿ ಜ್ವರ ಪತ್ತೆಯಾಗಿದೆ ಎಂದು ಬ್ರಿಟನ್ ಸರ್ಕಾರ ಹೇಳಿಕೆಯಲ್ಲಿ ತಿಳಿಸಿದೆ.

ಪಕ್ಷಿ ಮತ್ತು ಪ್ರಾಣಿಗಳಲ್ಲಿ ಕಾಣಿಸಿಕೊಂಡಿರುವ ವೈರಾಣು ಮನುಷ್ಯರಿಗೆ ಹಬ್ಬಿರುವ ಬಗ್ಗೆ ದೃಢಪಟ್ಟಿಲ್ಲ. ಸೋಂಕು ಪತ್ತೆಯಾಗಿರುವ ಕುರಿಯ ಹಾಲಿನ ಪರೀಕ್ಷೆಯಲ್ಲಿ ಪಾಸಿಟಿವ್ ಬಂದಿದೆ. ಸೋಂಕಿತ ಹೆಣ್ಣು ಕುರಿಯನ್ನು ಕೊಲ್ಲಲಾಗಿದ್ದು, ಕುರಿ ಮಂದೆಯಲ್ಲಿ(ಹಿಂಡು) ಲಕ್ಷಣಗಳು ಕಾಣಿಸಿಕೊಂಡಿಲ್ಲ.

ಹಕ್ಕಿ ಜ್ವರ ಕಾಣಿಸಿಕೊಂಡ ಸ್ಥಳಗಳಲ್ಲಿ ಜನರ ಆರೋಗ್ಯದ ಮೇಲೆ ನಿಗಾ ವಹಿಸಲಾಗಿದೆ. ಜಾಗತಿಕವಾಗಿ ಸಸ್ತನಿಗಳ ಮೂಲಕ ಮಾರಕ ವೈರಾಣು ಹರಡುತ್ತಿರುವುದು ಪತ್ತೆಯಾಗಿದೆ ಎಂದು ಇಂಗ್ಲೆಂಡ್ ಹೆಲ್ತ್ ಸೆಕ್ಯೂರಿಟಿ ಏಜೆನ್ಸಿಯ ಕಾರ್ಯದರ್ಶಿ ಮೀರಾ ಚಂದ್ ತಿಳಿಸಿದ್ದಾರೆ. ಮಾರಕ ಸೋಂಕು ಹಕ್ಕಿ ಜ್ವರ ಈಗ ಸಾಮಾನ್ಯವಾಗಿದೆ. ಜಗತ್ತಿನೆಲ್ಲೆಡೆ ವ್ಯಾಪಿಸಿದ್ದರೂ ಮನುಷ್ಯರಿಗೆ ಸುಲಭವಾಗಿ ಹರಡುತ್ತಿಲ್ಲ ಎಂದು ತಜ್ಞರು ಹೇಳಿದ್ದಾರೆ. 2024ರಲ್ಲಿ ಅಮೆರಿಕದ ಡೈರಿ ಹಸುಗಳಲ್ಲಿ ಕಾಣಿಸಿಕೊಂಡಿದ್ದ ಹಕ್ಕಿ ಜ್ವರ ಆನಂತರ ಹೆಚ್ಚು ವ್ಯಾಪಿಸಿಕೊಂಡಿತ್ತು.

ಗ್ರೀನ್ ಕಾರ್ಡ್ ಹೊಂದಿರುವ ಅಮೆರಿಕನ್ನರಿಗೆ ಶಾಕ್

ಸೋಶಿಯಲ್ ಮೀಡಿಯಾ ಖಾತೆ ವಿವರಣೆ ಕೇಳಿದ ಟ್ರಂಪ್ ಸರ್ಕಾರ

ಅಮೆರಿಕ: ವಲಸೆ ಹೋಗುವುದನ್ನು ತಡೆಯಲು, ರಾಜಕೀಯ ಟೀಕೆಗಳಿಗೆ ಕಡಿವಾಣ ಹಾಕಲು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಸರ್ಕಾರ ಗ್ರೀನ್ ಕಾರ್ಡ್ ಹೊಂದಿರುವವರಿಗೆ ಶಾಕಿಂಗ್ ನ್ಯೂಸ್ ವೊಂದನ್ನು ಕೊಟ್ಟಿದೆ. ರಾಷ್ಟ್ರೀಯ ಭದ್ರತೆ ಮತ್ತು ಸಾರ್ವಜನಿಕ ಸುರಕ್ಷತೆ ತಪಾಸಣೆಯ ಅಂಗವಾಗಿ, ಗ್ರೀನ್ ಕಾರ್ಡ್ ಹೊಂದಿರುವವರು ಶೀಘ್ರದಲ್ಲೇ ತಮ್ಮ ಸೋಶಿಯಲ್ ಮೀಡಿಯಾ ಖಾತೆಗಳನ್ನು ಸರ್ಕಾರಕ್ಕೆ ಸಲ್ಲಿಸಬೇಕಾಗುವ ಸಾಧ್ಯತೆ ಇದೆ. ಅಮೆರಿಕದಲ್ಲಿ ಗ್ರೀನ್ ಕಾರ್ಡ್ ಹೊಂದಿರುವವರು ಶೀಘ್ರದಲ್ಲೇ ತಮ್ಮ ಸಾಮಾಜಿಕ ಮಾಧ್ಯಮ ಖಾತೆಗಳನ್ನು ಸರ್ಕಾರಕ್ಕೆ ನೀಡಬೇಕಾಗಬಹುದು. ವಿದೇಶದಲ್ಲಿ ವಾಸಿಸುವ ವೀಸಾ ಅರ್ಜಿದಾರರು ತಮ್ಮ ಸೋಶಿಯಲ್ ಮೀಡಿಯಾ ವಿವರಗಳನ್ನು USCISನೊಂದಿಗೆ ಹಂಚಿಕೊಳ್ಳಬೇಕು.

ಈಗ, ಹೊಸ ಪ್ರಸ್ತಾಪದ ಅಡಿಯಲ್ಲಿ, ಈ ನಿಯಮವು

ಅಮೆರಿಕದಲ್ಲಿ ಕಾನೂನು ಬದ್ಧವಾಗಿ ವಾಸಿಸುವ, ಶಾಶ್ವತವಾಗಿ ನೆಲೆಯೂರಲು ಬಯಸುವ ಹೊಸ ಅರ್ಜಿದಾರರಿಗೂ ಅನ್ವಯಿಸಲ್ಪಡುತ್ತದೆ. ಟ್ರಂಪ್ ಆಡಳಿತವು ಮಾರ್ಚ್ 5 ರಂದು ಒಂದು ಸೂಚನೆಯನ್ನು ಬಿಡುಗಡೆ ಮಾಡಿತ್ತು. USCIS ಸೋಶಿಯಲ್ ಮೀಡಿಯಾದ ಪರಿಶೀಲನೆ ರಾಷ್ಟ್ರೀಯ ಭದ್ರತೆ ಮತ್ತು ಸಾರ್ವಜನಿಕ ಸುರಕ್ಷತಾ ತಪಾಸಣೆ ಮತ್ತು ಸಂಬಂಧಿತ ತನಿಖೆಗಾಗಿ ಅಮೆರಿಕ ಗ್ರೀನ್‌ಕಾರ್ಡ್ ಅರ್ಜಿದಾರರಿಂದ ಮಾಹಿತಿ ಸಂಗ್ರಹಿಸಲಾಗುತ್ತಿದೆ ಎಂದು ಪ್ರಕಟಣೆ ಜಾರಿ ಮಾಡಿತ್ತು. ಜೊತೆಗೆ ಗ್ರೀನ್ ಕಾರ್ಡ್ ಮತ್ತು ವೀಸಾ ಹೊಂದಿರುವವರ ಮೇಲೆ ಹೆಚ್ಚಿನ ನಿಗಾ ಇಡಲಾಗಿದೆ. ಈ ಹೊಸ ನಿಯಮದಿಂದ ಗ್ರೀನ್ ಕಾರ್ಡ್ ಹೊಂದಿರುವವರಿಗೆ ತೊಂದರೆಯಾಗಬಹುದು. ಸರ್ಕಾರವು ಅವರ ಸಾಮಾಜಿಕ ಮಾಧ್ಯಮ ಚಟುವಟಿಕೆಗಳ ಮೇಲೆ ನಿಗಾ ಇಡುತ್ತದೆ. ಇದರಿಂದ ಅವರು ಆನ್‌ಲೈನ್‌ನಲ್ಲಿ ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಲು ಹಿಂಜರಿಯಬಹುದು. ಇದು ಅಭಿವ್ಯಕ್ತಿ ಸ್ವಾತಂತ್ರ್ಯದ ಮೇಲೆ ಪರಿಣಾಮ ಬೀರಬಹುದು. ಸರ್ಕಾರದ ಪರಿಶೀಲನೆ ವಾಕ್ ಸ್ವಾತಂತ್ರ್ಯವನ್ನು ಹತ್ತಿಕ್ಕುತ್ತದೆ.

- ರಾಷ್ಟ್ರೀಯ ಭದ್ರತೆ ಮತ್ತು ಸಾರ್ವಜನಿಕ ಸುರಕ್ಷತೆ ತಪಾಸಣೆ
- ಸೋಶಿಯಲ್ ಮೀಡಿಯಾ ಖಾತೆ ಸರ್ಕಾರಕ್ಕೆ ಸಲ್ಲಿಸಬೇಕಾಗುವ ಸಾಧ್ಯತೆ
- ಗ್ರೀನ್ ಕಾರ್ಡ್ ಹೊಂದಿರುವ ಭಾರತೀಯರ ಮೇಲೆ ನೇರ ಪರಿಣಾಮ
- ಆನ್‌ಲೈನ್‌ನಲ್ಲಿ ಮುಕ್ತ ರಾಜಕೀಯ ಚರ್ಚೆಯ ಮೇಲೆ ಪರಿಣಾಮ

ಟ್ರಂಪ್ ಅವರ ವಲಸೆ ನೀತಿಗಳು ವಿವಾದಾತ್ಮಕವಾಗಿವೆ. ಕೆಲವರು ಇದು ದೇಶದ ಭದ್ರತೆಗೆ ಅವಶ್ಯಕವೆಂದು ವಾದಿಸುತ್ತಾರೆ. ಇತರರು ಇದು ತಾರತಮ್ಯ ಮತ್ತು ಅನ್ಯಾಯವೆಂದು ಹೇಳುತ್ತಾರೆ. ಈ ಹೊಸ ನಿಯಮವು ಅಮೆರಿಕದಲ್ಲಿ ವಾಸಿಸುವ ವಲಸಿಗರ ಜೀವನದ ಮೇಲೆ ಪರಿಣಾಮ ಬೀರುತ್ತದೆ ಎಂಬುದನ್ನು ಕಾದು ನೋಡಬೇಕಿದೆ.

ಗ್ರೀನ್ ಕಾರ್ಡ್ ಎಂದರೇನು?: ಅಮೆರಿಕದ ಶಾಶ್ವತ ನಿವಾಸಿ ಎಂಬುದಕ್ಕೆ ಗ್ರೀನ್ ಕಾರ್ಡ್‌ವೊಂದು ದಾಖಲೆ. ಅಮೆರಿಕದ ಪೌರತ್ವ ಪಡೆವ ಮೊದಲೇ ಇರುವ ಒಂದು ವಲಸೆ ಪ್ರಕ್ರಿಯೆ. ಗ್ರೀನ್‌ಕಾರ್ಡ್ ಅಮೆರಿಕದಲ್ಲಿ ಕಾನೂನು ಬದ್ಧ ಶಾಶ್ವತ ನಿವಾಸಿಯಾಗಿದ್ದಾನೆ (ಎಲ್‌ಪಿಆರ್) ಎಂಬು ದನ್ನು ತೋರಿಸುತ್ತದೆ. ಗ್ರೀನ್ ಕಾರ್ಡ್ ಹೊಂದುವುದರಿಂದ ವಲಸೆ ಕುರಿತ ಹಲವು ಲಾಭಗಳನ್ನು ಕಾಣುತ್ತಿದೆ ಎಂದು ಶಿಂಧೆ ಟಾಂಗ್ ಕೊಟ್ಟರು. ವಿಡಿಯೋ ವೈರಲಾಗ್ತಿದ್ದಂತೆ ಇದು ಶಿವಸೈನಿಕರನ್ನು ಕೆರಳಿಸಿತು. ಶಿವ ಸೇನಾ ಕಾರ್ಯಕರ್ತರು ಈ ಶೋ ನಡೆದಿದ್ದ ಹೋಟೆಲ್ ಯುನಿ ಕಾಂಟಿ ನೆಂಟಲ್‌ನ ಸಭಾಂಗಣಕ್ಕೆ ತಲುಪಿ ಅಲ್ಲಿ ಕೋಲಾಹಲ ಸೃಷ್ಟಿಸಿದ್ದಾರೆ. ಇಡೀ ಹೊಟೇಲ್‌ನ ಟೇಬಲ್ ಕುರ್ಚಿಗಳನ್ನು ಪುಡಿಗಟ್ಟಿದ್ದಾರೆ.

ಮುಕ್ತ ರಾಜಕೀಯ ವಿಮರ್ಶೆಗೆ ಕಡಿವಾಣ?

ಈ ಕ್ರಮವು ಮುಕ್ತವಾಗಿ ರಾಜಕೀಯ ವಿಮರ್ಶಕರನ್ನು ಅಮೆರಿಕಾದಲ್ಲಿ ನೆಲೆಸದಂತೆ ತಡೆಯಲು ಜೊತೆಗೆ ಕಾನೂನುಬದ್ಧವಾಗಿ ನೆಲೆಸಿರುವವರ ಮೇಲೆ ಪರಿಣಾಮ ಬೀರಬಹುದು. ಅಮೆರಿಕದಲ್ಲಿರುವ ಅನೇಕ ಭಾರತೀಯರು ಅಮೆರಿಕ ರಾಜಕೀಯದಲ್ಲಿ ನಿಜವಾಗಿಯೂ ಬಹಳ ಸಕ್ರಿಯ ಕೊಡುಗೆದಾರರಾಗಿದ್ದಾರೆ. ಮೋದಿ ಸರ್ಕಾರ, ಭಾರತ ಮತ್ತು ಅಮೆರಿಕ ಸಂಬಂಧ, ಜಾಗತಿಕ ವ್ಯವಹಾರಗಳು ಇತ್ಯಾದಿ ವಿಷಯಗಳ ಬಗ್ಗೆ ಮಾತನಾಡುತ್ತಾರೆ. ಸೋಶಿಯಲ್ ಮೀಡಿಯಾ ಪರಿಶೀಲನೆ ನಡೆಸುವ ಹಿನ್ನೆಲೆ, ಮುಂದಿನ ದಿನಗಳಲ್ಲಿ ರಾಜಕೀಯ ವಿಷಯಗಳ ಬಗ್ಗೆ ಆನ್‌ಲೈನ್‌ನಲ್ಲಿ ಬಹಿರಂಗವಾಗಿ ತಮ್ಮಿಚ್ಛೆಯಂತೆ ಮುಕ್ತವಾಗಿ ಮಾತನಾಡಲು ಹಿಂಜರಿಯಬಹುದು.

ಪಡೆಯ ಬಹುದು. ಜೊತೆಗೆ ಅಮೆರಿಕದಲ್ಲಿ ಶಾಶ್ವತ ಉದ್ಯೋಗ ಹೊಂದಲು ಇದು ನೆರವಾಗುತ್ತದೆ. ಗ್ರೀನ್‌ಕಾರ್ಡ್ ಹಸಿರು ಬಣ್ಣದಲ್ಲಿದ್ದು, ಆದ್ದರಿಂದ ಇದನ್ನು ಗ್ರೀನ್‌ಕಾರ್ಡ್ ಎಂದು ಕರೆಯಲಾಗುತ್ತದೆ. ಗ್ರೀನ್‌ಕಾರ್ಡ್ ಅವಧಿ 10 ವರ್ಷ ಇರುತ್ತದೆ. ಇದರ ಅವಧಿ ಮುಕ್ತಾಯವಾಗುವ ಕೊನೆಯ ಆರು ತಿಂಗಳ ಒಳಗೆ ಮತ್ತೆ ನವೀಕರಣಕ್ಕೆ ಅರ್ಜಿ ಸಲ್ಲಿಸಬಹುದಾಗಿದೆ.

ಅಮೆರಿಕ ಪೌರತ್ವ ಹೊಂದಿದವರೊಂದಿಗೆ ಕೌಟುಂಬಿಕ ಸಂಬಂಧ ಅಥವಾ ಗ್ರೀನ್‌ಕಾರ್ಡ್ ಹೊಂದಿರುವ ವ್ಯಕ್ತಿಯೊಂದಿಗೆ ಸಂಬಂಧ, ಅಮೆರಿಕದಲ್ಲಿ ಉದ್ಯೋಗ, ಉದ್ಯಮ ನಡೆಸುತ್ತಿರುವವರು, ವರ್ಷಕ್ಕೂ ಹೆಚ್ಚು ಕಾಲ ನಿರಾಶ್ರಿತರಾಗಿ ನೆಲೆಸಿರುವವರು, ಡೈವರ್ಸಿಟಿ ವೀಸಾ ಲಾಟರಿ ಪಡೆದವರು, ಅಮೆರಿಕದಲ್ಲಿ ದೊಡ್ಡ ಮಟ್ಟದ ಉದ್ಯಮ ಸ್ಥಾಪನೆ ಉದ್ದೇಶ ಹೊಂದಿದವರು, ಕೌಶಲ ಹೊಂದಿದ ನೌಕರರು, ಎಚ್ 1ಬಿ ವೀಸಾದಲ್ಲಿ ಅಮೆರಿಕದಲ್ಲಿ ನೌಕರಿ ಮಾಡುತ್ತಿರುವವರು ಆರು ವರ್ಷದೊಳಗಾಗಿ ಗ್ರೀನ್‌ಕಾರ್ಡ್ ಪಡೆಯಲು ಅರ್ಹರು.

ಗಾಜಾ ಮೇಲೆ ಇಸ್ರೇಲ್ ದಾಳಿ ರಾತ್ರೋರಾತ್ರಿ 23 ಮಂದಿ ಸಾವು

ಗಾಜಾ: ಗಾಜಾ ಪಟ್ಟಿಯಲ್ಲಿ ಇಸ್ರೇಲ್ ನಡೆಸಿದ ದಾಳಿಯಿಂದ ಕನಿಷ್ಠ 23 ಜನರು ಮೃತಪಟ್ಟಿದ್ದಾರೆ ಎಂದು ಪ್ಯಾಲೆಸ್ತೀನಿಯನ್ ವೈದ್ಯರು ತಿಳಿಸಿದ್ದಾರೆ. ದಕ್ಷಿಣ ನಗರವಾದ ಖಾನ್ ಯೂನಿಸ್ ಬಳಿಯ ತಮ್ಮ ಟೆಂಟ್ ಮೇಲೆ ನಡೆದ ದಾಳಿಯಲ್ಲಿ ಮೂವರು ಮಕ್ಕಳು ಮತ್ತು ಅವರ ಪೋಷಕರು ಮೃತಪಟ್ಟಿದ್ದಾರೆ ಎಂದು ನಾಸರ್ ಆಸ್ಪತ್ರೆ ತಿಳಿಸಿದೆ. ಕಳೆದ ವಾರ ಇಸ್ರೇಲ್ ಗಾಜಾ ಮೇಲೆ ಕದನ ವಿರಾಮ ಮುರಿದು 17 ತಿಂಗಳ ಯುದ್ಧವನ್ನು ನಿಲ್ಲಿಸಿ ಭಾರೀ ಬಾಂಬ್ ದಾಳಿಯನ್ನು ಪುನರಾರಂಭಿಸಿದ್ದು,

ಸತ್ತವರು ಮತ್ತು ಗಾಯಗೊಂಡವರ ಸಂಖ್ಯೆ ಹೆಚ್ಚಾಗಿದೆ. ಮಧ್ಯ ಗಾಜಾದಲ್ಲಿ, ಅಲ್-ಅಕ್ಸಾ ಹುತಾತ್ಮರ ಆಸ್ಪತ್ರೆಯಲ್ಲಿ ಮೂರು ಪ್ರತ್ಯೇಕ ದಾಳಿಗಳಲ್ಲಿ ಕೊಲ್ಲಲ್ಪಟ್ಟ ಆರು ಮಂದಿಯ ಶವಗಳಿದ್ದವು. ಅವ್ವಾ ಆಸ್ಪತ್ರೆಯ ಪ್ರಕಾರ, ನಿರ್ಮಿಸಲಾದ ನುಸೈರತ್ ನಿರಾಶ್ರಿತರ ಶಿಬಿರದಲ್ಲಿರುವ ಮನೆಯ ಮೇಲೆ ನಡೆದ ದಾಳಿಯಲ್ಲಿ ಇತರ ಮೂವರು ಮೃತಪಟ್ಟಿದ್ದಾರೆ. ಗಾಜಾ ನಗರದಲ್ಲಿ, ವಸತಿ ಕಟ್ಟಡದ ಮೇಲೆ ಇಸ್ರೇಲ್ ನಡೆಸಿದ ದಾಳಿಯಲ್ಲಿ ಐವರು ಮೃತಪಟ್ಟಿದ್ದಾರೆ ಎಂದು ಆರೋಗ್ಯ ಸಚಿವಾಲಯದ ತುರ್ತು ಸೇವೆ ತಿಳಿಸಿದೆ. 12 ಜನರು ಗಾಯಗೊಂಡಿದ್ದಾರೆ ಎಂದು ಅದು ತಿಳಿಸಿದೆ.

ಗಾಜಾ ಪಟ್ಟಿಯಾದ್ಯಂತ ಇಸ್ರೇಲ್ ನಡೆಸಿದ ದಾಳಿಯಲ್ಲಿ ಮಹಿಳೆಯರು, ಮಕ್ಕಳು ಸೇರಿದಂತೆ 60 ಕ್ಕೂ ಹೆಚ್ಚು ಪ್ಯಾಲೆಸ್ತೀನಿಯನ್ನರು ಮೃತಪಟ್ಟಿದ್ದರು. ಗಾಜಾದಲ್ಲಿ ಇಸ್ರೇಲ್ ನಡೆಸಿದ ಕಾರ್ಯಾಚರಣೆಯಲ್ಲಿ 50,000 ಕ್ಕೂ ಹೆಚ್ಚು ಪ್ಯಾಲೆಸ್ತೀನಿಯನ್ನರು ಮೃತಪಟ್ಟು 1,13,000 ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ. ಅಕ್ಟೋಬರ್ 7, 2023 ರಂದು ದಕ್ಷಿಣ ಇಸ್ರೇಲ್ ಮೇಲೆ ದಾಳಿ ನಡೆಸಿ ಸುಮಾರು 1,200 ಜನರು ಮೃತಪಟ್ಟ ನಂತರ ಇಸ್ರೇಲ್ ಹಮಾಸ್ ನ್ನು ನಾಶಮಾಡುವ ಪ್ರತಿಜ್ಞೆಯೊಂದಿಗೆ ಅಭಿಯಾನವನ್ನು ಪ್ರಾರಂಭಿಸಿತು.

ಕುನಾಲ್ ಕಾಮ್ರಾ ವಿವಾದದ ಬಗ್ಗೆ ಮಹಾ ಡಿಸಿಎಂ ಏಕನಾಥ್ ಶಿಂಧೆ ಪ್ರತಿಕ್ರಿಯೆ

ಮುಂಬೈ: ಕಾಮಿಡಿ ಶೋವೊಂದರಲ್ಲಿ ಖ್ಯಾತ ಸ್ಟ್ಯಾಂಡ್ ಕಾಮಿಡಿಯನ್ ಕುನಾಲ್ ಕಾಮ್ರಾ ಅವರು, ಮಹಾರಾಷ್ಟ್ರದ ಉಪಮುಖ್ಯಮಂತ್ರಿ ಏಕನಾಥ್ ಶಿಂಧೆ ಅವರನ್ನು ನಂಬಿಕೆ ದ್ರೋಹಿ ಎಂದು ಟೀಕಿಸಿರು



ಸೋಲಿನ ಸುಳಿಯಲ್ಲಿದ್ದ ಪಂದ್ಯವನ್ನು

ರೋಚಕವಾಗಿ ಗೆದ್ದ ಪಂಜಾಬ್!

ಐಪಿಎಲ್ ಟೂರ್ನಿಯ ಇಂದಿನ ಹೈಸ್ಕೋರಿಂಗ್ ಪಂದ್ಯದಲ್ಲಿ ಪಂಜಾಬ್ ಕಿಂಗ್ಸ್ ತಂಡ ಗುಜರಾತ್ ಟೈಟನ್ಸ್ ವಿರುದ್ಧ ರೋಚಕ ಜಯ ದಾಖಲಿಸಿದೆ. ಮೊದಲು ಬ್ಯಾಟಿಂಗ್ ಮಾಡಿದ್ದ ಪಂಜಾಬ್ ಕಿಂಗ್ಸ್ ನಿಗಧಿತ 20 ಓವರ್ ನಲ್ಲಿ 5 ವಿಕೆಟ್ ನಷ್ಟಕ್ಕೆ 243 ರನ್ ಕಲೆಹಾಕಿತ್ತು. ಗೆಲ್ಲಲು 244 ರನ್ ಗಳ ಬೃಹತ್ ಗುರಿ ಬೆನ್ನು ಹತ್ತಿದ ಗುಜರಾತ್ ಟೈಟನ್ಸ್ ನಿಗದಿತ 20 ಓವರ್ ನಲ್ಲಿ 5 ವಿಕೆಟ್ ನಷ್ಟಕ್ಕೆ 232 ರನ್ ಗಳಿಸಿ ಕೇವಲ 11 ರನ್ ಗಳ ಅಂತರದಲ್ಲಿ ವಿರೋಚಿತ ಸೋಲು ಕಂಡಿತು.

ನಿಸ್ವಾರ್ಥ ಬ್ಯಾಟಿಂಗ್, ಪಂಜಾಬ್ ಕಿಂಗ್ಸ್ ದಾಖಲೆ ಐಪಿಎಲ್ ಟೂರ್ನಿಯ ಮಂಗಳವಾರದ ಪಂದ್ಯದಲ್ಲಿ ಭರ್ಜರಿ ಬ್ಯಾಟಿಂಗ್ ಮಾಡಿದ ಪಂಜಾಬ್ ಕಿಂಗ್ಸ್ ದಾಖಲೆ ನಿರ್ಮಿಸಿದೆ. ಅಹ್ಮದಾಬಾದ್ ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ಇಂದು ನಡೆಯುತ್ತಿರುವ ಗುಜರಾತ್ ಟೈಟನ್ಸ್ ವಿರುದ್ದದ ಪಂದ್ಯದಲ್ಲಿ ಪಂಜಾಬ್ ಸ್ಫೋಟಕ

ಈ ಪಂದ್ಯದಲ್ಲಿ ಅಯ್ಯರ್ 3ರನ್ ಅಂತರದಲ್ಲಿ ಶತಕ ಮಿಸ್ ಮಾಡಿಕೊಂಡರಾದರೂ, ದಾಖಲೆ ಬರೆದಿದ್ದಾರೆ. ಫ್ರಾಂಚೈಸಿಯೊಂದರ ನಾಯಕತ್ವ ವಹಿಸಿಕೊಂಡ ಬಳಿಕ ಚೊಚ್ಚಲ ಪಂದ್ಯದಲ್ಲಿ ಅತ್ಯಧಿಕ ಸ್ಕೋರ್ ಗಳಿಸಿದ 3ನೇ ಆಟಗಾರ ಎಂಬ ಕೀರ್ತಿಗೆ ಅಯ್ಯರ್ ಪಾತ್ರರಾಗಿದ್ದಾರೆ. ಈ ಹಿಂದೆ 2021ರಲ್ಲಿ ಸಂಜು ಸ್ಯಾಮ್ಸನ್ ರಾಜಸ್ತಾನ ಪರ ಇದೇ ಪಂಜಾಬ್ ವಿರುದ್ಧ 119 ರನ್ ಗಳಿಸಿದ್ದು ಈ ಪಟ್ಟಿಯಲ್ಲಿ ಅಗ್ರ ಸ್ಥಾನದಲ್ಲಿದೆ.

ಬ್ಯಾಟಿಂಗ್ ನಡೆಸಿದ್ದು ಈ ಪಂದ್ಯದಲ್ಲಿ ಶ್ರೇಯಸ್ ಅಯ್ಯರ್ ಪಡೆ ನಿಗಧಿತ 20 ಓವರ್ ನಲ್ಲಿ 5 ವಿಕೆಟ್ ನಷ್ಟಕ್ಕೆ 243 ರನ್ ಕಲೆಹಾಕಿದೆ. ಪಂಜಾಬ್ ಪರ ನಾಯಕ ಶ್ರೇಯಸ್ ಅಯ್ಯರ್ (ಅಜೇಯ 97 ರನ್), ಪ್ರಿಯಾಂಶ್ ಆರ್ಯ (47 ರನ್) ಮತ್ತು ಶಶಾಂಕ್ ಸಿಂಗ್ (ಅಜೇಯ 44 ರನ್) ಭರ್ಜರಿ ಬ್ಯಾಟಿಂಗ್ ನಡೆಸಿದರು. ಇಂದು ಪಂಜಾಬ್ ದಾಖಲಿಸಿದ 243 ರನ್ ಐಪಿಎಲ್ ಇತಿಹಾಸದಲ್ಲಿ ಪಂಜಾಬ್ ತಂಡದ 2ನೇ ಗರಿಷ್ಠ ಮೊತ್ತವಾಗಿದೆ. ಈ ಹಿಂದೆ ಕಳೆದ 2024ರ ಆವೃತ್ತಿಯಲ್ಲಿ ಕೋಲ್ಕತಾದಲ್ಲಿ ನಡೆದ ಕೆಕೆಆರ್ ವಿರುದ್ಧದ ಪಂದ್ಯದಲ್ಲಿ ಪಂಜಾಬ್ ಕಿಂಗ್ಸ್ 262 ರನ್ ಕಲೆಹಾಕಿದ್ದು, ಆ ತಂಡದ ಪರ ಐಪಿಎಸ್ ನಲ್ಲಿ ದಾಖಲಾದ ಗರಿಷ್ಠ ಮೊತ್ತವಾಗಿದೆ. ಅಂತೆಯೇ ಇದು ಅಹಮದಾಬಾದ್ ಮೈದಾನದಲ್ಲಿ ದಾಖಲಾದ ಅತ್ಯಧಿಕ ಟಿ20 ಸ್ಕೋರ್ ಆಗಿದ್ದು, 2023 ರಲ್ಲಿ ನ್ಯೂಜಿಲೆಂಡ್ ವಿರುದ್ಧ ಭಾರತ ಗಳಿಸಿದ 234/4 ಸ್ಕೋರ್ ಅನ್ನು ಕೂಡ ಇದು ಹಿಂದಿಕ್ಕಿದೆ. ಮತ್ತು ಇದೇ ಗುಜರಾತ್ ಟೈಟನ್ಸ್ ವಿರುದ್ಧದ ಅತ್ಯಧಿಕ ಮೊತ್ತ ಇದಾಗಿದ್ದು, ಕಳೆದ ವರ್ಷ ದೆಹಲಿ ಮೈದಾನದಲ್ಲಿ ಡಿಸಿ ವಿರುದ್ಧ ಗಳಿಸಿದ 224/4 ಸ್ಕೋರ್ ಗಳಿಸಿತ್ತು.

ಶ್ರೇಯಸ್ ಅಯ್ಯರ್ ನಿಸ್ವಾರ್ಥ ಬ್ಯಾಟಿಂಗ್ ನಲ್ಲೂ ದಾಖಲೆ: ಇನ್ನು ಈ ಪಂದ್ಯದಲ್ಲಿ ಪಂಜಾಬ್ ನಾಯಕ ಶ್ರೇಯಸ್ ಅಯ್ಯರ್ ಕೇವಲ 42 ಎಸೆತಗಳಲ್ಲಿ 9 ಸಿಕ್ಸರ್ ಮತ್ತು 5 ಬೌಂಡರಿಗಳ ನೆರವಿನಿಂದ 97 ರನ್ ಸಿಡಿಸಿದರು. ಆದರೆ ಕೇವಲ 3 ರನ್ ಅಂತರದಲ್ಲಿ ಶತಕ ಮಿಸ್ ಮಾಡಿಕೊಂಡರು. ಕೊನೆಯ ಓವರ್ ನಲ್ಲಿ ಅಯ್ಯರ್ ಗೆ ಶತಕ ಸಿಡಿಸುವ ಅವಕಾಶ ವಿತ್ತಾದರೂ ಅಯ್ಯರ್ ಮತ್ತೊಂದು ಬದಿಯಲ್ಲಿ ಭರ್ಜರಿ ಬ್ಯಾಟಿಂಗ್ ಮಾಡುತ್ತಿದ್ದ ಶಶಾಂಕ್ ಸಿಂಗ್ ಗೆ ಅವಕಾಶ ನೀಡಿ ತಂಡದ ಮೊತ್ತ ಹೆಚ್ಚಳಕ್ಕೆ ನೆರವಾದರು. ಕೊನೆಯ ಓವರ್ ನ 2ನೇ ಎಸೆತದಲ್ಲಿ ಶಶಾಂಕ್ ಸಿಂಗ್ ಫ್ಲಿಕ್ ಮಾಡಿ ಸಿಂಗಲ್ ನೀಡುವ ಪ್ರಯತ್ನ ಮಾಡಿದರಾದರೂ ಅಯ್ಯರ್ ಅದನ್ನೂ 2 ರನ್ ಪಡೆದು ಮತ್ತೆ ಶಶಾಂಕ್ ಗೆ ಬ್ಯಾಟಿಂಗ್ ಗೆ ಅವಕಾಶ ಮಾಡಿಕೊಟ್ಟರು. ಒಂದು ವೇಳೆ ಆ ಸಮಯದಲ್ಲಿ ಅಯ್ಯರ್ ಸಿಂಗಲ್ ಪಡೆದಿದ್ದರೆ ಅವರು ಐಪಿಎಲ್ ನ ಚೊಚ್ಚಲ ಶತಕ ಸಿಡಿಸಿರುತ್ತಿದ್ದರು.

ವಿಶ್ವದಾಖಲೆ ಬರೆದ ಪೂರನ್

ಐಪಿಎಲ್‌ನ 4ನೇ ಪಂದ್ಯದಲ್ಲಿ ಲಕ್ನೋ ಸೂಪರ್ ಜೈಂಟ್ಸ್ ಪರ ನಿಕೋಲಸ್ ಪೂರನ್) ಸಿಡಿಲಬ್ಬರದ ಬ್ಯಾಟಿಂಗ್ ಪ್ರದರ್ಶಿಸಿದ್ದಾರೆ. ವಿಶಾಖಪಟ್ಟಣದಲ್ಲಿ ನಡೆದ ಡೆಲ್ಲಿ ಕ್ಯಾಪಿಟಲ್ಸ್ ವಿರುದ್ಧದ ಈ ಪಂದ್ಯದಲ್ಲಿ 3ನೇ ಕ್ರಮಾಂಕದಲ್ಲಿ ಕಣಕ್ಕಿಳಿದ ಪೂರನ್ ಕೇವಲ 30 ಎಸೆತಗಳಲ್ಲಿ 75 ರನ್ ಸಿಡಿಸಿದ್ದರು. ಈ ವೇಳೆ ಎಡಗೈ ದಾಂಡಿಗನ ಬ್ಯಾಟ್‌ನಿಂದ ಮೂಡಿಬಂದ ಸಿಕ್ಸ್‌ಗಳ ಸಂಖ್ಯೆ ಬರೋಬ್ಬರಿ 7. ಈ ಏಳು ಸಿಕ್ಸ್‌ಗಳೊಂದಿಗೆ ಇದೀಗ ನಿಕೋಲಸ್ ಪೂರನ್ ಟಿ20 ಕ್ರಿಕೆಟ್‌ನಲ್ಲಿ ದಾಖಲೆ ಬರೆದಿದ್ದಾರೆ. ಅದು ಸಹ 600 ಸಿಕ್ಸರ್ ಗಳ ಮೈಲುಗಲ್ಲನ್ನು ಮುಟ್ಟುವ ಮೂಲಕ ಎಂಬುದು ವಿಶೇಷ. ಅಂದರೆ ಟಿ20 ಕ್ರಿಕೆಟ್ ಇತಿಹಾಸದಲ್ಲಿ ಅತ್ಯಧಿಕ ಸಿಕ್ಸ್ ಬಾರಿಸಿದ ಬ್ಯಾಟರ್‌ಗಳ ಪಟ್ಟಿಯಲ್ಲಿ ಪೂರನ್ ಇದೀಗ 4ನೇ ಸ್ಥಾನಕ್ಕೇರಿದ್ದಾರೆ. ಟಿ20 ಕ್ರಿಕೆಟ್‌ನಲ್ಲಿ ಈವರೆಗೆ 385 ಪಂದ್ಯಗಳನ್ನಾಡಿರುವ ನಿಕೋಲಸ್ ಪೂರನ್ ಒಟ್ಟು 359 ಇನಿಂಗ್ಸ್‌ಗಳಲ್ಲಿ ಬ್ಯಾಟ್ ಬೀಸಿದ್ದಾರೆ. ಈ ವೇಳೆ ಅವರ ಬ್ಯಾಟ್‌ನಿಂದ ಬರೋಬ್ಬರಿ 606 ಸಿಕ್ಸ್‌ಗಳು ಮೂಡಿಬಂದಿವೆ. ಈ ಮೂಲಕ ಟಿ20 ಕ್ರಿಕೆಟ್‌ನಲ್ಲಿ 600+ ಸಿಕ್ಸ್ ಬಾರಿಸಿದ 4ನೇ ಬ್ಯಾಟರ್ ಎನಿಸಿಕೊಂಡಿದ್ದಾರೆ. ಇದಕ್ಕೂ ಮುನ್ನ ಟಿ20 ಕ್ರಿಕೆಟ್‌ನಲ್ಲಿ 600+ ಸಿಕ್ಸ್ ಸಿಡಿಸಿದ ಮೂವರು ಬ್ಯಾಟರ್‌ಗಳು ಸಹ ವೆಸ್ಟ್ ಇಂಡೀಸ್ ದಾಂಡಿಗರು ಎಂಬುದು ವಿಶೇಷ. ಈ ಪಟ್ಟಿಯಲ್ಲಿ ಯೂನಿವರ್ಸ್ ಬಾಸ್ ಖ್ಯಾತಿಯ ಕ್ರಿಸ್ ಗೇಲ್ ಅಗ್ರಸ್ಥಾನದಲ್ಲಿದ್ದರೆ, ಕೀರನ್ ಪೊಲಾರ್ಡ್ (908) ದ್ವಿತೀಯ ಸ್ಥಾನದಲ್ಲಿದ್ದಾರೆ. ಇನ್ನು 733 ಸಿಕ್ಸ್ ಬಾರಿಸಿರುವ ಆಂಡ್ರೆ ರಸೆಲ್ ಮೂರನೇ ಸ್ಥಾನದಲ್ಲಿದ್ದಾರೆ. ಇದೀಗ 606 ಸಿಕ್ಸ್‌ಗಳೊಂದಿಗೆ ವೆಸ್ಟ್ ಇಂಡೀಸ್‌ನವರೇ ಆಗಿರುವ ಪೂರನ್ 4ನೇ ಸ್ಥಾನ ಅಲಂಕರಿಸಿದ್ದಾರೆ.

ಸೊನ್ನೆ ಸುತ್ತಿದರೂ 2 ಕೋಟಿ ರೂ. ಪಡೆದ ರಿಷಭ್ ಪಂತ್



ಲಕ್ನೋ ಸೂಪರ್ ಜೈಂಟ್ಸ್ ತಂಡದ ನೂತನ ನಾಯಕ ರಿಷಭ್ ಪಂತ್ ಮೊದಲ ಪಂದ್ಯದಲ್ಲೇ ಮುಗ್ಗರಿಸಿದ್ದಾರೆ. ಅದು ಸಹ ಬ್ಯಾಟರ್ ಆಗಿ ಹಾಗೂ ನಾಯಕನಾಗಿ. ವಿಶಾಖಪಟ್ಟಣದ ವೈಎಸ್‌ಆರ್ ಸ್ಟೇಡಿಯಂನಲ್ಲಿ ನಡೆದ ಡೆಲ್ಲಿ ಕ್ಯಾಪಿಟಲ್ಸ್ ವಿರುದ್ಧದ ಈ ಪಂದ್ಯದಲ್ಲಿ ಟಾಸ್ ಸೋತು ಮೊದಲು ಬ್ಯಾಟ್ ಮಾಡಿದ ಲಕ್ನೋ ಸೂಪರ್ ಜೈಂಟ್ಸ್ 133 ರನ್‌ಗಳಿಗೆ 2 ವಿಕೆಟ್ ಕಳೆದುಕೊಂಡಿತು. ಈ ಹಂತದಲ್ಲಿ ನಾಲ್ಕನೇ ಕ್ರಮಾಂಕದಲ್ಲಿ ಕಣಕ್ಕಿಳಿದ ರಿಷಭ್ ಪಂತ್ 5 ಎಸೆತಗಳನ್ನು ಎದುರಿಸಿದರೂ ಒಂದೇ ಒಂದು ರನ್ ಕಲೆಹಾಕಲು ಸಾಧ್ಯವಾಗಿರಲಿಲ್ಲ. ಅಲ್ಲದೆ 6ನೇ ಎಸೆತದಲ್ಲಿ ಭರ್ಜರಿ ಹೊಡೆತಕ್ಕೆ ಮುಂದಾಗಿ ಬೌಂಡರಿ ಲೈನ್‌ನಲ್ಲಿ ಕ್ಯಾಚ್ ನೀಡಿದರು. ಅಲ್ಲಿಗೆ ಶೂನ್ಯದೊಂದಿಗೆ ರಿಷಭ್ ಪಂತ್ ಅವರ ಇನಿಂಗ್ಸ್ ಕೊನೆಗೊಂಡಿತು. ಹೀಗೆ ಲಕ್ನೋ ಸೂಪರ್ ಜೈಂಟ್ಸ್ ಪರ ಚೊಚ್ಚಲ ಪಂದ್ಯದಲ್ಲೇ ಸೊನ್ನೆ ಸುತ್ತಿದರೂ ಪಂತ್‌ಗೆ 2 ಕೋಟಿ ರೂ. ಲಭಿಸಿರುವುದು ವಿಶೇಷ. ಅಂದರೆ ಈ ಬಾರಿಯ ಮೆಗಾ ಹರಾಜಿನ ಮೂಲಕ ಎಲ್‌ಎಸ್‌ಜಿ ಫ್ರಾಂಚೈಸಿಯು ಪಂತ್ ಅವರನ್ನು ಬರೋಬ್ಬರಿ 27 ಕೋಟಿ ರೂ.ಗೆ ಖರೀದಿಸಿದೆ. ಇದರ ಜೊತೆಗೆ 14 ಪಂದ್ಯದಲ್ಲಿ ಕಣಕ್ಕಿಳಿದ ಆಟಗಾರರಿಗೆ ಬಿಸಿಸಿಐ ಕಡೆಯಿಂದ 1.05 ಕೋಟಿ ರೂ. ಪಂದ್ಯ ಶುಲ್ಕ ಸಿಗಲಿದೆ. ಅದರಂತೆ ಈ ಬಾರಿಯ ಐಪಿಎಲ್ ಮೂಲಕ ರಿಷಭ್ ಪಂತ್ ಪಡೆಯಲಿರುವ ಒಟ್ಟು ಮೊತ್ತ 28.05 ಕೋಟಿ ರೂ. ಅಂದರೆ ಒಂದು ಪಂದ್ಯಕ್ಕೆ ಪಂತ್‌ಗೆ ಸಿಗಲಿರುವುದು ಬರೋಬ್ಬರಿ 2 ಕೋಟಿ ರೂ. ಇದೀಗ ಸೊನ್ನೆ ಸುತ್ತಿದರೂ ರಿಷಭ್ ಮೊದಲ ಮ್ಯಾಚ್‌ನಿಂದ ಎರಡು ಕೋಟಿ ರೂ. ಅನ್ನು ಜೇಬಿಗಿಳಿಸಿಕೊಂಡಿದ್ದಾರೆ. ಇನ್ನು ಈ ಪಂದ್ಯದಲ್ಲಿ ಟಾಸ್ ಗೆದ್ದ ಡೆಲ್ಲಿ ಕ್ಯಾಪಿಟಲ್ಸ್ ತಂಡದ ನಾಯಕ ಅಕ್ಷರ್ ಪಟೇಲ್ ಬೌಲಿಂಗ್ ಆಯ್ದುಕೊಂಡಿದ್ದರು. ಅದರಂತೆ ಮೊದಲು ಬ್ಯಾಟ್ ಮಾಡಿದ ಲಕ್ನೋ ಸೂಪರ್ ಜೈಂಟ್ಸ್ ತಂಡವು ನಿಗದಿತ 20 ಓವರ್‌ಗಳಲ್ಲಿ 209 ರನ್ ಕಲೆಹಾಕಿತು.

ಡೇವಿಡ್ ವಾರ್ನರ್‌ಗೆ ಒಲಿದ ನಾಯಕತ್ವ..!

ಈ ಬಾರಿಯ ಇಂಡಿಯನ್ ಪ್ರೀಮಿಯರ್ ಲೀಗ್ ಮೆಗಾ ಹರಾಜಿನಲ್ಲಿ ಬಿಕರಿಯಾಗದೇ ಉಳಿದ ಸ್ಟಾರ್ ಆಟಗಾರರಲ್ಲಿ ಡೇವಿಡ್ ವಾರ್ನರ್ ಕೂಡ ಒಬ್ಬರು. 2 ಕೋಟಿ ರೂ. ಮೂಲ ಬೆಲೆ ಘೋಷಿಸಿದ್ದ ವಾರ್ನರ್ ಅವರನ್ನು ಯಾವುದೇ ಫ್ರಾಂಚೈಸಿ ಖರೀದಿಸಿರಲಿಲ್ಲ. ಇತ್ತ ಐಪಿಎಲ್‌ನಲ್ಲಿ ಅವಕಾಶ ಕೈ ತಪ್ಪುತ್ತಿದ್ದಂತೆ ವಾರ್ನರ್ ಪಿಎಸ್‌ಎಲ್‌ನತ್ತ ಮುಖ ಮಾಡಿದ್ದರು.

ಅದರಂತೆ ಪಾಕಿಸ್ತಾನ್ ಸೂಪರ್ ಲೀಗ್ ಸೀಸನ್-10 ರ ಡ್ರಾಫ್ಟ್‌ನಲ್ಲಿ ಕಾಣಿಸಿಕೊಂಡಿದ್ದ ಡೇವಿಡ್ ವಾರ್ನರ್ ಅವರನ್ನು ಕರಾಚಿ ಕಿಂಗ್ಸ್ ಫ್ರಾಂಚೈಸಿ ಆಯ್ಕೆ ಮಾಡಿಕೊಂಡಿದೆ. ಅಲ್ಲದೆ ಇದೀಗ ವಾರ್ನರ್ ಅವರಿಗೆ ಕರಾಚಿ ಕಿಂಗ್ಸ್ ತಂಡದ ನಾಯಕತ್ವವನ್ನು ಸಹ ನೀಡಲಾಗಿದೆ. ಇನ್ನು ಕರಾಚಿ ಕಿಂಗ್ಸ್ ತಂಡದಲ್ಲಿ ಡೇವಿಡ್ ವಾರ್ನರ್ ಅವರೊಂದಿಗೆ ಕೇನ್ ವಿಲಿಯಮ್ಸನ್ ಅವರು ಸಹ ಕಾಣಿಸಿಕೊಳ್ಳಲಿದ್ದಾರೆ. ಇಲ್ಲಿ ವಾರ್ನರ್ ಆಟಗಾರನಾಗಿ ಕಣಕ್ಕಿಳಿದರೆ, ವಿಲಿಯಮ್ಸನ್ ಹೆಚ್ಚುವರಿ ಆಟಗಾರನಾಗಿ ತಂಡದಲ್ಲಿ ಇರಲಿದ್ದಾರೆ. ಅಂದರೆ ಯಾವುದಾದರೂ ಆಟಗಾರ ಹೊರಗುಳಿದರೆ ಕೇನ್ ವಿಲಿಯಮ್ಸನ್‌ಗೆ ಅವಕಾಶ ದೊರೆಯಲಿದೆ. ವಿಶೇಷ ಎಂದರೆ ಈ ಹಿಂದೆ ಡೇವಿಡ್ ವಾರ್ನರ್ ಹಾಗೂ ಕೇನ್ ವಿಲಿಯಮ್ಸನ್ ಐಪಿಎಲ್‌ನಲ್ಲಿ ಜೊತೆಯಾಗಿ ಆಡಿದ್ದರು. 2015 ರಿಂದ 2020 ರವರೆಗೆ ಸನ್ ರೈಸರ್ಸ್ ಹೈದರಾಬಾದ್ ಪರ ಆಡಿದ್ದ ಈ ಜೋಡಿಯು ಇದೀಗ ಪಾಕಿಸ್ತಾನ್ ಸೂಪರ್ ಲೀಗ್‌ನಲ್ಲಿ ಕರಾಚಿ ಕಿಂಗ್ಸ್ ತಂಡದ ಪರ ಕಣಕ್ಕಿಳಿಯಲು ಇಬ್ಬರು ದಿಗ್ಗಜರು ಸಜ್ಜಾಗಿದ್ದಾರೆ.

ಪಿಎಸ್‌ಎಲ್ ನತ್ತ ಮುಖ ಮಾಡಿದ್ದ ವಾರ್ನರ್

ಡಾಕ್ಟರೇಟ್ ಪದವಿ ಪಡೆದ ಮೇಘನಾ

'ಚಾರ್‌ಮಿನಾರ್' ನಟಿ ಮೇಘನಾ ಗಾಂವ್ಕರ್ ಅಭಿಮಾನಿಗಳಿಗೆ ಗುಡ್ ನ್ಯೂಸ್ ಕೊಟ್ಟಿದ್ದಾರೆ. 6 ವರ್ಷಗಳ ಸತತ ಶ್ರಮಕ್ಕೆ ಇದೀಗ ಫಲ ಸಿಕ್ಕಿದೆ. ಮುಂಬೈ ವಿಶ್ವವಿದ್ಯಾಲಯದಲ್ಲಿ ಸಿನಿಮಾ ಮತ್ತು ಸಾಹಿತ್ಯ ವಿಷಯದಲ್ಲಿ ನಟಿ ಡಾಕ್ಟರೇಟ್ ಪದವಿ ಪಡೆದಿದ್ದಾರೆ. ಈ ಸಂಭ್ರಮವನ್ನು ಮೇಘನಾ ಸೋಶಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದಾರೆ. ತಾವು ಪಿಎಚ್‌ಡಿ ಮಾಡಿದ ಜರ್ನಿ ಬಗ್ಗೆ ಮೇಘನಾ ಮಾತನಾಡಿ, ಇವತ್ತು ನಾನು ನಿಮ್ಮೆಲ್ಲರ ಜೊತೆ ಹೆಮ್ಮೆಯ ವಿಚಾರವನ್ನು ಹಂಚಿಕೊಳ್ಳುತ್ತಿದ್ದೇನೆ. ನಿಮಗೆಲ್ಲರಿಗೂ ಗೊತ್ತಿರುವ ಹಾಗೆ ಕಳೆದ 6 ವರ್ಷಗಳಿಂದ ನಾನು ನನ್ನ ಪಿಎಚ್‌ಡಿ ಮಾಡುತ್ತಿದ್ದೆ. 2024ರ ಅಕ್ಟೋಬರ್‌ನಲ್ಲಿ ನಾನು ನನ್ನ ಪಿಎಚ್‌ಡಿ ವರದಿಯನ್ನು ಯಶಸ್ವಿಯಾಗಿ ಸಲ್ಲಿಸಿದ್ದೆ. ಕಳೆದ ವಾರ ನನ್ನ ವೈವಾ ಕೂಡ ಆಯ್ತು. ಇವತ್ತು ನಾನು ನನ್ನ ಡಾಕ್ಟರೇಟ್ ಪದವಿಯನ್ನು ಹೆಮ್ಮೆಯಿಂದ ಸ್ವೀಕರಿಸಿದ್ದೇನೆ. ಇದು ತುಂಬಾ ವಿಶೇಷವಾದದ್ದು. ಯಾಕೆಂದರೆ ಈ ಪಿಎಚ್‌ಡಿ ಪಯಣ ಅಷ್ಟು ಸುಲಭ ಆಗಿರಲಿಲ್ಲ ಎಂದಿದ್ದಾರೆ. ನಾನು ನನ್ನ ಈ ಪಿಎಚ್‌ಡಿ ಡಾಕ್ಟರೇಟ್ ಪದವಿಯನ್ನು ನನ್ನ ತಂದೆಗೆ ಅರ್ಪಿಸುತ್ತೇನೆ. ಯಾಕೆಂದರೆ ನಾನು ಪಿಎಚ್‌ಡಿ ಮಾಡಬೇಕು ಎನ್ನುವುದು ನನ್ನ ತಂದೆಯ ಕನಸಾಗಿತ್ತು. ನನ್ನ ಪಿಎಚ್‌ಡಿ ವಿಷಯ ಸಿನಿಮಾ ಮತ್ತು ಸಾಹಿತ್ಯ ಆಗಿತ್ತು. ಈ ವಿಷಯ ನನಗೆ ತುಂಬಾ ಹತ್ತಿರವಾಗಿತ್ತು. ಈ ವಿಡಿಯೋ ಮೂಲಕ ನಾನು ನಿಮಗೆಲ್ಲರಿಗೂ ಧನ್ಯವಾದ ಹೇಳುತ್ತೇನೆ. ಯಾಕೆಂದರೆ ನಾನು ಮೊದಲು ಪಿಎಚ್‌ಡಿ ಬಗ್ಗೆ ಹೇಳಿಕೊಂಡ ದಿನದಿಂದ ಈವರೆಗೆ ನೀವೆಲ್ಲರೂ ನನಗೆ ತುಂಬಾ ಬೆಂಬಲಿಸಿದ್ದೀರಿ. ಈ ಪಯಣದಲ್ಲಿ ನನ್ನ ಜೊತೆ ಯಲ್ಲಿ ನಿಂತಿರುವುದಕ್ಕಾಗಿ ನಿಮಗೆ ತುಂಬಾ ಧನ್ಯವಾದಗಳು ಎಂದಿದ್ದಾರೆ.

ನಟಿಯ ಸಾಧನೆಗೆ ಅಭಿಮಾನಿಗಳು, ಸ್ಯಾಂಡಲ್‌ವುಡ್ ಕಲಾವಿದರು ಮೆಚ್ಚುಗೆ ಸೂಚಿಸಿದ್ದಾರೆ. ಅಂದಹಾಗೆ, ಚಾರ್‌ಮಿನಾರ್, ಭೂ ಮಂತರ್, ದಿ ಜಡ್ಜ್‌ಮೆಂಟ್, ಶಿವಾಜಿ ಸುರತ್ಕಲ್ 2 ಸೇರಿದಂತೆ ಹಲವು ಸಿನಿಮಾಗಳಲ್ಲಿ ಮೇಘನಾ ನಾಯಕಿಯಾಗಿ ನಟಿಸಿದ್ದಾರೆ.

ಸಂಸತ್ತಿನಲ್ಲಿ ಛಾವಾ ಸಿನಿಮಾ



ಇದೇ ಮಾ.27 ರಂದು ಸಂಸತ್ತಿನಲ್ಲಿ ಪ್ರಧಾನಿ ಮೋದಿ ಸೇರಿದಂತೆ ಕೇಂದ್ರ ಸಚಿವರು ವಿಕ್ಕಿ ಕೌಶಲ್ ನಟನೆಯ 'ಛಾವಾ' ಸಿನಿಮಾ ವೀಕ್ಷಿಸಲಿದ್ದಾರೆ.

ಮರಾಠಾ ದೊರೆ ಛತ್ರಪತಿ ಸಂಭಾಜಿ ಮಹಾರಾಜರ ಜೀವನಾಧಾರಿತ 'ಛಾವಾ' ಸಿನಿಮಾವನ್ನು ಸಂಸತ್ತಿನ ಗ್ರಂಥಾಲಯ ಕಟ್ಟಡದಲ್ಲಿರುವ ಬಾಲಯೋಗಿ ಸಭಾಂಗಣದಲ್ಲಿ ಪ್ರದರ್ಶಿಸಲಾಗುವುದು ಎಂದು ಮೂಲಗಳು ತಿಳಿಸಿವೆ. ಛಾವಾ ಸಿನಿಮಾದ ವಿಶೇಷ ಪ್ರದರ್ಶನದಲ್ಲಿ ಪ್ರಧಾನಿ ಮೋದಿ, ಗೃಹ ಸಚಿವ ಅಮಿತ್ ಸೇರಿದಂತೆ ಎಲ್ಲಾ ಕೇಂದ್ರ ಸಚಿವರು ಭಾಗಿಯಾಗುವ ನಿರೀಕ್ಷೆಯಿದೆ. ಜೊತೆಗೆ ಛಾವಾ ಸಿನಿಮಾದಲ್ಲಿ ಸಂಭಾಜಿ ಮಹಾರಾಜರ ಪಾತ್ರದಲ್ಲಿ ಕಾಣಿಸಿಕೊಂಡಿರುವ ವಿಕ್ಕಿ ಕೌಶಲ್ ಹಾಗೂ ಇಡೀ ಸಿನಿಮಾ ತಂಡವು ಹಾಜರಾಗುವ ನಿರೀಕ್ಷೆಯಿದೆ. ಇದೇ ಫೆ.14 ರಂದು ಲಕ್ಷ್ಮಣ್ ಉಟೇಕರ್ ನಿರ್ದೇಶನದ ಛಾವಾ ಸಿನಿಮಾ ದೇಶ್ಯಾದ್ಯಂತ ಬಿಡುಗಡೆಯಾಗಿತ್ತು. ಈ ಸಿನಿಮಾ ಮರಾಠಾ ದೊರೆ ಛತ್ರಪತಿ ಸಂಭಾಜಿ ಮಹಾರಾಜರ ಜೀವನವನ್ನು ಆಧರಿಸಿದೆ. ಅವರ ಧೈರ್ಯ ಮತ್ತು ಔರಂಗಜೇಬನಿಂದಾಗಿ ಅನುಭವಿಸಿದ ಹಿಂಸೆಯನ್ನು ವಿವರಿಸುತ್ತದೆ. ದೇಶ್ಯಾದ್ಯಂತ ಸಂಚಲನ ಸೃಷ್ಟಿಸಿದ್ದ ಈ ಸಿನಿಮಾ ಕುರಿತು ಕಳೆದ ಒಂದು ತಿಂಗಳ ಹಿಂದೆ ದೆಹಲಿಯಲ್ಲಿ ನಡೆದಿದ್ದ ಅಖಿಲ ಭಾರತೀಯ ಮರಾಠಿ ಸಾಹಿತ್ಯ ಸಮ್ಮೇಳನದ ಭಾಷಣದಲ್ಲಿ ಪ್ರಧಾನಿ ಮೋದಿ ಮೆಚ್ಚುಗೆ ವ್ಯಕ್ತಪಡಿಸಿದ್ದರು.

'ಕರಳೆ' ಚಿತ್ರದ ಕಥೆ ಹೇಳೋಕೆ ಐಂದ ನಿರ್ದೇಶಕ

ಮನಕಲಕುವ ದೃಶ್ಯಗಳು ಚಿತ್ರದಲ್ಲಿ ಇರಲಿವೆ

'ಕಲಿವೀರ', 'ಕನ್ನಡ ದೇಶದೊಳ್' ಚಿತ್ರ ಮಾಡಿದ್ದ ನಿರ್ದೇಶಕ ಅವಿರಾಮ್ ಕಂಠೀರವ ಮತೊಮ್ಮೆ ವಿಭಿನ್ನ ಕಥೆ ಹೊಂದಿರುವ 'ಕರಳೆ' ಚಿತ್ರದ ಕಥೆ ಹೇಳೋಕೆ ಸಜ್ಜಾಗಿದ್ದಾರೆ. ಇದು ನೈಜ ಘಟನೆ ಆಧಾರಿತ ಚಿತ್ರವಾಗಿದೆ. ಈಗಾಗಲೇ ಎರಡು ಹಂತದ ಚಿತ್ರೀಕರಣ ಪೂರ್ಣಗೊಳಿಸಿರುವ ಚಿತ್ರತಂಡ ಮೂರನೇ ಹಂತದ ಚಿತ್ರೀಕರ